ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com  E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 82 ಸಂಚಿಕೆ- 82 | PAGE-8 ಪುಟ-8 | ಮಂಗಳವಾರ 06.05.2025 | RS.2/- ಬೆಲೆ 2/-

# ಪಾಕ್ -ಭಾರತ ಯುದ್ಧ ಭೀತಿ

## ಮೇ.7ರಂದು ಮಾಕ್ ಡ್ರಿಲ್ ನಡೆಸಲು ರಾಜ್ಯಗಳಿಗೆ ಕೇಂದ್ರದ ಸೂಚನೆ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.5: ಪಹಲ್ಗಾಮ್ ಉಗ್ರರ ದಾಳಿ ಬಳಿಕ ಭಾರತ–ಪಾಕಿಸ್ತಾನ ನಡುವೆ ಯುದ್ಧದ ಭೀತಿ ಹೆಚ್ಚಾಗುತ್ತಲೇ ಇದೆ. ಉಭಯ ರಾಷ್ಟ್ರಗಳು ಪೂರ್ವಸಿದ್ಧತೆ ಮಾಡಿಕೊಳ್ಳುತ್ತಿವೆ. ಅದರ ಮುಂದುವರಿದ ಭಾಗವಾಗಿ ಮೇ 7ರಂದು ದೇಶಾದ್ಯಂತ ಮಾಕ್ ಡ್ರಿಲ್ ನಡೆಸುವಂತೆ ನಡೆಸುವಂತೆ ಕೇಂದ್ರ ಗೃಹ ಸಚಿವಾಲಯವು ಹಲವು ರಾಜ್ಯಗಳಿಗೆ ಸೂಚಿಸಿದೆ ಎಂದು ಸರ್ಕಾರಿ ಮೂಲಗಳು ಸೋಮವಾರ ತಿಳಿಸಿವೆ.

ನಾಗರಿಕರ ರಕ್ಷಣೆ ಸಂಬಂಧ ಭದ್ರತಾ ತಾಲೀಮು ನಡೆಸುವಂತೆ ಕೇಂದ್ರ ಗೃಹ ಸಚಿವಾಲಯ ಎಲ್ಲ ರಾಜ್ಯಗಳಿಗೆ ಸೂಚನೆ ನೀಡಿದೆ. ಒಟ್ಟು 5 ಹಂತಗಳಲ್ಲಿ ಮಾಕ್ ಡ್ರಿಲ್ (ಅಣುಕು ಕಾರ್ಯಾಚರಣೆ) ನಡೆಸುವಂತೆ ಸೂಚಿಸಿದೆ ಎಂದು ವರದಿಯಾಗಿದೆ.

ವಾಯುದಾಳಿಯ ಸೈರನ್ ವ್ಯವಸ್ಥೆ ಇರುವಂತೆ ನೋಡಿಕೊಳ್ಳಿ ಮತ್ತು "ಪ್ರತಿಕೂಲ ದಾಳಿ"ಯ ಸಂದರ್ಭದಲ್ಲಿ ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಪರಿಣಾಮಕಾರಿ ರಕ್ಷಣಾ ಅಂಶಗಳ ಕುರಿತು ತರಬೇತಿ ನೀಡಬೇಕು ಎಂದು ಸೂಚಿಸಲಾಗಿದೆ.

ಪ್ರತಿಕೂಲ ದಾಳಿಯ ಸಂದರ್ಭದಲ್ಲಿ ಸಿದ್ಧತೆಯನ್ನು ಪರೀಕ್ಷಿಸಲು ಮತ್ತು ಸಾರ್ವಜನಿಕ ಜಾಗೃತಿಯನ್ನು ಹೆಚ್ಚಿಸಲು ಮೇ 7ರ ಬುಧವಾರ ಸಮಗ್ರ ನಾಗರಿಕ ರಕ್ಷಣಾ ಅಣಕು ಕವಾಯತುಗಳನ್ನು ನಡೆಸುವಂತೆ ಗೃಹ ಸಚಿವಾಲಯ ರಾಜ್ಯಗಳಿಗೆ ನಿರ್ದೇಶನ ನೀಡಿದೆ.

ಕ್ರ್ಯಾಶ್ ಬ್ಲ್ಯಾಕೌಟ್ ಕ್ರಮಗಳನ್ನು ಒದಗಿಸಬೇಕು, ಪ್ರಮುಖ ಸ್ಥಾವರಗಳು ಮತ್ತು ಪ್ರಮುಖ ಕಟ್ಟಡಗಳನ್ನು ಮರೆಮಾಚುವಿಕೆ ಮತ್ತು ನಾಗರಿಕರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ ನಡೆಸುವ ಬಗ್ಗೆ ಪೂರ್ವಾಭ್ಯಾಸ ಮಾಡಬೇಕು.

ಪಂಜಾಬ್ ಗಡಿಯಲ್ಲಿ ಸೇನೆಯಿಂದ ಮಾಕ್ ಡ್ರಿಲ್:ಯುದ್ಧ ಭೀತಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪಂಜಾಬ್‌ನ ಫಿರೋಜ್ ಪುರದಲ್ಲಿ ಭಾನುವಾರ (ಮೇ 5) ರಾತ್ರಿ 9 ಗಂಟೆಯಿಂದ 9:30ರ ವರೆಗೆ ಸೂಕ್ಷ್ಮ



ಪ್ರದೇಶದಲ್ಲಿ ಲೈಟ್ಸ್ ಆಫ್ ಮಾಡಿ ಮಾಕ್ ಡ್ರಿಲ್ ನಡೆಸಲಾಯಿತು. ನಿಗದಿತ ತಾಲೀಮು ಸಮಯದಲ್ಲಿ ವಿದ್ಯುತ್ ಕಡಿತಗೊಳಿಸುವಂತೆ ಅಧಿಕಾರಿಗಳು ಪಂಜಾಬ್ ರಾಜ್ಯ ವಿದ್ಯುತ್ ನಿಗಮ ಲಿಮಿಟೆಡ್ (ಪಿಎಸ್‌ಪಿಸಿಎಲ್)ಗೆ ಮುಂಚಿತವಾಗಿಯೇ ತಿಳಿಸಲಾಗಿತ್ತು. ಹಾಗಾಗಿ ಸಂಪೂರ್ಣ ವಿದ್ಯುತ್ ಕಡಿತಗೊಳಿಸಿ ಕಠಿಣ ತಾಲೀಮು ನಡೆಸಲಾಯಿತು. ಈ ಮೂಲಕ ರಾತ್ರಿ ಕಾರ್ಯಾಚರಣೆಗೆ ಭದ್ರತಾ ವ್ಯವಸ್ಥೆಯನ್ನು ಖಚಿತಪಡಿಸಿಕೊಳ್ಳಲಾಯಿತು.

ಮುಂದುವರಿದ ಮೋದಿ ಸರಣಿ ಸಭೆ:ಇನ್ನು ಉಗ್ರರ ಸಂಹಾರಕ್ಕೆ ಶಪಥಗೈದಿರುವ ಪ್ರಧಾನಿ ನರೇಂದ್ರ ಮೋದಿ, ಭದ್ರತಾ ಅಧಿಕಾರಿಗಳ ಜತೆಗಿನ ಸರಣಿ ಸಭೆ ಮುಂದುವರಿಸಿದ್ದಾರೆ. ಇವತ್ತು ಸಹ ಹೈವೋಲ್ಟೇಜ್ ಸಭೆ ನಡೆಸಿದ್ದಾರೆ. ಕೇಂದ್ರ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವ್ರು ಪ್ರಧಾನಿಯವ್ರನ್ನು ಭೇಟಿಯಾಗಿ ಮಹತ್ವದ ಮಾತುಕತೆ ನಡೆಸಿದ್ದಾರೆ. ನಿನ್ನೆಯಷ್ಟೇ ರಾಜನಾಥ್ ಸಿಂಗ್ ದೇಶ ಏನು ಬಯಸುತ್ತೋ ಅದನ್ನೇ ಮಾಡ್ತೇವೆ ಅಂತ ಹೇಳಿದ ಬೆನ್ನಲ್ಲೇ ಇವತ್ತು ರಕ್ಷಣಾ ಕಾರ್ಯದರ್ಶಿ, ಎನ್‌ಎಸ್‌ಎ ಭೇಟಿಯಾಗಿರೋದು ಭಾರೀ ಮಹತ್ವ, ಕುತೂಹಲಕ್ಕೆ ಕಾರಣವಾಗಿದೆ.ಭಾರತಕ್ಕೆ

(2ನೇ ಪುಟ ನೋಡಿ)

# ಒಳಮೀಸಲಾತಿ ಜಾರಿಗೆ ಬದ್ಧ

ಮಲ್ಲಮ್ಮ ನುಡಿ ವಾರ್ತೆ ಮೂರು ಹಂತದ ಸಮೀಕ್ಷೆ : ಪೂರ್ಣವಾಗಿ ತೊಡಗಿಸಿಕೊಂಡು ಮಾಹಿತಿ ನೀಡಿ: ಸಿ.ಎಂ ಮನವಿ

ಬೆಂಗಳೂರು, ಮೇ 5:ಚುನಾವಣಾ ಪ್ರಣಾಳಿಕೆಯಲ್ಲಿ ನಾವು ಘೋಷಿಸಿದ್ದಂತೆ ಒಳಮೀಸಲಾತಿ ಜಾರಿಗೆ ನಾವು ಬದ್ಧರಾಗಿದ್ದೇವೆ. ಈ ದಿಕ್ಕಿನಲ್ಲಿ ಇವತ್ತಿನಿಂದ ಮಹತ್ವದ ಹೆಜ್ಜೆ ಇಟ್ಟಿದ್ದೇವೆ. ಮೂರೂ ಹಂತಗಳಲ್ಲಿ ವೈಜ್ಞಾನಿಕ ದತ್ತಾಂಶ ಸಂಗ್ರಹ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

"ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ–2025" ಕುರಿತಂತೆ ವಿಧಾನಸೌಧದ ಸಮ್ಮೇಳನ ಕೊಠಡಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಡಾ. ನಾಗಮೋಹನ್ ದಾಸ್ ಅವರ ಅಧ್ಯಕ್ಷತೆಯಲ್ಲಿ ಏಕಸದಸ್ಯ ಆಯೋಗ ರಚನೆ ಮಾಡಿದ್ದೆವು. ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿ ಕುರಿತು ಸಮಿತಿ ವರದಿ ನೀಡಿದೆ. ಸಂವಿಧಾನದ 341ನೇ ವಿಧಿಯ



ಅಡಿಯಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ 101 ಜಾತಿಗಳನ್ನು ಗುರುತಿಸಲಾಗಿದೆ. ಈ ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು ಸಂಗ್ರಹಿಸಲು ಸಮೀಕ್ಷೆ ನಡೆಸಲು ಸಮಿತಿ ಶಿಫಾರಸ್ಸು ಮಾಡಿದೆ.

2011ರ ಜನಗಣತಿ ಆಧಾರದಲ್ಲಿ ಸದಾಶಿವ ಆಯೋಗ ಪರಿಶಿಷ್ಟ ಜಾತಿ ಸಮುದಾಯಗಳ ಜನಸಂಖ್ಯೆಯನ್ನು ಗುರುತಿಸಿತ್ತು. 1–8–2024 ರಲ್ಲಿ ಸುಪ್ರೀಂ ಕೋರ್ಟ್ ಒಳ ಮೀಸಲಾತಿ ಪರವಾಗಿ ನೀಡಿರುವ ಆದೇಶದಂತೆ ನಾವು ಮುಂದುವರೆದೆವು.

ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಸಮುದಾಯದಲ್ಲಿ ಯಾರು ಎಷ್ಟು ಮಂದಿ ಇದ್ದಾರೆ ಎನ್ನುವುದು ಖಚಿತವಾಗಿ ಗೊತ್ತಾಗಬೇಕಿದೆ. ಬಲಗೈ ಸಮುದಾಯ, ಎಡಗೈ ಸಮುದಾಯ ಎಷ್ಟಿದೆ ಎನ್ನುವುದು ವೈಜ್ಞಾನಿಕವಾಗಿ ತಿಳಿಯಬೇಕಿದೆ. 101 ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿ ಕೊಡುವಾಗ ನಿರ್ದಿಷ್ಟ ಅಂಕಿ ಅಂಶಗಳು ಬೇಕಾಗುತ್ತವೆ. ಇಂದಿನಿಂದ ಮೇ 17 ರವರೆಗೆ ಮನೆ ಮನೆಗೆ ಹೋಗಿ ದತ್ತಾಂಶ ಸಂಗ್ರಹಿಸುವ ಕೆಲಸವಾಗುತ್ತದೆ. ಸುಮಾರು 65 ಸಾವಿರ ಶಿಕ್ಷಕರನ್ನು ಇದಕ್ಕಾಗಿ ನಿಯೋಜಿಸಲಾಗಿದೆ. 10–12 ಮಂದಿ ಶಿಕ್ಷಕರಿಗೆ ಒಬ್ಬ ಮೇಲ್ವಿಚಾರಕ ಇರುತ್ತಾರೆ. ಮನೆ ಮನೆ ಭೇಟಿ ಕೊಡುವ ಜೊತೆಗೆ, ಮೊದಲ ಹಂತದಲ್ಲಿ 5–5–25 ರಿಂದ 17–5–2025, 19–5–2025 ರಿಂದ 21–5–2025 ರವರೆಗೆ ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಸಮೀಕ್ಷೆ ನಡೆಯುತ್ತದೆ. ಯಾರಾದರೂ ಬಿಟ್ಟು ಹೋಗಿದ್ದರೆ ಶಿಬಿರಕ್ಕೆ ಬಂದು ಸೇರಿಸಬಹುದು.

ಮೂರನೇ ಹಂತದಲ್ಲಿ 19–5–2025 ರಿಂದ 22–5–2025 ರವರೆಗೆ ಆನ್ಲೈನ್ ಮೂಲಕ ಸ್ವಯಂ

(2ನೇ ಪುಟ ನೋಡಿ)

# ವಕ್ಫ್ ಕಾಯ್ದೆ ವಿರುದ್ಧ ಅರ್ಜಿಗಳ ವಿಚಾರಣೆ ಮೇ.15ಕ್ಕೆ ಮುಂದೂಡಿಕೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.5: ವಿವಾದಾತ್ಮಕ ವಕ್ಫ್(ತಿದ್ದುಪಡಿ) ಕಾಯ್ದೆಯ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಗಳ ಬ್ಯಾಚ್ ಅನ್ನು ಮೇ 15 ರಂದು ಭಾರತದ ನಿಯೋಜಿತ ಮುಖ್ಯ ನ್ಯಾಯಮೂರ್ತಿ ಬಿ ಆರ್ ಗವಾಯಿ ಅವರು ವಿಚಾರಣೆ ನಡೆಸಲಿದ್ದಾರೆ ಎಂದು ಸುಪ್ರೀಂ ಕೋರ್ಟ್ ಸೋಮವಾರ ಹೇಳಿದೆ.

ಮೇ 13 ರಂದು ನಿವೃತ್ತರಾಗಲಿರುವ ಹಾಲಿ ಸಿಜೆಐ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು, ಕಾನೂನಿನ ಕೆಲವು ಅಂಶಗಳಿಗೆ ಸ್ಪಷ್ಟೀಕರಣದ ಅಗತ್ಯವಿರುವುದರಿಂದ ಈ ವಿಷಯದ ಕುರಿತು ತೀರ್ಪು ಅಥವಾ ಮಧ್ಯಂತರ ಆದೇಶವನ್ನು ಕಾಯ್ದಿರಿಸಲು ಬಯಸುವುದಿಲ್ಲ ಎಂದು ತಿಳಿಸಿದರು.

(2ನೇ ಪುಟ ನೋಡಿ)

# ಯತ್ನಾಳ್ ಹಿಂದೂ ಹುಲಿ ಅಲ್ಲ, ಹಿಂದೂ ಇಲಿ: ರೇಣುಕಾಚಾರ್ಯ ವಾಗ್ದಾಳಿ

ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 05 : ಯತ್ನಾಳ್ ನಕಲಿ ಹಿಂದೂ. ಅವನು ಹಿಂದೂ ಹುಲಿ ಅಲ್ಲ, ಹಿಂದೂ ಇಲಿ. ಜೆಡಿಎಸ್‌ಗೆ ಹೋಗಿ ಚಿಕನ್ ಕಬಾಬ್ ತಿಂದು ಅಲ್ಪಸಂಖ್ಯಾತರ ಟೋಪಿ ಧರಿಸಿದ್ದರು. ಟಿಪ್ಪು ಖಡ್ಗ ಹಿಡಿದು ಇಫ್ತಿಯಾರ್ ಕೂಟ ಮಾಡಿದ್ದು ಯಾರು? ಯತ್ನಾಳ್ ನಕಲಿ ಹಿಂದೂ. ತನ್ನನ್ನ ತಾನೂ ರಕ್ಷಣೆ ಮಾಡಲು ಈ ರೀತಿ ಮಾಡುತ್ತಾನೆ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ವಾಗ್ದಾಳಿ ನಡೆಸಿದರು. ಸೋಮವಾರ (ಮೇ 05) ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲುಬಿಲ್ಲದ ನಾಲಿಗೆ, ಅಪ್ಪಗ್ ಹುಟ್ಟಿದ್ದೀಯಾ, ಅವ್ವಗ್ ಹುಟ್ಟಿದ್ದೀಯಾ ಎನ್ನುತ್ತಾರೆ. ಒಂದು ಸಾರಿ ಹಿಂದೂ ಹುಲಿ, ಉತ್ತರ ಕರ್ನಾಟಕ ಹುಲಿ, ಪಂಚಮಸಾಲಿ, ವೀರಶೈವ ಹುಲಿ ಎನ್ನುತ್ತಾರೆ.



ಯತ್ನಾಳರೇ ಒಂದು ಬಾರಿ ಅವಲೋಕನ ಮಾಡಿಕೊಳ್ಳಬೇಕು. ಇದೆಲ್ಲಾ ಯತ್ನಾಳ ಅವರ ಡೊಂಬರಾಟ. ಯತ್ನಾಳ ನೀನು ನಕಲಿ ಹಿಂದುತ್ವ ಬಿಟ್ಟು ಬಿಡು ಎಂದರು.

ಮೋದಿ, ಅಮಿತ್ ಶಾ ಅನುಮತಿ ಕೊಟ್ಟರೆ ಯುದ್ಧಕ್ಕೆ ಹೋಗುವೆ ಎಂಬ ಸಚಿವ ಜಮೀರ್ ಅಹಮದ್ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ರೇಣುಕಾಚಾರ್ಯ, ಜಮೀರ್ ಅಹಮದ್ ನೀನು ನಕಲಿ, ರಾಜ್ಯದಲ್ಲಿ ಕೋಮುಗಲಭೆಗೆ ನೀನೇ ಕಾರಣ. ನೀನು ಮೊದಲು ಕೋಮು ಪ್ರಚೋದನೆ ಮಾಡುವುದನ್ನು ಬಿಡು ಎಂದು ವಾಗ್ದಾಳಿ ನಡೆಸಿದರು.

ಡಿಜೆ ಹಳ್ಳಿ, ಕೆಜಿ ಹಳ್ಳಿ ಗಲಭೆಗೆ ಜಮೀರ್ ಅಹಮದ್ ಕಾರಣ. ಜಮೀರ್ ಬೂಟಾಟಿಕೆಗೋಸ್ಕರ, ಪ್ರಚಾರಕ್ಕಾಗಿ ಹಲ್ಲು ಕಡಿದು ಡೊಂಬರಾಟ ಮಾಡುತ್ತಾರೆ. ಕೋಮು ಗಲಭೆ ಸೃಷ್ಟಿ ಮಾಡುವುದು ಬಿಟ್ಟು ಬಿಡು ಪುಣ್ಯಾತ್ಮ. ಜಮೀರ್ ನಿನ್ನ ಡೊಂಬರಾಟ ಬಿಟ್ಟು ಬಿಡು ಎಂದರು.

# ಜನಿವಾರ ತೆಗೆಯುವಂತೆ ಒತ್ತಾಯಿಸಿದ ಇಬ್ಬರ ಬಂಧನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಮೇ.5: ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀ–ಕ್ಷೆ (ನೀಟ್)ಬರೆಯಲು ಬಂದಿದ್ದ ವಿದ್ಯಾರ್ಥಿಗೆ ಜನಿವಾರ ತೆಗೆಯುವಂತೆ ಒತ್ತಾಯಿಸಿದ ಆರೋಪದ ಮೇಲೆ ಪೊಲೀಸರು ಸೋಮವಾರ ಪರೀಕ್ಷಾ ಕೇಂದ್ರದ ಇಬ್ಬರು ಸಿಬ್ಬಂದಿಯನ್ನು ಬಂಧಿಸಿದ್ದಾರೆ.

ವಿದ್ಯಾರ್ಥಿ ಶ್ರೀಪಾದ್ ಪಾಟೀಲ್ ನೀಡಿದ ದೂರಿನ ಆಧಾರದ ಮೇಲೆ ಇಬ್ಬರು ಸಿಬ್ಬಂದಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದ್ದು, ಅವರನ್ನು ಬಂಧಿಸಲಾಗಿದೆ ಎಂದು ಕಲಬುರಗಿ ಪೊಲೀಸ್ ಆಯುಕ್ತ ಎಸ್.ಡಿ. ಶರಣಪ್ಪ ಅವರು ಇಂದು ತಿಳಿಸಿದ್ದಾರೆ.

(2ನೇ ಪುಟ ನೋಡಿ)


# ಕೌಶಲ್ಯಯುತ ಶಿಕ್ಷಣ ಇಂದಿನ ಅಗತ್ಯ:ಸಚಿವ ಈಶ್ವರ ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಮೇ.5: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳಿಗೆ ಕೌಶಲ್ಯಯುತ ಶಿಕ್ಷಣ ಅತ್ಯಗತ್ಯವಾಗಿದೆ. ಆಧುನಿಕತೆ ತಕ್ಕಂತೆ ಶಿಕ್ಷಣ ಕ್ಷೇತ್ರದಲ್ಲಿ ಹೊಸ

(2ನೇ ಪುಟ ನೋಡಿ)

# ಹಾಲುಮತದ ಇತಿಹಾಸವು ಮನುಕುಲದ ಇತಿಹಾಸ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :ಮೇ.5: ಸಂಸ್ಕೃತಿಯ ಪ್ರತೀಕವಾದ ಹಾಲುಮತದ ಇತಿಹಾಸವು ಮನುಕುಲದ ಇತಿಹಾಸವಾಗಿದೆ ಎಂದು ಆಗುತೀರ್ಥ ಹಾಲುಮತ ಗುರುಪೀಠ ಸರೂರ್ ಪರಮಪೂಜ್ಯ ಶ್ರೀ ರೇವಣಸಿದ್ದೇಶ್ವರ ಶಾಂತಮಯ ಮಹಾಸ್ವಾಮಿ ಅವರು ಅಭಿಪ್ರಾಯಪಟ್ಟರು.

ಯಾದಗಿರಿ ತಾಲೂಕಿನ ಬಾಡಿಯಾಲ ಗ್ರಾಮದಲ್ಲಿ ನಡೆದ ಬೀರಲಿಂಗೇಶ್ವರರ ನೂತನ ದೇವಸ್ಥಾನ ಉದ್ಘಾಟನೆ ಹಾಗೂ ಮೂರ್ತಿ ಪ್ರಾಣ ಪ್ರತಿಷ್ಠಾಪನ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ದೇವರ ಹೆಸರಿನಲ್ಲಿ ಪ್ರಾಣಿಬಲಿ ನೀಡಿ ಹಣ ವ್ಯರ್ಥ ಮಾಡುವ ಬದಲು ಅದನ್ನು ಮಕ್ಕಳ ಶಿಕ್ಷಣಕ್ಕೆ ಖರ್ಚು ಮಾಡಿದರೆ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ ಎಂದರು.

ಬಡವರು ಕಷ್ಟಪಟ್ಟು ವರ್ಷಪೂರ್ತಿ ದುಡಿದು ಸಂಗ್ರಹಿಸಿದ ಲಕ್ಷಾಂತರ ಹಣವನ್ನು ಮೂಢ ನಂಬಿಕೆಗೆ ಬಲಿಯಾಗಿ ದೇವರಿಗೆ ಪ್ರಾಣಿಬಲಿಗೆ ಖರ್ಚು ಮಾಡುವುದು ನಿಲ್ಲಿಸುವ ನಿಟ್ಟಿನಲ್ಲಿ ಜಾಗೃತರಾಗಬೇಕು ಎಂದರು.

ಬೀರಲಿಂಗೇಶ್ವರ ದೇವಸ್ಥಾನ ಉದ್ಘಾಟನೆಯಲ್ಲಿ ಏಳು ದೇವರುಗಳ ಪಲ್ಲಕ್ಕಿಗಳು ಸಮಾಗಮವಾಗಿವೆ. ದೇವರುಗಳ ಪಟ್ಟದ ಪೂಜಾರಿಗಳು, ಹಲವಾರು ಪರಮಪೂಜ್ಯರು ಬಂದಿದ್ದು ಕುಂಭಮೇಳ ಸ್ವರೂಪದ ಕಾರ್ಯಕ್ರಮವಾಗಿದೆ. ಹಾಲುಮತ ಸಮಾಜ ಶ್ರಮ, ಸಂಸ್ಕೃತಿಯ ಪ್ರತೀಕವಾಗಿದ್ದು, ಹಾಲುಮತ ಇತಿಹಾಸವು ಮನುಕುಲದ ಇತಿಹಾಸವಾಗಿದೆ ಎಂದರು.

ಭರತಭೂಮಿಯು ಪವಿತ್ರವಾಗಿದ್ದು ಇಲ್ಲಿ ಜನಿಸಿದ ನಾವೇ ಪುಣ್ಯವಂತ ಭಾಗ್ಯಶಾಲಿಗಳಾಗಿದ್ದೇವೆ. ಈ ನಾಡಿನಲ್ಲಿ ಸದ್ಗುಣಗಳು ಇರುವ ವ್ಯಕ್ತಿಯು ಸಂತ, ಮಹತ್ಮಾ, ಶರಣರಾಗುತ್ತಾರೆ ಎಂದರು.*ಬೆಳಗಾವಿಯ ಮುಕ್ತಿಮಠದ ಪರಮಪೂಜ್ಯ ಶ್ರೀ ಶಿವಸಿದ್ಧ ಸೋಮೇಶ್ವರ ಮಹಾಸ್ವಾಮಿಗಳು ಮಾತನಾಡಿ;*

ಕಾಯಕವೇ ಕೈಲಾಸವೆಂದು ನಂಬಿ ಕೃಷಿ, ಕುರಿ ಸಾಕಾಣಿ–ಕೆ, ಪಶು ಸಂಗೋಪನೆಯಲ್ಲಿ ತೆundefineಜಡಗಿರುವ


(2ನೇ ಪುಟ ನೋಡಿ)

# ಜನರೇ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸುತ್ತಾರೆ: ಮಾಜಿ ಸಿಎಂ ಯಡಿಯೂರಪ್ಪ

ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 05 : ರಾಜ್ಯದಲ್ಲಿ ಕೊಲೆ ಸುಲಿಗೆ ನಿರಂತರವಾಗಿ ನಡೆಯುತ್ತಿವೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಇದೆಯೇ ಎಂದು ಜನರು ಪ್ರಶ್ನೆ ಕೇಳುತ್ತಿದ್ದಾರೆ. ಈ ಹತ್ಯೆಗಳನ್ನು ತಡೆಯುವ ಶಕ್ತಿ ಮುಖ್ಯಮಂತ್ರಿಗಳಿಗೆ ಹಾಗೂ ಗೃಹ ಸಚಿವರಿಗೆ ಇಲ್ಲ. ಸುಹಾಸ್ ಶೆಟ್ಟಿ ಬರ್ಬರ ಹತ್ಯೆಯನ್ನು ನಾನು ಖಂಡಿಸುತ್ತೇನೆ.

ಮುಂದಿನ ದಿನಗಳಲ್ಲಿ ಜನರೇ ಕಾಂಗ್ರೆಸ್ ಗೆ ತಕ್ಕ ಪಾಠ ಕಲಿಸುತ್ತಾರೆ ಎಂದು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಹೇಳಿದರು.

ಸೋಮವಾರ (ಮೇ 05)



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂಗೆ ಬೆದರಿಕೆ ಕರೆಗಳು ಬರುತ್ತದೆ ಎನ್ನುವುದರಲ್ಲಿ ಯಾವುದೇ ಸತ್ಯಾಂಶವಿಲ್ಲಾ. ಕೇವಲ ಪ್ರಚಾರಕ್ಕಾಗಿ ಸಿಎಂ ಸಿದ್ದರಾಮಯ್ಯ ಈ ರೀತಿ ಹೇಳಿಕೆ ನೀಡುತ್ತಿದ್ದಾರೆ. ಹೀಗಾಗಿ ಈ ಸರ್ಕಾರ ಬಹಳಷ್ಟು ದಿನ ಉಳಿಯುವುದಿಲ್ಲ ಎಂದರು.

ಪಾಕಿಸ್ತಾನ ವಿರುದ್ದ ಭಾರತ ವಿರುದ್ದ ಮಾಡುವ ವಿಚಾರವಾಗಿ ಮಾತನಾಡಿ, ಯಾವ ಸಮಯದಲ್ಲಿ ಏನು ಮಾಡಬೇಕೆಂದು ಮೋದಿಗೆ ಗೊತ್ತಿದೆ. ಮೋದಿ ಸೂಕ್ತ ಕ್ರಮವನ್ನು ತೆಗೆದುಕೊಂಡು ಏನೂ ಆಗದಂತೆ ನೋಡುತ್ತಾರೆ ಎಂದರು.

ಜಾತಿಗಣತಿ ಆಗಬೇಕೆಂದು ಬಹಳಷ್ಟು ದಿನಗಳಿಂದ ಅಪೇಕ್ಷೆ ಇತ್ತು. ಈಗ ಅದು ಕೇಂದ್ರದಿಂದ ಆಗುತ್ತಿದೆ, ಎಲ್ಲರೂ ಸಹಕಾರ ನೀಡಬೇಕು ಎಂದು ಯಡಿಯೂರಪ್ಪ ಹೇಳಿದರು.

ನಮ್ಮ ಬ್ಯಾಂಕಿನ ನೆಚ್ಚಿನ ಅಧ್ಯಕ್ಷರು, ಬಾಗಲಕೋಟ ಡಿ.ಸಿ.ಸಿ ಬ್ಯಾಂಕಿನ ನಿರ್ದೇಶಕರು, ಅಭಿವೃದ್ಧಿಯ ಹರಿಕಾರ, ಸಹಕಾರಿ ರಂಗದ ಭಾರ್ಗವ, ಕರ್ಮಯೋಗಿ ಮತ್ತು ನಮ್ಮೆಲ್ಲರ ದಾರಿದೀಪ **"ಸಹಕಾರಿ ರತ್ನ"** ಪ್ರಶಸ್ತಿ ಪುರಸ್ಕೃತ



ಸನ್ಮಾನ್ಯ **ಶ್ರೀ ಪ್ರಕಾಶ ಈ. ತಪಶೆಟ್ಟಿ** ಅವರಿಗೆ

**73ನೇ ಹುಟ್ಟುಹಬ್ಬದ ಹಾರ್ದಿಕ ಶುಭಾಶಯಗಳು**

ದೇವರು ಅವರಿಗೆ ಆಯುರಾರೋಗ್ಯ ಭಾಗ್ಯವನ್ನು ಕರುಣಿಸಿ, ಮತ್ತಷ್ಟು ಜನಸೇವೆ ಮಾಡಲು ಆಶೀರ್ವದಿಸಲಿ ಎಂದು ಪ್ರಾರ್ಥಿಸಿ ಶುಭ ಹಾರೈಸುವ.

ಬ್ಯಾಂಕಿನ ನಿರ್ದೇಶಕ ಮಂಡಳ ಸದಸ್ಯರು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗ

**ಶ್ರೀ ಬಸವೇಶ್ವರ ಸಹಕಾರಿ ಬ್ಯಾಂಕ ನಿ., ಬಾಗಲಕೋಟೆ**

## ಒಂದನೇ ಪುಟದಿಂದ

## ಒಳಮೀಸಲಾತಿ ಜಾರಿಗೆ ಬದ್ಧ

ಘೋಷಣೆಗೆ ಅವಕಾಶ ಕಲ್ಪಿಸಲಾಗಿದೆ. ಮೂರೂ ಹಂತಗಳಲ್ಲಿ ವೈಜ್ಞಾನಿಕ ದತ್ತಾಂಶ ಸಂಗ್ರಹಿಸಲಾಗುವುದು. ನಿಖರ ದತ್ತಾಂಶ ಸಂಗ್ರಹಿಸಿದ ಮೇಲೆ ನಮಗೆ ಶಿಫಾರಸ್ಸು ಮಾಡ್ತಾರೆ. ಒಟ್ಟು 60 ದಿನ ಸಮಯಾವಕಾಶ ನೀಡಲಾಗಿದೆ ಎಂದರು.ಮೊಬೈಲ್ ಆಪ್:

ಮೊಬೈಲ್ ಆಪ್ ಮೂಲಕವೂ ಸಮೀಕ್ಷೆಗೆ ಅವಕಾಶ ಮಾಡಿಕೊಡಲಾಗಿದೆ. ಬೆಳಗ್ಗೆ 6:30 ರಿಂದ ಸಂಜೆ 6:30ರ ವರೆಗೆ ಮೊಬೈಲ್ ಆಪ್ ಸಕ್ರಿಯ ಮಾಡಲಾಗಿರುತ್ತದೆ. ಇದಕ್ಕೆ ಪರಿಶಿಷ್ಟ ಜಾತಿ ಸಮುದಾಯದ ಯಾರೂ ತಪ್ಪಿಸಬಾರದು.ನಾವು ನಮ್ಮ ಚುನಾವಣಾ ಪ್ರಣಾಳಿಕೆಯಲ್ಲೂ ವರದಿ ಜಾರಿ ಬಗ್ಗೆ ಘೋಷಣೆ ಮಾಡಿದ್ದೆವು. ಒಳ ಮೀಸಲಾತಿ ಪರವಾಗಿ ಸುಪ್ರೀಂಕೋರ್ಟ್ ಕೂಡ ಹೇಳಿದೆ. ಸಮುದಾಯದ ಸಂಘಟನೆಗಳು, ಮುಖಂಡರಿಗೂ ನಾವು ಒಳ ಮೀಸಲಾತಿ ಬಗ್ಗೆ ಭರವಸೆ ನೀಡಿದ್ದೆವು. ಆದ್ದರಿಂದ ದತ್ತಾಂಶ ಸಂಗ್ರಹ ಸಮೀಕ್ಷೆಯಲ್ಲಿ ಪೂರ್ಣವಾಗಿ ತೊಡಗಿಸಿಕೊಂಡು ಮಾಹಿತಿ ಕೊಡಿ ಎಂದು ಮುಖ್ಯಮಂತ್ರಿಗಳು ಮನವಿ ಮಾಡಿದರು. ಎಲ್ಲಾ ಸಂಘಟನೆಗಳೂ ಇದಕ್ಕೆ ಸಹಕರಿಸಿ ಎಂದೂ ಮುಖ್ಯಮಂತ್ರಿಗಳು ಮನವಿ ಮಾಡಿದರು.ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಹೆಚ್.ಸಿ.ಮಹದೇವಪ್ಪ, ಕೆ.ಹೆಚ್.ಮುನಿಯಪ್ಪ, ಶಿವರಾಜ್ ತಂಗಡಗಿ, ಶಿವಾನಂದ ಪಾಟೀಲ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಶಾಸಕರಾದ ರೂಪಕಲಾ ಶಶಿಧರ್, ವಿಧಾನ ಪರಿಷತ್ ಸದಸ್ಯ ಸುದಾಮ ದಾಸ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

## ಒತ್ತಾಯಿಸಿದ ಇಬ್ಬರು ಸಿಬ್ಬಂದಿ ಬಂಧನ

ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡಿದ ಆರೋಪದ ಮೇಲೆ ಸಿಬ್ಬಂದಿ ವಿರುದ್ಧ ಭಾನುವಾರ ತಡರಾತ್ರಿ ಪ್ರಕರಣ ದಾಖಲಾಗಿದೆ ಎಂದು ಶರಣಪ್ಪ ಅವರು ಹೇಳಿದ್ದಾರೆ.ಬಂಧಿತ ಆರೋಪಿಗಳನ್ನು ಶರಣಗೌಡ ಮತ್ತು ಗಣೇಶ್ ಎಂದು ಗುರುತಿಸಲಾಗಿದೆ. ಅವರ ವಿರುದ್ಧ ಕಲಬುರಗಿಯ ಸ್ಟೇಷನ್ ಬಜಾರ್ ಪೊಲೀಸರು ಭಾರತೀಯ ನ್ಯಾಯ ಸಂಹಿತಾ(ಬಿಎನ್‌ಎಸ್) ಕಾಯ್ದೆಯ ಸೆಕ್ಷನ್ 298 ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ ಎಂದು ಪೊಲೀಸ್ ಆಯುಕ್ತ ಶರಣಪ್ಪ ಅವರು ತಿಳಿಸಿದ್ದಾರೆ.ಬಂಧಿತ ಇಬ್ಬರು ಆರೋಪಿಗಳು ಖಾಸಗಿ ಏಜೆನ್ಸಿಯಲ್ಲಿ ಕೆಲಸ ಮಾಡುತ್ತಿದ್ದು, ಅವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಆಯುಕ್ತರು ತಿಳಿಸಿದ್ದಾರೆ.

ಭಾನುವಾರ ನೀಟ್ ಪರೀಕ್ಷೆ ಬರೆಯಲು ನಗರದ ಸೆಂಟ್ ಮೇರಿ ಶಾಲೆಗೆ ಬಂದಿದ್ದ ಬಸವಕಲ್ಯಾಣದ ಶ್ರೀಪಾದ ಪಾಟೀಲ್ ಎಂಬ ವಿದ್ಯಾರ್ಥಿಯನ್ನು ತಪಾಸಣಾ ಸಿಬ್ಬಂದಿ ತಡೆದು, ಪರೀಕ್ಷಾ ಕೇಂದ್ರದ ಒಳಗೆ ಹೋಗುವಾಗ ಜನಿವಾರ ತೆಗೆಯುವಂತೆ ಸೂಚನೆ ನೀಡಿದ್ದಾರೆ ಎಂದು ಆರೋಪಿಸಲಾಗಿದೆ. ಇದನ್ನು ಖಂಡಿಸಿ ಬ್ರಾಹ್ಮಣ ಸಮುದಾಯದ ಸದಸ್ಯರು ನಿನ್ನೆ ಪ್ರತಿಭಟನೆ ನಡೆಸಿದ್ದರು.

## ವಿಚಾರಣೆ ಮೇ. 15ಕ್ಕೆ ಮುಂದೂಡಿಕೆ

"ನೀವು (ಕೇಂದ್ರ) ವ್ಯವಹರಿಸಿದ ಕೆಲವು ಅಂಶಗಳಿವೆ. ಆದರೆ ಅವುಗಳಿಗೆ ಸ್ಪಷ್ಟೀಕರಣದ ಅಗತ್ಯವಿದೆ. ಈ ಮಧ್ಯಂತರ ಹಂತದಲ್ಲಿ ನಾನು ಯಾವುದೇ ತೀರ್ಪು ಅಥವಾ ಆದೇಶವನ್ನು ಕಾಯ್ದಿರಿಸಲು ಬಯಸುವುದಿಲ್ಲ. ಈ ವಿಷಯವನ್ನು ಸಮಂಜಸವಾಗಿ ಆರಂಭಿಕ ದಿನಾಂಕದಂದು ವಿಚಾರಣೆ ಮಾಡಬೇಕಾಗುತ್ತದೆ" ಎಂದು ಸಿಜೆಐ ಖನ್ನಾ ಹೇಳಿದರು.ಸಿಜೆಐ ಹೊರತುಪಡಿಸಿ ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ ವಿ ವಿಶ್ವನಾಥನ್ ಅವರನ್ನು ಒಳಗೊಂಡ ಪೀಠವು ಅರ್ಜಿಗಳನ್ನು ಆಲಿಸಿತು.

ವಿಚಾರಣೆಯ ಸಮಯದಲ್ಲಿ, ವಕ್ಫ್ ಆಸ್ತಿಗಳ ನೋಂದಣಿಗೆ ಸಂಬಂಧಿಸಿದಂತೆ ಕೇಂದ್ರವು ಕೆಲವು ಅಂಶಗಳನ್ನು ಎತ್ತಿದೆ. ಇವುಗಳ ಬಗ್ಗೆ ನ್ಯಾಯಾಲಯವು ವಿವರವಾದ ವಿಚಾರಣೆ ನಡೆಸಬೇಕಾಗುತ್ತದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ."ಕೇಂದ್ರದ ಪ್ರತಿ-ಅಫಿಡವಿಟ್ ಅನ್ನು ನಾವು ಆಳವಾಗಿ ಪರಿಶೀಲಿಸಿಲ್ಲ. ಹೌದು, ನೀವು (ವಕ್ಫ್ ಆಸ್ತಿಗಳ) ನೋಂದಣಿಗೆ ಸಂಬಂಧಿಸಿದಂತೆ ಕೆಲವು ಅಂಶಗಳನ್ನು ಎತ್ತಿದ್ದೀರಿ ಮತ್ತು ಕೆಲವು ವಿವಾದಿತ ಅಂಕಿಅಂಶಗಳನ್ನು ನೀಡಿದ್ದೀರಿ, ಅದಕ್ಕೆ ಸ್ವಲ್ಪ ಪರಿಗಣನೆಯ ಅಗತ್ಯವಿರುತ್ತದೆ" ಎಂದು ಸಿಜೆಐ ಹೇಳಿದರು.

ಈ ವೇಳೆ "ಬಳಕೆದಾರರಿಂದ ವಕ್ಫ್" ಸೇರಿದಂತೆ ವಕ್ಫ್ ಆಸ್ತಿಗಳನ್ನು ಡಿನೋಟಿಫೈ ಮಾಡುವುದಿಲ್ಲ ಅಥವಾ ಮೇ 15 ರಂದು ಮುಂದಿನ ವಿಚಾರಣೆಯವರೆಗೆ ಕೇಂದ್ರ ವಕ್ಫ್ ಕೌನ್ಸಿಲ್ ಮತ್ತು ಮಂಡಳಿಗಳಿಗೆ ಯಾವುದೇ ನೇಮಕಾತಿಗಳನ್ನು ಮಾಡುವುದಿಲ್ಲ ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಸುಪ್ರೀಂ ಕೋರ್ಟ್‌ಗೆ ಭರವಸೆ ನೀಡಿದರು.

## ಮೇ.7ರಂದು ಮಾಕ್ ಡ್ರಿಲ್ ನಡೆಸಲು ರಾಜ್ಯಗಳಿಗೆ ಕೇಂದ್ರದ ಸೂಚನೆ

ರಷ್ಯಾ ಬೆಂಬಲ:ಇನ್ನು ಸಿಬಿಐ ಮುಖ್ಯಸ್ಥ ನೇಮಕ ಸಂಬಂಧ ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ, ಪ್ರಧಾನಿ ಮೋದಿಯನ್ನ ಭೇಟಿಯಾಗಿದ್ದಾರೆ. ಈ ಮಧ್ಯೆ ಭಾರತಕ್ಕೆ ಜಾಗತಿಕವಾಗಿ ಭಾರೀ ಬೆಂಬಲ ವ್ಯಕ್ತವಾಗ್ತಿದೆ. ಮಿತ್ರರಾಷ್ಟ್ರವಾಗಿರುವ ರಷ್ಯಾದಿಂದಲೂ ಉಗ್ರರ ವಿರುದ್ಧ ಭಾರತದ ಹೋರಾಟಕ್ಕೆ ಬೆಂಬಲ ಸಿಕ್ಕಿದೆ. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಪ್ರಧಾನಿ ಮೋದಿಗೆ ದೂರವಾಣಿ ಕರೆ ಮಾಡಿ ಬೆಂಬಲ ಸೂಚಿಸಿದ್ದಾರೆ. ಪಹ್ಲಗಾಮ್ ಉಗ್ರರ ದಾಳಿಯನ್ನು ಪುಟಿನ್ ಬಲವಾಗಿ ಖಂಡಿಸಿದ್ದಾರೆ. ಉಗ್ರರ ವಿರುದ್ಧದ ಹೋರಾಟದಲ್ಲಿ ಭಾರತಕ್ಕೆ ಸಂಪೂರ್ಣ ಬೆಂಬಲ ನೀಡುವುದಾಗಿ ಪುಟಿನ್ ಹೇಳಿದ್ದಾರೆಂದು ವಿದೇಶಾಂಗ ವಕ್ತಾರ ರಣಧೀರ್ ಜೈಸ್ವಾಲ್ ಮಾಹಿತಿ ನೀಡಿದ್ದಾರೆ.

## ಶಿಕ್ಷಣ ಇಂದಿನ ಅಗತ್ಯ:ಸಚಿವ ಈಶ್ವರ ಖಂಡ್ರೆ

ಆಲೋಚನೆ, ಆಯಾಮಗಳನ್ನು ಪರಿಚಯಿಸುವ ಅಗತ್ಯತೆಯಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.ಪಟ್ಟಣದ ಲಕ್ಷ್ಮಿಬಾಯಿ ಖಂಡ್ರೆ ಪಬ್ಲಿಕ್ ಶಾಲೆಯ ಆವರಣದಲ್ಲಿ ಸೃಜನಶೀಲ ಅಧ್ಯಾಪನ ಕೇಂದ್ರ ಬೆಂಗಳೂರು ಸಹಯೋಗದಲ್ಲಿ ಸೋಮವಾರ ಆಯೋಜಿಸಿದ್ದ ಲಕ್ಷ್ಮಿಬಾಯಿ ಖಂಡ್ರೆ ಪಬ್ಲಿಕ್ ಶಾಲೆ ಉದ್ಘಾಟಿಸಿ ಅವರು ಮಾತನಾಡಿದರು.ನಮ್ಮ ತಾಯಿ ಲಕ್ಷ್ಮಿಬಾಯಿ ಖಂಡ್ರೆಹೆಸರಿನಲ್ಲಿ ಹೊಸದಾಗಿ ಶಾಲಾ ಆರಂಭಗೊಳ್ಳುತ್ತಿರುವುದು ಸಂತಸ ತರಿಸಿದೆ. ನಮ್ಮ ತಾಯಿ ಹೆಚ್ಚಿನ ವಿದ್ಯಾಭ್ಯಾಸ ಮಾಡದಿದ್ದರೂ ಕೂಡ ನಮ್ಮ ತಂದೆ ಶತಾಯುಷಿ ಡಾ.ಭೀಮಣ್ಣ ಖಂಡ್ರೆ ರಾಜಕೀಯ ಮತ್ತು ಸಾಮಾಜಿಕ ಕ್ಷೇತ್ರದಲ್ಲಿನ ಬೆಳವಣಿಗೆಗೆ ಬಹುದೊಡ್ಡ ಕೊಡುಗೆ ನೀಡಿದ್ದರು.ನಮ್ಮನ್ನು ಉತ್ತಮ ಶಿಕ್ಷಣ, ಸಂಸ್ಕಾರ ಕಲ್ಪಿಸಿದರ ಪರಿಣಾಮ ನಮ್ಮ ಮನೆತನ ಇಂದಿಗೂ ಸಮಾಜ ಸೇವೆ ಮುಂದುವರೆಸಿ ಕೊಂಡು ಬಂದಿದೆ ಎಂದರು.ನಮ್ಮ ತಾಯಿ ಹೆಸರಿನಲ್ಲಿ ಶಾಲಾ ಆರಂಭಿಸಬೇಕು ಎನ್ನುವುದು ಬಹುದಿನಗಳ ಕನಸಾಗಿತ್ತು. ಆದರೆ ಕಾರಣಾಂತರಗಳಿಂದ ಆಗಿರಲಿಲ್ಲ.ಗ್ರಾಮೀಣ ಭಾಗದ ಹೆಣ್ಣುಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಧ್ಯೇಯದೊಂದಿಗೆ ಇದೀಗ ನನ್ನ ಪುತ್ರ ಸಾಗರ ಖಂಡ್ರೆ ಅವರು ಲಕ್ಷ್ಮಿಬಾಯಿ ಖಂಡ್ರೆ ಹೆಸರಿನಲ್ಲಿ ಪಬ್ಲಿಕ್ ಶಾಲೆ ತೆರೆದಿದ್ದಾರೆ.ವಿಭಿನ್ನ ವಿಚಾರ, ಆಲೋಚನೆಯೊಂದಿಗೆ ಹೆಜ್ಜೆಯಿಡುತ್ತಿರುವ ಈ ಸಂಸ್ಥೆ ಯಶಸ್ಸು ಕಾಣಲಿ ಎಂದು ಹಾರೈಸಿದರು.ಸೃಜನಶೀಲ ಅಧ್ಯಾಪನ ಕೇಂದ್ರದ ಸಂಸ್ಥಾಪಕ ಡಾ.ಗುರುರಾಜ ಕರ್ಜಗಿ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳಲ್ಲಿ ಅದ್ಭುತ ಶಕ್ತಿ ಅಡಗಿದೆ ಅದನ್ನು ಗುರುತಿಸಿ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಪರಿಚಯಿಸುವ ಕೆಲಸ ಈ ಲಕ್ಷ್ಮಿಬಾಯಿ ಖಂಡ್ರೆ ಪಬ್ಲಿಕ್ ಶಾಲೆ ಮಾಡಲಿದೆ ಎಂದು ವಿಶ್ವಾಸ ವ್ಯಕ್ತ ಪಡಿಸಿದ್ದರು.ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ಲಕ್ಷ್ಮಿಬಾಯಿ ಖಂಡ್ರೆ ಹೆಸರಿನಲ್ಲಿ ಆರಂಭಗೊಳ್ಳುತ್ತಿರುವ ಪಬ್ಲಿಕ್ ಶಾಲೆ ಈ ಭಾಗದ ಹೆಣ್ಣುಮಕ್ಕಳಿಗೆ ದಾರಿದೀಪ ಆಗಲಿದೆ ಎಂದು ತಿಳಿಸಿದರು. ಮೆಹಕರ್-ತಡೋಳ ಮಠದ ರಾಜೇಶ್ವರ ಶಿವಾಚಾರ್ಯ ಮಾತನಾಡಿ, ಗ್ರಾಮೀಣ ಭಾಗದ ಹೆಣ್ಣುಮಕ್ಕಳ ಶೈಕ್ಷಣಿಕ ಪ್ರಗತಿಗೆ ಈ ಲಕ್ಷ್ಮಿಬಾಯಿ ಖಂಡ್ರೆ ಪಬ್ಲಿಕ್ ಶಾಲೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ರಾಜಕೀಯ, ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಖಂಡ್ರೆ ಮನೆತನದ ಹೆಸರು ದೊಡ್ಡದಿದೆ. ಹೊಸ ವಿಭಿನ್ನ ದೃಷ್ಟಿ ಕೋನದಿಂದ ತೆರೆದಿರುವ ಲಕ್ಷ್ಮಿಬಾಯಿ ಖಂಡ್ರೆ ಪಬ್ಲಿಕ್ ಶಾಲೆ ಕೂಡ ಉತ್ತರೋತ್ತರವಾಗಿ ಬೆಳೆಯಲಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಸಂಸದ ಸಾಗರ ಖಂಡ್ರೆ, ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಡಾ.ಗೀತಾ ಈಶ್ವರ ಖಂಡ್ರೆ, ಗುರುಮ್ಮ ಸಿದ್ದಾ-ರೆಡ್ಡಿ, ಡಾ.ಹಣಮಶೆಟ್ಟಿ, ಬಸವರಾಜ ಪಾಟೀಲ್, ರಾಜಶೇಖರ ಅಷ್ಟೂರೆ, ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ ಸೇರಿದಂತೆ ಹಲವರು ಇದ್ದರು. ಆಡಳಿತಾಧಿಕಾರಿ ಅಂಕುಶ ಢೋಲೆ ಸ್ವಾಗತಿಸಿದರು. ಡಾ.ಬಸವರಾಜ ಕಾವಡಿ ನಿರೂಪಿಸಿದರು. ಪ್ರಾಚಾರ್ಯ ಸಂತೋಷ ಮಿರಾಜಕರ್ ವಂದಿಸಿದರು.

ಮಕ್ಕಳು ದೇಶದ ಬಹುದೊಡ್ಡ ಸಂಪತ್ತು. ಪ್ರಾಥಮಿಕ ಹಂತದಿಂದಲೇ ಗುಣಾತ್ಮಕ ಶಿಕ್ಷಣ ಕಲ್ಪಿಸಿದರೆ ಮಕ್ಕಳ ಭವಿಷ್ಯ ಉಜ್ವಲವಾಗಲಿದೆ.

**– ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಸಚಿವರು ಬೀದರ್**

ಮಕ್ಕಳನ್ನುಶಾಲೆಗೆಕಳುಹಿಸಿದರೆ ಪಾಲಕರ ಜವಾಬ್ದಾರಿ ಪೂರ್ಣಗೊಳ್ಳುವುದಿಲ್ಲ. ಮಕ್ಕಳ ಆಗು ಹೋಗುಗಳ ಮೇಲೆ ಸದಾ ನಿಗಾ ಇರಿಸಬೇಕು.

**– ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅಧ್ಯಕ್ಷರು ಅನುಭವ ಮಂಟಪ ಬಸವಕಲ್ಯಾಣ**

ಲಕ್ಷ್ಮಿಬಾಯಿ ಖಂಡ್ರೆ ಪಬ್ಲಿಕ್ ಶಾಲೆಯಲ್ಲಿ ಮಕ್ಕಳ ದೇಹ, ಮನಸ್ಸು, ಸಂಸ್ಕೃತಿ ಗಟ್ಟಿಗೊಳಿಸುವಂತಹ ಶಿಕ್ಷಣ ನೀಡುವ ಪ್ರಯತ್ನ ಮಾಡುತ್ತೇವೆ.

**– ಡಾ.ಗುರುರಾಜ ಕರ್ಜಗಿ ಅಧ್ಯಕ್ಷ ಸೃಜನಶೀಲ ಅಧ್ಯಾಪನ ಕೇಂದ್ರ ಬೆಂಗಳೂರು**

## ಮನುಕುಲದ ಇತಿಹಾಸ

ಹಾಲಿನಂತ ಮನಸ್ಸುಳ್ಳ ಹಾಲುಮತ ಸಮಾಜದ ಸಂಸ್ಕೃತಿ ಶ್ರೇಷ್ಠವಾಗಿದೆ.

ಬ್ರಿಟಿಷರ ನಿದ್ದೆಗೆಡಿಸಿ ಅವರ ವಿರುದ್ಧಕೆಚ್ಚೆದೆಯಿಂದ ಹೋರಾಡಿ ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಣವನ್ನೇ ತ್ಯಾಗ ಮಾಡಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಆದರ್ಶಗಳನ್ನು ಯುವಕರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಮನೆಗೊಬ್ಬ ರಾಯಣ್ಣ ಹುಟ್ಟಲಿ, ಹರಿದು ಹೋಗದ ಕಂಬಳಿ, ಅಳಸಿ ಹೋಗಲಾರದ ಹಂಬಲಿ, ಎಲ್ಲರ ಮನೆಗೆ ನೀಗಲಿ, ಈ ಗ್ರಾಮಕ್ಕೆ ಹಾಲಿನ ಹೊಳೆ ಹರಿಯಲಿ, ಮುತ್ತಿನ ಮಳೆ ಸುರಿಯಲಿ ಎಂದು ಹಿತವಚನ ನೀಡಿದರು.*ಹುಲಿಜಂತಿ ಪಟ್ಟದ ಗುರುಗಳಾದ ಪರಮಪೂಜ್ಯ ಶ್ರೀ ಮಾಳಿಂಗರಾಯ ಮಹಾರಾಜರು ಮಾತನಾಡಿ*; ದೇವಸ್ಥಾನದಲ್ಲಿ ನಿರಂತರವಾಗಿ ಸತ್ಸಂಗ ಕಾರ್ಯಕ್ರಮಗಳು ನಡೆಯಬೇಕು. ಭಗವಂತ ಬೀರಲಿಂಗೇಶ್ವರ ಕೀರ್ತನೆಗಳು, ಮಾಳಿಂಗರಾಯರ ಚರಿತೆಗಳು, ಬಸವಾದಿ ಶರಣರ ತತ್ವಗಳು, ರಾಯಣ್ಣನ ಆದರ್ಶಗಳು, ಕನಕಸದಾಸರ ಕೀರ್ತನೆಗಳ ಭೋದನೆ ಮಾಡಿಕೊಂಡು ಬಂದು ಮಹಾತ್ಮರ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ದೇವಸ್ಥಾನ ನಿರ್ಮಾಣ ಮಾಡಿದ್ದು ಸಾರ್ಥವಾಗುತ್ತದೆ ಎಂದು ನುಡಿದರು.ಈ ವೇಳೆ ಕನಕ ಗುರುಪೀಠ ತಿಂಥಣಿ ಬ್ರಿಜ್ ಕಲಬುರಗಿ ವಿಭಾಗದ ಪರಮಪೂಜ್ಯ ಶ್ರೀ ಸಿದ್ದರಾಮಾನಂದಪುರಿ ಮಹಾಸ್ವಾಮಿಗಳು, ಚೇಗುಂಟಾದ ಪರಮಪೂಜ್ಯ ಕ್ಷೀರಲಿಂಗೇಶ್ವರ ಮಹಾಸ್ವಾಮಿಗಳು, ರಾಯಚೂರಿನ ಮಠಮಾರಿ ಶಿವಾನಂದ ಮಠದ ಪರಮಪೂಜ್ಯ ಶ್ರೀ ಜ್ಞಾನಾನಂದ ಮಹಾಸ್ವಾಮಿಗಳು, ತಂಗಡಗಿಯ ಪರಮಪೂಜ್ಯ ಶ್ರೀ ಆಂಜನೇಯ ಶರಣು, ಕನಕ ಗುರುಪೀಠ ತಿಂಥಣಿ ಬ್ರಿಡ್ಜ್ ನ ಲಿಂಗಬೀರದೇವರು ದಿವ್ಯ ಸಾನಿಧ್ಯ ವಹಿಸಿದ್ದರು.ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಸದಸ್ಯರಾದ ಶರಣಪ್ಪ ಮಾನೇಗಾರ ಯರಗೋಳ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರೆಡ್ಡಿ ಪಾಟೀಲ ಅನಪೂರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಶ್ರೇಣಿಕ ಕುಮಾರ ಧೋಖಾ, ಕುರುಬ ಸಮಾಜದ ಜಿಲ್ಲಾಧ್ಯಕ್ಷ ಮಲ್ಲಣ್ಣ ಹೈಕೂರ, ಮಾಜಿ ಅಧ್ಯಕ್ಷ ಕೆ.ವಿಶ್ವನಾಥ ನೀಲಹಳ್ಳಿ, ಡಿಡಿಯು ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ಭೀಮಣ್ಣ ಮೇಟಿ, ಹಿಂದುಳಿದ ವರ್ಗಗಳ ಜಿಲ್ಲಾ ಅಧ್ಯಕ್ಷ ಸಾಯಿಬಣ್ಣ ಕೆಂಗುರಿ, ಉದ್ದಿಮೆದಾರ ಮಹರಾಜ್ ದಿಗ್ಗಿ, ಹಿರಿಯರ ಮತ್ತು ಅಂಗವಿಲಕ ಇಲಾಖೆ ಅಧಿಕಾರಿ ಶರಣಗೌಡ ಪಾಟೀಲ, ರಾಯಚೂರು ಕುರಬ ಸಂಘದ ಜಿಲ್ಲಾಧ್ಯಕ್ಷ ಕೆ ಬಸವಂತಪ್ಪ, ಹಿರಿಯ ಮುಖಂಡ ಭೀಮಶೆಪ್ಪ ಜೇಗರ್, ಚಂದ್ರಶೇಖರ ವಾರದ್, ಮರೆಪ್ಪ ಬಿಳ್ಹಾರ, ಸಿದ್ದಣ್ಣಗೌಡ ಕಾಡಂನೋರ್, ಕುರುಬ ಸಂಘದ ಸೈದಾಪೂರ ವಲಯಾ ಅಧ್ಯಕ್ಷ ರವಿಕುಮಾರ ಕಡೆಚೂರು, ಗುರುಮಿಠಕಲ್ ತಾಲೂಕ ಕಾರ್ಯದರ್ಶಿ ಸಿದ್ದು ಪೂಜಾರಿ ಬದ್ದೆಪಲ್ಲಿ, ವಿಜಯ ಕಂದಳ್ಳಿ, ನಾಗರಾಜ ಸಂಗ್ವಾರ, ಯಲ್ಲಾಲಿಂಗ ಗೂಡೂರು, ಊರಿನ ಪ್ರಮುಖರಾದ ರಾಜು ಪೂಜಾರಿ ಶಿವಮೂರ್ತಿ ಪೂಜಾರಿ, ಬಸವರಾಜ್ ಪೂಜಾರಿ, ಬಸರಾಜಪ್ಪ ಮಾಸ್ತರ , ಬಾಲಗಿರಿರಾಜ್, ಸಾಬರೆಡ್ಡಿ, ಈಶಪ್ಪ ಸೇರಿದಂತೆ ವಿವಿಧ ಗ್ರಾಮಗಳಿಂದ ಆಗಮಿಸಿದ ಸಮಾಜದ ಹಿರಿಯರು, ಯುವಕರು , ಮಹಿಳೆಯರು ಉಪಸ್ಥಿತರಿದ್ದರು.

# ಅಕ್ಷರ ಕಲಿಸಿದ ಗುರುವಿನ ಸ್ಮರಣೆ ಸಮಾಜದಲ್ಲಿ ಮಾದರಿ ಕಾರ್ಯ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.5: ಜಿಲ್ಲೆಯ ಕುಕನೂರು ತಾಲ್ಲೂಕಿನ ಸೋಂಪೂರಗ್ರಾಮದಲ್ಲಿ 2003-04 ನೇ ಸಾಲಿನ ಹತ್ತನೇಯ ತರಗತಿ ವಿದ್ಯಾರ್ಥಿಗಳಿಂದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನದ ರಜತ್ ಮಹೋತ್ಸವಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಗಣ್ಯರು ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು, ಸಸಿಗೆ ನೀರಾಕುವ ಮೂಲಕಕ್ಷೇತ್ರಶಿಕ್ಷಣಾಧಿಕಾರಿಗಳಾದ ಸೋಮಶೇಖರ್ ಪಾಟೀಲ್ ಉದ್ಘಾಟಿಸಿದರು. ಇದೇ ವೇಳೆ ಮಾತನಾಡಿದ ಅವರು ಕಲಿತ ಶಾಲೆ ಮತ್ತು ಕಲಿಸಿದ ಶಿಕ್ಷಕರನ್ನು ಎಂದಿಗೂ ಮರೆಯಬಾರದು. ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲು ಪುಣ್ಯ ಮಾಡಿರಬೇಕು. ನವ ಸಮಾಜವನ್ನು ನಿರ್ಮಾಣ ಮಾಡುವ ಶಕ್ತಿ ಇರುವುದು ಶಿಕ್ಷಕರಿಗೆ ಮಾತ್ರ.ಅಕ್ಷರ ನೀಡಿದ ಶಿಕ್ಷಕರಿಗೆ ಗುರುವಂದನೆ ಸಲ್ಲಿಸುವುದು ಶ್ಲಾಘನೀಯ ಕಾರ್ಯ ಎಂದರು.

ನಿವೃತ್ತ ಶಿಕ್ಷಕರಾದ ಕೆ.ವಿ.ಉಣಚಗೇರಿ ಮಾತನಾಡಿ ಗ್ರಾಮೀಣ ಭಾಗದಲ್ಲಿ ಶಿಕ್ಷಣವನ್ನು ಜನಸಾಮಾನ್ಯರಿಗೂ ನೀಡಿ ಸಮಾಜದಲ್ಲಿ ಗೌರವವನ್ನು ಹೆಚ್ಚಿಸಲು ಶ್ರೀ ಶರಣಬಸವೇಶ್ವರ ಪ್ರೌಢ ಶಾಲೆಯು 45 ವರ್ಷಗಳಿಂದ ಶೈಕ್ಷಣಿಕ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರವಹಿಸಿದೆ.ಗುರುವನ್ನೆ ಮೀರಿಸುವ ಶಿಷ್ಯ ಬಳಗವನ್ನು ನೋಡಿ ಸಂತಸವಾಯಿತು. ಯುವ ಪೀಳಿಗೆಗೆ ಉತ್ತೇಜನ ನೀಡುವಲ್ಲಿ ಶ್ರಮಿಸೋಣ ಬದುಕಿನಲ್ಲಿ ಕಳೆದ ದಿನಗಳನ್ನು ನಾವು ಮರೆಯಬಾರದು ಶಿಕ್ಷಕನಾಗಿ ಸೇವೆ ಸಲ್ಲಿಸಿದ್ದು ನನ್ನ ಸೌಭಾಗ್ಯ ಎಂದರು.

ಗುರುವಂದನಾ ಮತ್ತು ಸ್ನೇಹ ಸಮ್ಮಿಲನ ರಜತ ಮಹೋತ್ಸವದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯರಾದ ಶ್ರೀ ಟಿ.ಎಫ್.ನೂರಭಾಷ್ ಅವರು ವಹಿಸಿಕೊಂಡಿದ್ದರು ಕಾರ್ಯಕ್ರಮದಲ್ಲಿ ಶಿಕ್ಷಕರಾದ ಆರ್.ಬಿ.ಅಬ್ಬಿಗೇರಿ,ಜಗದೀಶ ಕುಂಬಾರ,ಕೆ.ವಿ.ಉಣಚಗೇರಿ,ಅಶೋಕ ಸಂಗನಾಳ, ಅನಿಲ್ ಪೂಜಾರ್,ಶಿವಣ್ಣ ಗುಳಗಣ್ಣನವರ,ಎಸ್.ವಿ.ಲಮಾಣಿ,ನಿಂಗಪ್ಪ ಕರೆಬಾಲಪ್ಪನವರ,ಹನುಮಂತಪ್ಪ ಕವಲೂರು ಇವರನ್ನು ಸನ್ಮಾನಿಸುವ ಮೂಲಕ ಗುರುವಂದನೆ ಸಲ್ಲಿಸಿದರು. ಇದೇ ವೇಳೆ ಗ್ರಾಮದ ನಿವೃತ್ತ ಶಿಕ್ಷಕರು ಮತ್ತು ಪ್ರತಿಭಾ ಪುರಸ್ಕಾರದ ಮೂಲಕ ಗ್ರಾಮದ ಸಾಧಕ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು.

ಹಳೆಯ ವಿದ್ಯಾರ್ಥಿಗಳು ಮತ್ತು ಶಿಕ್ಷಕ ಬಳಗವು ಹಳೆಯ ನೆನಪುಗಳೊಂದಿಗೆಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.ಕಾರ್ಯಕ್ರಮದಲ್ಲಿ ವಲಯ ಮೇಲ್ವಿಚಾರಕ ಖಾದರಭಾಷಾ,ಗವಿಸಿದ್ದಯ್ಯ ಬೆಣಕಲ್ಲಮಠ 2003-04ನೇ ಸಾಲಿನ ಹಳೆಯ ವಿದ್ಯಾರ್ಥಿಗಳು ಉಪಸ್ಥಿತಿ ಇದ್ದರು ಜಗದೀಶ್ ಸಿಂದೋಗಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಮಲ್ಲಮ್ಮ ನುಡಿ ಪತ್ರಿಕೆಯಲ್ಲಿ ಪ್ರೌಢ ಶಾಲೆ ಕೊರತೆ ಕುರಿತು ಸರಣಿ ಸುದ್ದಿಗೆ ಸಿಕ್ಕ ಜಯ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.5:ಬೀದರ ಜಿಲ್ಲೆಯ ಮಹಾರಾಷ್ಟ್ರ ಗಡಿ ಹೊಂದಿಕೊಂಡಿರುವಕಮಲನಗರ ನೂತನ ತಾಲೂಕಿನಲ್ಲಿ ಖಾಸಗಿ ಶಾಲೆ ಪ್ರಭಾವ ದಿಂದ ಸರಕಾರಿ ಕನ್ನಡ ಮಾಧ್ಯಮ ಪ್ರೌಢ ಶಾಲೆ ಇಲ್ಲದೆ ಬಡ ಮಕ್ಕಳು ಬಹಳ ತೊಂದರೆ ಅನುಭವಿಸುತ್ತಿದ್ದರು.

ಈ ಕುರಿತು ಮಲ್ಲಮ್ಮ ನುಡಿ ಪತ್ರಿಕೆ ಯಲ್ಲಿ

"ಕಮಲನಗರ ನಲ್ಲಿ ಇಲ್ಲಾ ಸರಕಾರಿ ಪ್ರೌಢಶಾಲೆ, ಗಡಿ ಭಾಗದಲ್ಲಿ ಬಡ ಮಕ್ಕಳ ಕಲಿಕೆ ಕಗ್ಗೊಲೆ" ಎಂಬ ಶೀರ್ಷಿಕೆ ಆಡಿಯಲ್ಲಿ ಮತ್ತು "ತಾಲೂಕ ಕೇಂದ್ರದಲ್ಲಿ ಸರಕಾರಿ ಪ್ರೌಢ ಶಾಲೆ ಇಲ್ಲದೆ ಇರುವುದು ರಾಜಕ್ಕೆ ಕಳಂಕ"

ಕನ್ನಡ ಬಗ್ಗೆ ಮತ್ತು ಬಡ ಮಕ್ಕಳ ಶಿಕ್ಷಣಕ್ಕಾಗಿ ತೋರಿದ ಕಾಳಜಿಗೆ ಮತ್ತು ಶಾಸಕರು ಪರಿಶ್ರಮಕ್ಕೆ ಫಲ ಸಿಕ್ಕಿದೆ ಎಂದು ಸಾಮಾಜಿಕ ಹೋರಾಟಗಾರರು ಹಾಗೂ ಜನ ಸಾಮಾನ್ಯರು ಸಂತೋಷವ್ಯಕ್ತಪಡಿಸಿದರು.


ತಾಲೂಕು ಕೇಂದ್ರದಲ್ಲಿ ಸರಕಾರಿ ಪ್ರೌಢಶಾಲೆ ಇಲ್ಲದೆ ಇರುವುದು ರಾಜಕ್ಕೆ ಒಂದು ಕಳಂಕ:ಗುರುನಾಥ ವಡ್ಡೆ


ಕಮಲನಗರನಲ್ಲಿ ಇಲ್ಲಾ ಸರಕಾರಿ ಪ್ರೌಢಶಾಲೆ, ಗಡಿ ಭಾಗದಲ್ಲಿ ಬಡ ಮಕ್ಕಳ ಕನ್ನಡ ಕಲಿಕೆಯ ಕಗ್ಗೊಲೆ

## ಕನ್ನಡ ಸಾಹಿತ್ಯ ಪರಿಷತ್ತಿಗೆ ತನ್ನದೆ ಆದ ಇತಿಹಾಸವಿದೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕ್ಯಾಣ:- ಮೆ 5 ಕನ್ನಡ ಸಾಹಿತ್ಯ ಪರಿಷತ್ತಿಗೆ ತನ್ನದಯಾದ ಇತಿಹಾಸ ಹೊಂದಿದೆ ಎಂದು ಸಾಹಿತ್ಯ ಪರಿಷತ್ತಿನ ನಿಕಟ ಪೂರ್ವ ಗೌ. ಕಾರ್ಯದರ್ಶಿಗಳಾದ ನಾಗಪ್ಪಾ ನಿಣ್ಣೆ ತಿಳಿಸಿದರು. ಇಲ್ಲಿನ ಶ್ರೀ ಬಸವೇಶ್ವರ ವಿಜ್ಞಾನಮಹಾವಿದ್ಯಾಲಯದಲ್ಲಿ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತ ವತಿಯಿಂದ 111 ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಕನ್ನಡಮಾತೆ ಭುವನೇಶ್ವರಿದೇವಿಯಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿ ನೂರು ವರ್ಷಗಳಷ್ಟು ಹಳೆಯದಾಗಿದು ಮೈಸೂರಿನ ಒಡೆಯರು ಇದನ್ನು ಸಂಸ್ಥಾಪಿಸಿದರು ಮಾತ್ರ ಭಾಷೆಯ ಮೇಲೆ ಎಲ್ಲರಿಗೂ ಸ್ವಾಭಿಮಾನ ಇರಬೇಕು ಅಂದಾಗ ಮಾತ್ರ ಕನ್ನಡ ಉಳಿಸಿ ಬೆಳೆಸಲಿಕೆ ಸಾಧ್ಯ ಎಂದರು. ಕವಿ ವಿರಶೇಟ್ಟಿ ಪಾಟೀಲ ಸಾಹಿತ್ಯ ಪರಿಷತ್ತಿನ ಮೇಲೆ ಬರೆದ ಕವನ ಮತ್ತು ಚುಟುಕು ಎಲ್ಲರ ಗಮನ ಸೆಳೆಯಿತು. .

ಕಾರ್ಯಕ್ರಮದಅಧ್ಯಕ್ಷತೆಯನ್ನು ಕಸಾಪ ತಾಲೂಕಾ ಅಧ್ಯಕ್ಷ ಡಾ.ರುದ್ರಮಣಿ ಮಠಪತಿ ಮಾತನಾಡಿ ನನ್ನ ಎರಡನೆ ಅವಧಿಯ ಕಾರ್ಯಕ್ರಮ ಆರಂಭವಾಗಿದ್ದು ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆಯ ಮೂಲಕ ನನಗೆ ಬಹಳ ಸಂತಸ ತಂದಿದೆ. 4 ಲಕ್ಷ ಕ್ಕಿಂತ ಹೆಚ್ಚು ಸದಸ್ಯರನ್ನು ಹೊಂದಿರುವ ಜಗತ್ತಿನ ಅತೀ ದೊಡ್ಡ ಸಂಘಟನೆ ಕನ್ನಡ ಸಾಹಿತ್ಯ ಪರಿಷತ್ತು ಎಂಬ ಹೆಗ್ಗಳಿಕೆ ಇದೆ. ದೇಶ ವಿದೇಶಗಳಲ್ಲಿ ತನ್ನ ಹರವನ್ನು ವ್ಯಾಪಿಸಿಕೊಂಡು ಕನ್ನಡ ಕಟ್ಟುವ ಕಾರ್ಯ ತನ್ಮೂಲಕ ನಡೆಯುತ್ತಿದೆ. 111 ವರ್ಷಗಳ ಸುಧೀರ್ಘ ಇತಿಹಾಸ ನಮ್ಮ ಪರಿಷತ್ತಿಗೆ ಇದ್ದು ತಾಲೂಕು ಹೋಬಳಿ ಮಟ್ಟದಿಂದ ಜಿಲ್ಲೆ ಮತ್ತು ರಾಜ್ಯವ್ಯಾಪಿ ಕನ್ನಡ ಉಳಿಸಿ ಬೆಳೆಸುವ ಕಾರ್ಯ ಪರಿಷತ್ತು ಮಾಡುತ್ತಿದೆ ಎಂದರು. ಈ ಸಂದರ್ಭದಲ್ಲಿ ಪರಿಷತ್ತಿನ ಅಜೇವ ಸಧ್ಯಸರಾದ ಡಿ. ಕೆ. ಪ್ರಹ್ಲಾದ. ಕೃಷ್ಣಪ್ಪಾ ಸದಲಾ ಪೂರೆ. ಹುಲಸೂರಿನ ಕ. ಸಾ. ಪ. ಗೌರವ ಕಾರ್ಯದರ್ಶಿ ಬಸವರಾಜ ಪೋಲಿಸ ಪಾಟೀಲ. ಪ್ರಾಚಾರ್ಯರಾದ ಫುಲ್ಲಾರೆಡ್ಡಿ ಸೇರಿದಂತೆ ಕಾಲೇಜಿನ ಮಕ್ಕಳು ಭಾಗವಹಿಸಿದ್ದರು. ಉಪನ್ಯಾಸಕಿ ಭವ್ಯಾಸಕ್ಕರಭಾವಿ ಸ್ವಾಗತಿಸಿದರೆ. ಡಾ.ಬಸವರಾಜ ಖಂಡಾಳೆ ನಿರೂಪಿಸಿ ವಂದಿಸಿದರು.

## ಶಾಲಾ, ಕಾಲೇಜು ದುಬಾರಿ ಶುಲ್ಕ: 8 ರಂದು ಕರವೇ ಧರಣಿ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.05:ಜಿಲ್ಲೆಯ ಖಾಸಗಿ ಶಾಲಾ,ಕಾಲೇಜುಗಳು ವಿದ್ಯಾರ್ಥಿಗಳಿಂದ ದುಬಾರಿ ಶುಲ್ಕ ಪಡೆಯುತ್ತಿರುವುದನ್ನು ವಿರೋಧಿಸಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಮೇ 8 ರಂದು ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಮುಧೋಳ ತಿಳಿಸಿದ್ದಾರೆ.

ಬೆಳಿಗ್ಗೆ 10 ರಿಂದ ಧರಣಿ ಆರಂಭಿಸಲಾಗುವುದು. ಬಳಿಕ



ಜಿಲ್ಲಾಧಿಕಾರಿ ಅವರಿಗೆ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ.

ಖಾಸಗಿ ಶಿಕ್ಷಣ ಸಂಸ್ಥೆಗಳು ಹೆಚ್ಚಿನ ಶುಲ್ಕ ತೆಗೆದುಕೊಳ್ಳುತ್ತಿರುವುದರಿಂದ ಮಕ್ಕಳ ಪ್ರಾಥಮಿಕ, ಪ್ರೌಢ ಹಾಗೂ ಕಾಲೇಜು ಶಿಕ್ಷಣ ಬಡ ಪಾಲಕರಿಗೆ ಹೊರೆಯಾಗಿದೆ ಎಂದು ಆರೋಪಿಸಿದ್ದಾರೆ.

ಬೇರೆಡೆಯ ಕೆಲ ಖಾಸಗಿ ಪದವಿಪೂರ್ವ ಕಾಲೇಜುಗಳು ತರಬೇತಿ ಹೆಸರಲ್ಲಿ ಜಿಲ್ಲೆಯ ವಿದ್ಯಾರ್ಥಿಗಳಿಂದ ಸಾವಿರಾರು ರೂಪಾಯಿ ವಸೂಲಿಯಲ್ಲಿ ತೊಡಗಿವೆ. ಹೀಗಾಗಿ ಅಧಿಕೃತ ಕಾಲೇಜಗಳಲ್ಲೇ ವಿದ್ಯಾರ್ಥಿಗಳ ಪ್ರವೇಶಕ್ಕೆ ಕ್ರಮ ಕೈಗೊಳ್ಳಬೇಕು. ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳ ಕೈಗೆಟಕುವಂತೆ ಶಾಲಾ, ಕಾಲೇಜು ಶುಲ್ಕ ನಿಗದಿಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಉಗ್ರ ಮನಸ್ಥಿತಿಯ ಜೀಹಾದಿಗಳಿಗೆ ಕಠಿಣ ಶಿಕ್ಷೆಯಾಗಲಿ : ಜಗದೀಶ ಸೂಡಿ

ಮಲ್ಲಮ್ಮ ನುಡಿ ವಾರ್ತೆ

ಕುಕನೂರು :ಮೇ.5: ರಾಜ್ಯದಲ್ಲಿತುಘಲಕ್ ದರ್ಬಾರ್ ನಡೆಯುತ್ತಿದ್ದು ಬೆಂಗಳೂರು& ಮಲೆನಾಡು ಭಾಗದಲ್ಲಿ ಕಾನೂನು ಸುವ್ಯವಸ್ಥೆಯ ದುರ್ಬಲತೆಯನ್ನುಬಯಲಿಗೆಳೆದಿದೆ. ಪೊಲೀಸ್ ಇಲಾಖೆಯವೈಫಲ್ಯವೂ ಮೇಲ್ನೋಟಕ್ಕೆಕಂಡುಬರುತ್ತಿದೆ. ಇಂದು ಕುನೂರು ಪಟ್ಟಣದ ವೀರಭದ್ರಪ್ಪವೃತ್ತದಲ್ಲಿಶ್ರದ್ಧಾಂಜಲಿ



ಕಾರ್ಯಕ್ರಮವನ್ನುಉದ್ದೇಶಿ ಮಾತನಾಡಿದಅವರು..ದೇಶದ ಗಡಿಯಲ್ಲಿ ಉಗ್ರರ ಹಿಂದೂ ಪ್ರವಾಸಿಗರನ್ನುಹತ್ಯೆಮಾಡುತ್ತಿದ್ದರೆ ರಾಜ್ಯದ ಮಂಗಳೂರಲ್ಲಿ ಹಿಂದೂ ಯುವಕರನ್ನು ಕೊಲೆ ಮಾಡಲಾಗುತ್ತಿದೆ. ಕೇಂದ್ರದ ನರೇಂದ್ರ ಮೋದಿ ಸರ್ಕಾರದ ಕಡೆ ಆರೋಪ ಮಾಡುವ ಸಿದ್ದರಾಮಯ್ಯ& ಸಚಿವರು ಪ್ರವೀಣ ನೆಟ್ಟಾರು ಕೊಲೆ ಸೇರಿದಂತೆ ಯಾವ ಅರೋಪಿಗಳಿಗೆಶಿಕ್ಷೆಗೆಒಳಪಟ್ಟಿದ್ದಾರೆ ಎಂಬುದುನ್ನಬಹಿರಂಗಪಡಿಸಲಿ ಎಂದು ಆಗ್ರಹಿಸಿದರು.ಧರ್ಮ ಯಾವುದೇ ಇರಲಿ ಕೊಲೆ ಮಾತ್ರಮಾಡಬಾರದು,ಒಂದು ಭಾರಿ ಹೋದ ಜೀವ ಮತ್ತೆ ಬಾರದು, ಉಗ್ರಮನಸ್ಥಿತಿಯ ಯಾವುದೇಧರ್ಮದಯುವಕರು ಆದ್ರೆ ಶಿಕ್ಷೆಯಾಗಬೇಕು, ಉಗ್ರ ಮನಸ್ಥಿತಿಯ ಬದಲಾಗಬೇಕು ಎಂದುಹೇಳಿದರು.ಈಸಂದರ್ಭದಲ್ಲಿ ಭಾಜಪ ಮಂಡಲ ಅಧ್ಯಕ್ಷರಾದ ಮಾರುತಿಹೊಸಮನಿ.ಬಸವರಾಜ ಹಾಳಕೇರಿ.ಸಿದ್ದಲಿಂಗಯ್ಯ ಉಳ್ಳಾಗಡ್ಡಿ.ಕರಬಸಯ್ಯ ಬಿನ್ನಾಳ.ಮಲ್ಲಿಕಾರ್ಜುನ್ ಚೌದ್ರಿ. ಶಿವರಾಜಗೌಡ ಯಲ್ಲಪಗೌಡ್ರ.ಕನಕಪ್ಪಬ್ಯಾಡರ್. ಮಂಜುನಾಥ ಮಾಲಗಿತ್ತಿ, ರಾಜು ದ್ಯಾಂಪೂರ.ವಿನಾಯಕ ಸರಗಣಚಾರಿ.ಲಕ್ಷ್ಮಣಕಾಳಿ.ವಿರೇಶ ಸಬರದ ಸೇರಿದಂತೆ ಇತರ ಹಿಂದೂ ಕಾರ್ಯಕರ್ತರು ಇದ್ದರು.

# ಪತ್ರಕರ್ತ ಮೌಲಾನಾಸಾಬ್ ಗೆ ಕಾಸರಗೋಡಿನಲ್ಲಿ ನಡೆದ ಸಮಾರಂಭದಲ್ಲಿ ಪತ್ರಕರ್ತರ ಸಂಘದಿಂದ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 05 : ಇಲ್ಲಿನ ಕನ್ನಡಪ್ರಭ ಸಹಾಯಕ ವರದಿಗಾರ ಹಾಗೂ ಪತ್ರಕರ್ತ ಮೌಲಾನಾಸಾಬ್ (ಹಾಜಿ ಪಾಶಾ) ಅವರಿಗೆ ಕೇರಳದ ಕಾಸರಗೋಡಿನಲ್ಲಿ ಮೇ 3ರಂದು ನಡೆದ ಸಮಾರಂಭದಲ್ಲಿ ಡಾ. ಕುಳೂರು ಕನ್ಯಾನ ಸದಾಶಿವ ಶೆಟ್ಟಿ ದತ್ತಿ ನೀಧಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ಗಡಿಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಕರ್ನಾಟಕ ಸರ್ಕಾರ, ಕರ್ನಾಟಕ ಪ್ರವಾಸೋದ್ಯ ಇಲಾಖೆ, ಕರ್ನಾಟಕ ಸರ್ಕಾರ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಂಯುಕ್ತಾಶ್ರಯದಲ್ಲಿ ಕಾಸರಗೋಡಿನ ಸೀತಾಂಗೋಳಿಯ ಅಲಯನ್ಸ ಕನ್ವೇನಷನ್ ಸೆಂಟರ್‌ನಲ್ಲಿ ಮೇ 3 ರಂದು ಕರ್ನಾಟಕ ರಾಜ್ಯದ ಕೃಷಿ ಸಚಿವ ಎನ್ ಚೆಲುವರಾಯ ಸ್ವಾಮಿ ಅವರು ಪ್ರಶಸ್ತಿ ಪತ್ರ, ಫಲಕ ,ಶಾಲು ಹಾಗೂ ನಗದು ಪ್ರದಾನ ಮಾಡಿದರು.

ಈ ಸಮಾರಂಭದಲ್ಲಿ ಎಡನೀರು ಮಠದ ಶ್ರೀ ಸಚ್ಚಿದಾನಂದ ಭಾರತಿ ಶ್ರೀಪಾದಂಗಳವರು ಶ್ರೀಮದ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ರಾಜ್ಯದ ವಿಧಾನ ಪರಿಷತ್ ಸದಸ್ಯರಾದ ಮಂಜುನಾಥ ಭಂಡಾರಿ, ಕೇರಳದ ಮಂಜೇಶ್ವರ ಕ್ಷೇತ್ರದ ಶಾಸಕರಾದ ಎ.ಕೆ.ಎಂ ಅಶ್ರಫ್, ಪ್ರಸಿದ್ದ ಉದ್ಯಮಿ ಡಾ. ಸದಾಶಿವ ಶೆಟ್ಟಿ ಕುಳೂರು ಕನ್ಯಾನ್, ಸ್ವಾಗತ ಸಮಿತಿ ಅಧ್ಯಕ್ಷರಾದ ಕೆಕೆ ಶೆಟ್ಟಿ ಕುತ್ತಿಕ್ಕಾರು, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಸಂಜೀವಕುಮಾರ ಅತಿವಾಳೆ, ಶಿವರೆಡ್ಡಿ ಖ್ಯಾಡೆದ್, ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರವಿ ನಾಯ್ಕಾಪು, ಕಾಸರಗೋಡು ಕೆಯುಡಬ್ಲ್ಯುಜೆ ಅಧ್ಯಕ್ಷರಾದ ಎ. ಆರ್ ಸುಬ್ಬಯ್ಯ ಕಟ್ಟೆ, ಸೇರಿದಂತೆ ಇನ್ನಿತರ ಪ್ರಮುಖರು ಹಾಜರಿದ್ದರು. ಈ ಸಂದರ್ಭದಲ್ಲಿ ಮೌಲಾನಾಸಾಬ್ ಸೇರಿದಂತೆ ಒಟ್ಟು 21 ವಿವಿಧ ಪತ್ರಕರ್ತರಿಗೆ ದತ್ತಿ ನಿಧಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಇದೆ ಸಂದರ್ಭದಲ್ಲಿ ಪತ್ರಕರ್ತರಿಗೆ ಪಿಂಚಣಿ ಯೋಜನೆಗೆ ಚಾಲನೆ ನೀಡಿ ಅಲ್ಲಿನ 3 ಜನರಿಗೆ ಪ್ರತಿ ತಿಂಗಳು 3 ಸಾವಿರ ರು. ಪಿಂಚಣಿಯ ವ್ಯವಸ್ಥೆ ಕಲ್ಪಿಸಲಾಗಿದೆ. ಇದೇ ಸಂದರ್ಭದಲ್ಲಿ ಕಾಸರಗೋಡು ಜಿಲ್ಲಾ ಪತ್ರಕರ್ತರಿಗೆ ಸಂಘದ ಗುರುತಿನ ಚೀಟಿ ವಿತರಣೆ ಹಾಗೂ ಗಡಿನಾಡ ಸಾಧಕರಿಗೆ ಸನ್ಮಾನ ಕೂಡ ನಡೆಯಿತು.

ಕಾರ್ಯಕ್ರಮಕ್ಕೂ ಮುನ್ನ ವಿವಿಧ ಕಲಾವಿದರಿಂದ ಶೋಭಾಯಾತ್ರೆ ಜರುಗಿದ್ದು ಎಲ್ಲ ಅತಿಥಿಗಳಿಗೆ ಮೆರವಣಿಗೆಯ ಮೂಲಕ ಕಾರ್ಯಕ್ರಮದ ಸ್ಥಳಕ್ಕೆ ಕರೆತರಲಾಯಿತು. ನಂತರ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

# ಜಾತಿ ಜನಗಣತಿಯ ಕ್ರ.ಸಂ. ೬೧ರಲ್ಲಿ ಮಾದಿಗ ಎಂದೇ ಬರೆಸಿ: ಚಂದ್ರಕಾಂತ ಹಿಪ್ಪಳಗಾಂವ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.5: ಮೇ 5 ರಿಂದ 17ರ ವರೆಗೆ ಸಮೀಕ್ಷೆದಾರರು ಮನೆಮನೆಗೆ ಸಮೀಕ್ಷೆ ಮಾಡಲು ಬರುತ್ತಾರೆ. ಆದ್ದರಿಂದ ಕಾಲಂ ನಂ 61ರಲ್ಲಿ ಮಾದಿಗ ಎಂದೇ ಬರೆಸಬೇಕೆಂದು ಮಾದಿಗ ಸಮಾಜದ ಮುಖಂಡರಾದ ಚಂದ್ರಕಾಂತ ಹಿಪ್ಪಳಗಾಂವ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಈ ಮೇಲಿನ ಅವಧಿಯಲ್ಲಿ ನೀವು ಮನೆಯಲ್ಲಿ ಸಿಗದೇ ಇದ್ದಾಗ ಮೇ. 19 ರಿಂದ 21ರ ವರೆಗೆ ಆಯಾ ನಿಮ್ಮ ಗ್ರಾಮ, ನಗರ ಪಟ್ಟಣದ ಮತಗಟ್ಟೆಯಲ್ಲಿ ಹೋಗಿ ಸಮೀಕ್ಷೆದಾರರ ಹತ್ತಿರ ಮಾದಿಗ ಎಂದು ನಮೂದಿಸಿ. ಈ ಮೇಲಿನ ಎರಡೂ ಸಂದರ್ಭಗಳಲ್ಲಿ ನೀವು ಸಿಗದೇ ಇರುವ ಸಂದರ್ಭದಲ್ಲಿ ಮೇ 21 ರಿಂದ 23ರ ವರೆಗೆ ಆನ್‌ಲೈನ್‌ನಲ್ಲಿ ನೊಂದಾಯಿಸಿಕೊಳ್ಳಬೇಕು. ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಈ ಮೂರು ಪದ ಬಿಟ್ಟು ಕೇವಲ ಮಾದಿಗ ಎಂದೇ ನಮೂದಿಸಿ ಎಂದು ಸಮಾಜದ ಬಾಂಧವರಿಗೆ ಸಲಹೆ ನೀಡಿದರು.

ಹೆಚ್ ಆಂಜನೇಯ ಅಭಿಮಾನಿಗಳ ಬಳಗದ ಅಧ್ಯಕ್ಷ ದೇವಿದಾಸ್ ಚಿಂತಾಲಗೇರಾ ಮಾತನಾಡಿ ಸುಮಾರು 35 ವರ್ಷಗಳಿಂದ ಒಳಮೀಸಲಾತಿಗಾಗಿ ಹೋರಾಟ ನಡೆಯುತ್ತಿದೆ. ಮಂದಕೃಷ್ಣ ಮಾದಿಗ ಅವರ ಅವಿರತ ಹೋರಾಟದ ಫಲ ಸುಪ್ರಿಂ ಕೋರ್ಟ್ ಒಳಮೀಸಲಾತಿ ಜಾರಿ ಮತ್ತು ಸಿದ್ಧರಾಮಯ್ಯ ಅವರ ದಿಟ್ಟ ಕ್ರಮದಿಂದ ನಮ್ಮ ಮುಂದಿನ ಪೀಳಿಗೆಗೆ ಒಳಿತಾಗಲಿದೆ. ತಪ್ಪದೇ ಮಾದಿಗ ಎಂದು ಬರೆಸಬೇಕೆಂದು ತಿಳಿಸಿದರು. ಕರಪತ್ರಗಳನ್ನು ಎಲ್ಲರ ಮನೆಗೆ ತಲುಪಿಸಿ ಜಾಗೃತಿ ಮೂಡಿಸಲಾಗುತ್ತಿದೆ ಎಂದರು. ಮುಖಂಡರಾದ ಜಾನಸನ್ ಘೋಡೆ, ಸುಧಾಕರ ಕೊಳ್ಳೂರ, ಸಂಜೀವಕುಮಾರ ರಂಜೋಳಕರ್ ಮಾತನಾಡಿದರು. ಇದೇ ವೇಳೆ ಶಾಮಣ್ಣ ಬಂಬುಳಗಿ ಸೇರಿದಂತೆ ಸಮಾಜದ ಮುಖಂಡರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಜಾತಿ ಜನಗಣತಿ ಸಮೀಕ್ಷೆಯಲ್ಲಿ ಹೊಲೆಯ ಬಲಗೈ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ ಹೊರಡಿಸಿದ 37 ಜಾತಿ ಹೆಸರುಗಳಲ್ಲಿ ಒಂದನ್ನು ನಮೂದಿಸಿ: ಪ್ರದೀಪ ಜಂಜೀರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ. 05 : ಒಳಮೀಸಲಾತಿ ವಿಚಾರದಲ್ಲಿ ದಲಿತ ಸಮುದಾಯದಲ್ಲಿ ಉಂಟಾಗಿರುವ ಬಿಕ್ಕಟ್ಟನ್ನು ದೂರ ಮಾಡಲು ರಾಜ್ಯ ಸರ್ಕಾರವು ಮೇ 5 ರಿಂದ 17ರ ವರೆಗೆ ಸಮೀಕ್ಷೆ ಹಮ್ಮಿಕೊಂಡಿದೆ. ಅಧಿಕಾರಿಗಳು ಸಮೀಕ್ಷೆಗಾಗಿ ನಿಮ್ಮ ಮನೆಗೆ ಬಂದಾಗ ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆ ಹೊರಡಿಸಿದ ಪರಿಶಿಷ್ಟ ಜಾತಿಗೆ ಸೇರಿದ ಹೊಲೆಯ, ಬಲಗೈ, ಛಲವಾದಿ, ಮಹರ್, ಪರಯ್ಯ, ಮಾಲಾ ಗುಂಪಿಗೆ ಸಂಬಂಧಿಸಿದ ಸಮಾನಾಂತರ ಜಾತಿಗಳ ಪಟ್ಟಿಯಲ್ಲಿರುವಂತೆ 37 ಹೆಸರಿನಲ್ಲಿ ಒಂದನ್ನು ನಮೂದಿಸಬೇಕೆಂದು ಛಲವಾದಿ ಮಹಾಸಭಾ ಅಧ್ಯಕ್ಷ ಪ್ರದೀಪ ಜಂಜಿರೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಕರ್ನಾಟಕ ರಾಜ್ಯದಲ್ಲಿ ಎಸ್‌ಸಿ ಹೊಲೆಯ ಸಮುದಾಯವನ್ನು 37 ಹೆಸರಿನಿಂದ ಕರೆಯುತ್ತಾರೆ. ಬೀದರ ಜಿಲ್ಲೆಯಲ್ಲಿ ಯಾವುದೇ ಸಮಸ್ಯೆಯಿಲ್ಲ. ಹೊಲೆಯ ಎಂದು ಬರೆಸಬೇಕು. ಜಾತಿ ಜನಗಣತಿ ಕುರಿತು ಸಮಾಜದ ಬಾಂಧವರಲ್ಲಿ ಜಾಗೃತಿ ಮೂಡಿಸಲು 30 ಸಾವಿರ ಕರಪತ್ರಗಳನ್ನು ಮುದ್ರಿಸಿ ಹಂಚಲಾಗುತ್ತಿದೆ. ಪ್ರತೀ ತಾಲೂಕಾಗಳಲ್ಲಿ ತಂಡ ರಚನೆ ಮಾಡಲಾಗಿದೆ ಎಂದರು. ಪ್ರತಿಯೊಬ್ಬರೂ ವಿಶೇಷವಾಗಿ ಯುವಕರು ಜಾತಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕು. ದಾಖಲೆಗಳಲ್ಲಿ ಸರಿಯಾಗಿ ನಮೂದಿಸದಿದ್ದರೆ ಮುಂದಿನ ಪೀಳಿಗೆಗೆ ಯಾವುದೇ ಸರ್ಕಾರಿ ಸೌಲಭ್ಯಗಳು ಸಿಗುವುದಿಲ್ಲ. ವೈಯಕ್ತಿಕ ಕೆಲಸಗಳು, ಕಾರಣಗಳು, ಕಾರ್ಯಕ್ರಮಗಳನ್ನು ಬಿಟ್ಟು ಸಮೀಕ್ಷೆಯಲ್ಲಿ ಭಾಗವಹಿಸಬೇಕು. ಸಂಖ್ಯೆ ಯಾರದ್ದೇ ಹೆಚ್ಚಿರಲಿ ಕಡಿಮೆಯಿರಲಿ. ನಮಗೆ ಸಂತೋಷವಿದೆ. ಆದರೆ ಸಮಾಜದ ನಿಖರ ಮಾಹಿತಿಗಾಗಿ ಜಾತಿ ಹೆಸರು ನಮೂಸಿಸಬೇಕೆಂದು ತಿಳಿಸಿದರು.

ಛಲವಾದಿ ಮಹಾಸಭೆ ಉಪಾಧ್ಯಕ್ಷ ದೇವಿಂದ್ರ ಸೋನಿ, ಗೌರವಾಧ್ಯಕ್ಷ ಕೆ.ಟಿ.ವಿಶ್ವನಾಥ ಸೇರಿದಂತೆ ಇನ್ನಿತರರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ರಾಜ್ಯದ ಸಮಸ್ತ ಮಾದಿಗ ಸಮುದಾಯಕ್ಕೆ ಮನವಿ : ಜಾನಸನ ಘೋಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.05: ಗೌರವಾನ್ವಿತ ಜಸ್ಟೀಸ್ ನಾಗಮೋಹನದಾಸ್ ಸಮಿತಿಯವರ ತಂಡ ಒಳ ಮೀಸಲಾತಿ ಜಾರಿಗಾಗಿ ಪರಿಶಿಷ್ಟ ಜಾತಿಗಳಲ್ಲಿನ ಉಪ ಜಾತಿಗಳ ಗಣತಿಗಾಗಿ, ತಮ್ಮ ಮನೆಗಳಿಗೆ ಭೇಟಿನೀಡಿ, ನಿಮ್ಮ ಉಪಜಾತಿಗಳ ಮಾಹಿತಿ ಕೇಳಿದಾಗ ತಾವುಗಳು ತಮ್ಮ ಜಾತಿ "ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ" ಅಥವಾ "ಎಐ, ಎಆ, ಎಎ" ಯಾವುದೇ ಇರಲಿ.

ನಿಮ್ಮ ಜಾತಿ ಮಾದಿಗ (ಕಾಲಂ–61) ಜಾತಿ ಎಂದೇ, ಬರೆಯಿಸಿ. ಮಾದಿಗ ಮುಖಂಡ ಜಾನಸನ ಘೋಡೆ ಮನವಿ ಮಾಡಿದ್ದಾರೆ.

# ಜಾತಿ ನಿರ್ಮೂಲನೆ ಮಾಡಿ ಜ್ಯೋತಿ ತತ್ವ ನೀಡಿದವರು ಶರಣರು: ಚನ್ನಬಸವಾನಂದ ಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.05: ಬಸವಾದಿ ಶರಣರು ಒಂದು ಜಾತಿಗೆ ಸೀಮಿತರಲ್ಲ. ಅದಕ್ಕಾಗಿಯೇ ವಿಶ್ವಗುರು ಬಸವಣ್ಣನವರನ್ನು ಜಗಜ್ಯೋತಿ ಎಂದು ಕರೆ–ಯುತ್ತಾರೆ. ಜಾತಿ ನಿರ್ಮೂಲನೆ ಮಾಡಿ ಜ್ಯೋತಿ ತತ್ವ ಜಗತ್ತಿನಲ್ಲಿ ಸಾರಿದವರು ಬಸವಾದಿ ಶರಣರು ಎಂದು ರಾಷ್ಟ್ರೀಯ ಬಸವದಳದ ಕೇಂದ್ರ ಸಮಿತಿ ಅಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ನುಡಿದರು. ನಗರದ ಅಲ್ಲಮಪ್ರಭು ನಗರದ ಉದ್ಯಾನದಲ್ಲಿ ಜರುಗಿದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ 892ನೇ ಜಯಂತಿ ಉತ್ಸವದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ವಿಶ್ವದ ಮೊಟ್ಟಮೊದಲ ಅನುಭವ ಮಂಟಪವೆಂಬ ಮೊದಲ ಪಾರ್ಲಿಮೆಂಟಿನ ಪ್ರಥಮ ಲೋಕಸಭಾ ಸ್ಪೀಕರ್ ಅಲ್ಲಮಪ್ರಭುದೇವರಾಗಿದ್ದರು. ಪ್ರತಿದಿನ ವಚನಗಳ ಬರೆದು ಚರ್ಚಿಸುತಿದ್ದರು. ಶರಣರು ಒಂದು ಜಾತಿಗೆ ಸೀಮಿತರಲ್ಲ. ಅವರ ಸಂದೇಶಗಳು ಸಾರ್ವಕಾಲಿತ ಸತ್ಯವನ್ನು ಸಾರುತ್ತವೆ. ಮುಂದಿನ ಪೀಳಿಗೆಗೆ ವಚನ ಸಾಹಿತ್ಯ ತಿಳಿಸುವ ಕಾರ್ಯ ಎಲ್ಲಾ ಪಾಲಕರು ಮಾಡಬೇಕು. ಬಸವ ತತ್ವ ಉಳಿಯದಿದ್ದರೆ ಯಾರಿಗೂ ಉಳಿವಿಲ್ಲ. ಜಾಗತಿಕ ಸಮಸ್ಯೆಗಳಿಗೆ ಬಸವಾದಿ ಶರಣರ ವಚನಗಳೇ ಪರಿಹಾರವಾಗಿವೆ ಎಂದು ಶ್ರೀಗಳು ತಿಳಿಸಿದರು.

ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿದ ಬಿಜೆಪಿ ವಿಭಾಗೀಯ ಸಹಪ್ರಭಾರಿ ಈಶ್ವರಸಿಂಗ್ ಠಾಕೂರ ಮಾತನಾಡಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಜಗಜ್ಯೋತಿ ಬಸವಣ್ಣನವರು 12ನೇ ಶತಮಾನದಲ್ಲಿ ಸ್ಥಾಪಿಸಿದ ಅನುಭವ ಮಂಟಪದ ಮಾದರಿಯಲ್ಲಿ ನಮ್ಮ ಸರ್ಕಾರ ಮುನ್ನಡೆಸಿಕೊಂಡು ಹೋಗುತ್ತಿದ್ದೇನೆ ಎಂದು ವಿಶ್ವದ ತುಂಬಾ ಹೇಳುತಾರೆ. ಅಂತಹ ಶರಣರು ಕಾಯಕ ಮಾಡಿ, ವಿಶ್ವಕ್ಕೆ ಸಮಾನತೆಯ ಸಂದೇಶ ನೀಡಿದ ಪವಿತ್ರ ನೆಲದಲ್ಲಿ ನಾವು ಜೀವನ ಸಾಗಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯ. ಕ್ಷೇತ್ರದ ಎಲ್ಲಾ ಜನಾಂಗದವರ ಜೊತೆ ಸಹಪಂಕ್ತಿ ಭೋಜನ ಮಾಡಿ ಶರಣತತ್ವ ಅಳವಡಿಸಿಕೊಂಡಿದ್ದೇನೆ ಎಂದರು. ನಗರಸಭೆ ಸದಸ್ಯ ರಾಜಾರಾಮ ಚಿಟ್ಟಾ ಷಟಸ್ಥಲ ಧ್ವಜಾರೋಹಣ ನೆರವೇರಿಸಿ ಮಾತನಾಡಿ ಅಲ್ಲಮಪ್ರಭು ಓಣಿಯ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡುತ್ತೇನೆ ಎಂದರು. ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಡಾ.ರಾಜಕುಮಾರ ಹೆಬ್ಬಾಳೆ ಮಾತನಾಡಿದರು.

ಅಧ್ಯಕ್ಷತೆಯನ್ನು ಓಣಿಯ ಮುಖಂಡರಾದ ನೂರಂದಪ್ಪ ಗಿರಿ ವಹಿಸಿದ್ದರು. ಕೆ.ಎ.ಎಸ್. ಪಾಸಾದ ಓಣಿಯ ಯುವಕ ಶಿವಕುಮಾರ ಮನೋಹರ ಸ್ವಾಮಿ ಹಾಗೂ ಐಐಟಿ ಪಾಸಾದ ರಾಹುಲ ಚಂದ್ರಕಾಂತ ಪಟ್ನೆ ಅವರನ್ನು ಸನ್ಮಾನಿಸಲಾಯಿತು.

ಮಲ್ಲಿಕಾರ್ಜುನ ಬುಕ್ಕಾ ದಂಪತಿಗಳು ಬಸವಪೂಜೆ ನೆರವೇರಿಸಿದರು. ಶ್ರೀನಾಥ ಕೋರೆ, ಅಕ್ಕಮಹಾದೇವಿ ಸ್ವಾಮಿ ವಚನ ಗಾಯನ ಮಾಡಿದರು. ಬಸವಕುಮಾರ ಚಟನಳ್ಳಿ ಪ್ರಾರ್ಥಿಸಿದರು. ಕೀರ್ತಿ ಘೂಳೆ ವಚನ ನೃತ್ಯ ಮಾಡಿದರು. ಚಂದ್ರಕಾಂತ ಪಟ್ನೆ ಸ್ವಾಗತಿಸಿದರು. ಸುಜೀತಕುಮಾರ ಬಿ ನಿರೂಪಿಸಿದರೆ ಶಶಿಧರ ಹೊಸದೊಡ್ಡಿ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರಮುಖರಾದ ಮಲ್ಲಯ್ಯ ಸ್ವಾಮಿ, ಭೀಮರಾವ ಪೋ.ಪಾಟೀಲ, ವೀರಶೆಟ್ಟಿ ಗಣಾಪುರ, ಚಂದ್ರಶೇಖರ ಸ್ವಾಮಿ, ಶಿವರಾಜ ಪಟ್ನೆ, ಚಂದ್ರಶೇಖರ ರೆಡ್ಡಿ, ಬಸಯ್ಯ ಸ್ವಾಮಿ, ರಾಜಕುಮಾರ ಸ್ವಾಮಿ, ಗಣಪತಿ ಬಿರಾದಾರ, ಗಣಪತರಾವ ಗುಡುರೆ, ಈಶ್ವರಮ್ಮ ಪಾಟೀಲ ಸೇರಿದಂತೆ ಹಲವರಿದ್ದರು. ಕೊನೆಯಲ್ಲಿ ಓಣಿಯ ಶರಣ ಶರಣೆಯರಿಂದ ಆಕರ್ಷಕ ಸಾಂಪ್ರದಾಯಿಕ ಕೋಲಾಟ ನೆರವೇರಿತು.

# ವಿದ್ಯಾರ್ಥಿ ಜೀವನ ಸದುಪಯೋಗ ಪಡೆದುಕೊಳ್ಳಿ: ಡಾ.ಚಂದ್ರಶೇಖರ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 05:'ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ತಮ್ಮ ವ್ಯಾಸಂಗ ಅವಧಿಯಲ್ಲಿ ವಿದ್ಯಾರ್ಥಿ ಜೀವನದ ಸದುಪಯೋಗ ಪಡೆದುಕೊಳ್ಳಬೇಕು' ಎಂದು ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ ಸಲಹೆ ನೀಡಿದರು.

ಪಟ್ಟಣದ ಎಸ್‌ಬಿಸಿಎಸ್ ಕಲೆ ಮತ್ತು ಎಸ್.ವಿ. ವಾಣಿಜ್ಯ ಹಾಗೂ ವಿಜ್ಞಾನ ಪದವಿ ಕಾಲೇಜಿನಲ್ಲಿ ಕಲ್ಯಾಣ ಸಾಹಿತ್ಯ ಮತ್ತು ಶೈಕ್ಷಣಿಕ ಟ್ರಸ್ಟ್ ಕಲಬುರಗಿ ವತಿಯಿಂದ ಈಚೆಗೆ ನಡೆದ ಸಮಕಾಲೀನ ಸಮಾಜದಲ್ಲಿ ಮಾನವಿಕ, ಸಮಾಜ ವಿಜ್ಞಾನ ಮತ್ತು ವಾಣಿಜ್ಯದ ಪಾತ್ರ ಕುರಿತು ಎರಡು ದಿನದ ರಾಷ್ಟ್ರೀಯ ವಿಚಾರ ಸಂಕಿರ್ಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

'ವೈಜ್ಞಾನಿಕ ಯುಗದಲ್ಲಿ ವಿದ್ಯಾರ್ಥಿಗಳು ನಿರಂತರ ಅಧ್ಯಯನ ಮಾಡಬೇಕು. ಅದರ ಜತೆಯಲ್ಲಿ ತಂತ್ರಜ್ಞಾನದ ಪ್ರಾಮುಖ್ಯತೆ ಅರಿತುಕೊಳ್ಳಬೇಕು. ತಲೆ ತಗ್ಗಿಸಿ ಪುಸ್ತಕ ಓದುವ ಹವ್ಯಾಸ ಮೈಗೂಡಿಸಿಕೊಂಡು ಗುರುಹಿರಿಯರನ್ನು ಗೌರವಿಸಿದರೆ ಭವಿಷ್ಯದಲ್ಲಿ ನಿಮ್ಮ ತಲೆ ಎತ್ತಿ ನಡೆಯುವಂತಹ ವಾತಾವರಣ ನಿರ್ಮಾಣವಾಗುತ್ತದೆ' ಎಂದು ಹೇಳಿದರು.

ಬೀದರ್ ವಿಶ್ವವಿದ್ಯಾಲಯದ ಕುಲಪತಿ ಬಿ.ಎಸ್. ಬಿರಾದಾರ ಮಾತನಾಡಿ, 'ಬೀದರ್ ವಿವಿಯ ಅಡಿಯಲ್ಲಿ ನಡೆಯುತ್ತಿರುವ ಹುಮನಾಬಾದ್ ಎಸ್‌ಬಿಸಿಎಸ್ ಮತ್ತು ಎಸ್.ವಿ. ಪದವಿ ಕಾಲೇಜು ಶೈಕ್ಷಣಿಕ ಕ್ಷೇತ್ರದ ಪ್ರಗತಿಗೆ ಪೂರಕವಾಗಿ ಶ್ರಮಿಸುತ್ತಿದೆ. ಬೋಧಕರು, ಕ್ರೀಡಾ ಚಟುವಟಿಕೆಗಳ ಆಯೋಜನೆಗೆ ಪೂರಕವಾದ ಆಟದ ಮೈದಾನ ಸೇರಿದಂತೆ ಎಲ್ಲ ರೀತಿಯ ಸೌಲಭ್ಯಗಳನ್ನು ಹೊಂದಿದೆ. ವಿದ್ಯಾರ್ಥಿಗಳು ಅದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಶರಣ ಬಸವೇಶ್ವರ ವಿಶ್ವವಿದ್ಯಾಲಯ ಕುಲಸಚಿವ ಸಣ್ಣ ಬಸವನಗೌಡ ಡೋಳ್ಳೆಗೌಡರ, ಶ್ರೀನಿವಾಸ ವಿ., ರವೀಂದ್ರನಾಥಪ್ಪ ಕೆ., ಉಮಾಕಾಂತ ಪಾಟೀಲ, ಧನುಕುಮಾರ ಅಂಗಡಿ, ಅಶೋಕಕುಮಾರ ಕರಂಜಿ ಗಾದಗಿ, ದೀಪಕ್ ಕಲಬುರ್ಗಿ, ಪ್ರವೀಣ ಕಲಬುರ್ಗಿ, ವಿಕಾಸ, ಮಲ್ಲಪ್ಪ, ಅರವಿಂದ ಸೇರಿದಂತೆ ಇತರರು ಹಾಜರಿದ್ದರು.

# ನಾಳೆ ವಿದ್ಯುತ್ ವ್ಯತ್ಯಯ

ಬೀದರ : ಮೇ.5: ಹುಮನಾಬಾದ ಕಾರ್ಯ ಮತ್ತು ಪಾಲನೆ ಉಪ–ವಿಭಾಗ ಜೆಸ್ಕಾಂ ವ್ಯಾಪ್ತಿಯ 33ಕೆ.ವಿ ಘಾಟಬೋರಳ ಮಾರ್ಗಗಳಾದ ಘಾಟಬೋರಳ, ಘೋಡವಾಡಿ, ಕನಕಟ್ಟಾ, ಹುಣಸಗೇರಾ, ಸೋನಕೇರಾ, ಚಂದನಹಳ್ಳಿ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ಲೈನ್ ಮಾರ್ಗಗಳು ಸ್ಥಳಾಂತರಿಸುವ ಕಾಮಗಾರಿ ಹಮ್ಮಿಕೊಂಡಿರುವ ಪ್ರಯುಕ್ತ ಮೇ.7 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯವರೆಗೆ 33/11 ಕೆ.ವಿ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ಎಲ್ಲಾ ಫೀಡರ್‌ಗಳು ಮತ್ತು ಕನಕಟ್ಟಾ ಐ.ಪಿ ಫೀಡರ್‌ನಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತಯ ಉಂಟಾಗಲಿದೆ. ಕಾರಣ ಸಾರ್ವಜನಿಕರು ಸಹಕರಿಸಬೇಕೆಂದು ಹುಮನಾಬಾದ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಪ್ರವೇಶಾತಿಗಾಗಿ ಅರ್ಜಿ ಅಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಮೇ.5: ಬೀದರ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಬಾಲಕಿಯರ ವಸತಿ ಕಾಲೇಜು ಮೀರಾಗಂಜ, ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಕಾಲೇಜು ಕಪಲಾಪುರ, ಉನ್ನತೀಕರಿಸಿದ ಮೊರಾರ್ಜಿ ದೇಸಾಯಿ ವಸತಿ ಕಾಲೇಜು ಬಂಬಳಗಿ ಹಾಗೂ ಉನ್ನತೀಕರಿಸಿದ ಮೌಲಾನಾ ಆಜಾದ ಮಾದರಿ ಪದವಿ ಪೂರ್ವ ಕಾಲೇಜು ಮನಿಯಾರತಾಲಿಂ ಸದರಿ ಕಾಲೇಜುಗಳಲ್ಲಿ 2025–26ನೇ ಸಾಲಿನ ಪ್ರಥಮ ಪಿ.ಯು.ಸಿ (ವಿಜ್ಞಾನ ಮತ್ತು ವಾಣಿಜ್ಯ ವಿಭಾಗ)ಕ್ಕೆ ಉಚಿತ ಪ್ರವೇಶಕ್ಕಾಗಿ ಆಫ್‌ಲೈನ್ ಅರ್ಜಿಗಳನ್ನು ಅಹ್ವಾನಿಸಲಾಗಿದೆ ಎಂದು ಬೀದರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶೇ.75ರಷ್ಟು ಸೀಟುಗಳನ್ನು ಅಲ್ಪಸಂಖ್ಯಾತ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಪಾರ್ಸಿ, ಸಿಖ್) ವಿದ್ಯಾರ್ಥಿಗಳಿಗೆ ಹಾಗೂ ಶೇ.25ರಷ್ಟು ಸೀಟುಗಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಳಿಗೆ ಮತ್ತು ಇತರೆ ಹಿಂದುಳಿದ ವರ್ಗದವರಿಗೆ ಮೀಸಲಿಡಲಾಗಿದೆ.

# ನೇರ ಸಂದರ್ಶನ ಆಹ್ವಾನ

ಬೀದರ : ಮೇ.5: ಬೀದರ ವಿಶ್ವವಿದ್ಯಾಲಯ ಬೀದರನಲ್ಲಿ ಶೈಕ್ಷಣಿಕ ಚಟುವಟಿಕೆಗಳಿಗೆ ಹಾಗೂ ಹಣಕಾಸು ಲೆಕ್ಕಚಾರ ನಿರ್ವಹಣೆ ಮತ್ತು ಕಟ್ಟಡ ಕಾಮಗಾರಿ ಮೇಲ್ವಿಚಾರಣೆಗೆ ಸರ್ಕಾರಿ ನಿವೃತ್ತ ಅಧಿಕಾರಿಗಳನ್ನು ನೇಮಿಸಿಕೊಳ್ಳಲು ನೇರ ಸಂದರ್ಶನವನ್ನು ಕರೆಯಲಾಗಿದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಸಚಿವರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಣಕಾಸು ಲೆಕ್ಕ ನಿರ್ವಹಣಾ ಅಧಿಕಾರಿ ಹಣಕಾಸು ವಿಭಾಗ ಅರ್ಹತೆಗಳು: ಅಭ್ಯರ್ಥಿಯು ಅಕೌಂಟ್ ಸೂಪರಿಟೆಂಡೆಂಟ್/ ಆಡಿಟ್ ಆಫೀಸರ್ ನಿವೃತ್ತ ಸರ್ಕಾರಿ ಅಧಿಕಾರಿಯಾಗಿರಬೇಕು. ವಯೋಮಿತಿ 60 ರಿಂದ 67 ವರ್ಷದೊಳಗಿರಬೇಕು. ಹಣಕಾಸು ನಿರ್ವಹಣೆಯ ಅನುಭವ ಹೊಂದಿರಬೇಕು. 20000 ರೂ ಗೌರವಧನ ಪಾವತಿಸಲಾಗುವುದು.

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು/ಸಹಾಯಕ ಅಭಿಯಂತರರು ಕಟ್ಟಡ ಕಾಮಗಾರಿ ವಿಭಾಗ ಅರ್ಹತೆಗಳು: ಅಭ್ಯರ್ಥಿಯು ನಿವೃತ್ತ ಸರ್ಕಾರಿ ಅಧಿಕಾರಿಯಾಗಿದ್ದು, ವಯೋಮಿತಿ 60 ರಿಂದ 67 ವರ್ಷದೊಳಗಿರಬೇಕು. 25000 ರೂ ಗೌರವಧನ ಪಾವತಿಸಲಾಗುವುದು.

ಅರ್ಹರು ದಿನಾಂಕ 08–05–2025 ರಂದು ಬೆಳ್ಳಿಗ್ಗೆ 10.30 ಗಂಟೆಗೆ ಬೀದರ ವಿಶ್ವವಿದ್ಯಾಲಯ ಬೀದರನಲ್ಲಿ ನಡೆಯುವ ನೇರ ಸಂದರ್ಶನಕ್ಕೆ ತಮ್ಮ ಸೇವಾ ಹಾಗೂ ಅರ್ಹತಾ ದಾಖಲೆಗಳೊಂದಿಗೆ ಹಾಜರಾಗಲು ಅವರು ತಿಳಿಸಿದ್ದಾರೆ.

# ಘೋರ ತಪಸ್ಸಿನಿಂದ ಗಂಗೆಯನ್ನು ಧರೆಗೆ ತಂದ ಭಗೀರಥ ಮಹರ್ಷಿಗಳು:ಸಚಿವ ರಹೀಂ ಖಾನ್

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.5:ತಮ್ಮ ಘೋರ ತಪಸ್ಸಿನಿಂದ ಗಂಗೆಯನ್ನು ಧರೆಗೆ ತಂದು ತಮ್ಮ ಪೂರ್ವಜರ ಶಾಪ ವಿಮೋಚನೆಗೊಳಿಸಿ, ಸಕಲ ಜೀವರಾಶಿಗಳಿಗೆ ನೀರಿನ ದಾಹವನ್ನು ತಣಿಸಿದ ಮಹಾನ್ ತಪಸ್ವಿ ಭಗೀರಥ ಮಹರ್ಷಿಗಳು ಛಲ, ದೃಢ ಸಂಕಲ್ಪದ ಪ್ರತೀಕರಾಗಿದ್ದಾರೆ ಎಂದು ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಮ್ ಖಾನ್ ಹೇಳಿದರು.ಅವರು ರವಿವಾರ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಶ್ರೀ ಭಗೀರಥ ಮಹರ್ಷಿ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಭಗೀರಥರ



ತತ್ವಾದರ್ಶಗಳನ್ನು ತಾವೆಲ್ಲರೂ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಪೋಷಕರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು. ದುಶ್ಚಟಕಗಳಿಗೆ ಬಲಿಯಾಗಬಾರದು. ನಮ್ಮ ಸರ್ಕಾರ ಉಪ್ಪಾರ ಸಮಾಜ ಅಭಿವೃದ್ಧಿಗೆ ಬದ್ಧವಾಗಿದೆ. ಈ ಹಿಂದೆ ನಮ್ಮ ಸರ್ಕಾರ ಇದ್ದಾಗ ಉಪ್ಪಾರ ಅಭಿವೃದ್ಧಿ ನಿಗಮ ಸ್ಥಾಪಿಸಿದ್ದೇವೆ. ಮುಂದೆಯೂ ಉಪ್ಪಾರ ಸಮುದಾಯದ ಅಭಿವೃದ್ಧಿಗೆ ಸರ್ಕಾರದಿಂದ ಹಾಗೂ ವಯಕ್ತಿಕ ಸಹಕಾರ ನೀಡಲಾಗುವುದು ಎಂದರು.

ಭಗೀರಥ ಜೀವನ ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಜಗನ್ನಾಥ ಅಲಗೋಲ ಉಪ್ಪಾರ ತಡಪಳ್ಳಿ ಅವರು, ಭಗೀರಥರು ತಮ್ಮ ಪೂರ್ವಜರ ಆತ್ಮಶಾಂತಿ ಹಾಗೂ ಮುಕ್ತಿಗಾಗಿ ಗಂಗೆಯನ್ನು ಭೂಮಿಗೆ ತಂದವರು ಭಗೀರಥರು. ಭಗೀರಥ ಎಂದರೆ ಪ್ರಯತ್ನ, ಪ್ರಯತ್ನ ಎಂದರೆ ಭಗೀರಥ ಆದ್ದರಿಂದ ಅವರ ವಂಶಸ್ಥರಾದ ನಾವುಗಳು ಜೀವನದಲ್ಲಿ ಯಶಸ್ಸನ್ನು ಸಾಧಿಸಲು ಪ್ರಯತ್ನ ಮಾಡುವುದನ್ನು ನಿಲ್ಲಿಸಬಾರದು. ಅವರ ಆದರ್ಶಗಳನ್ನು ಜೀವನದಲ್ಲಿ ಮೈಗುಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮಕ್ಕೂ ಮುನ್ನ ಭಗೀರಥ ಮಹರ್ಷಿಗಳ ಭಾವಚಿತ್ರ ಮೆರವಣಿಗೆಯು ಜಿಲ್ಲಾಧಿಕಾರಿ ಕಚೇರಿಯಿಂದ ಆರಂಭಗೊಂಡು ಶಿವಾಜಿ ವೃತ್ತ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ಹರಳಯ್ಯ ವೃತ್ತ ಹಾಗೂ ರೋಟರಿ ವೃತ್ತದ ಮಾರ್ಗದಿಂದ ಸಾಗಿ ಡಾ.ಚನ್ನಬಸವ ಪಟ್ಟದೇವರು ರಂಗಮಂದಿರ ತಲುಪಿತು.ಈ ಸಂದರ್ಭದಲ್ಲಿ ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೋಡೆ, ಅಪರಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಜಗನ್ನಾಥ ಮೂರ್ತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ್ ಸಿಂಧೆ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾ ಸೋನಾರೆ,ಉಪ್ಪಾರ ಸಮಾಜದ ಜಿಲ್ಲಾಧ್ಯಕ್ಷ ತಾನಾಜಿ ಸಗರ್, ಸಮಾಜ ಪತ್ರಕರ್ತ ಮಲ್ಲಿಕಾರ್ಜುನ ನಾಗರಾಳ, ಶಿವಾಜಿರಾವ ಸಗರ್ ಶರಣಪ್ಪ ಹುಮನಾಬಾದ,ರಾಜಶೇಖರ್ ಸೇಡಂಕರ್, ಬಾಬುರಾವ ಕೊಳ್ಳೂರ್, ಮಾಣಿಕರಾವ್ ಮುತ್ನಾಳ ಸೇರಿದಂತೆ ಸಮಾಜ ಮುಖಂಡರುಗಳು ಉಪಸ್ಥಿತರಿದ್ದರು.

# ವಿಜೃಂಭಣೆಯಿಂದ ಜರುಗಿದ ಶ್ರೀ ರಾಚೋಟೇಶ್ವರ ಜಾತ್ರೋಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:ಮೇ.5:ತಾಲ್ಲೂಕಿನ ಸುಕ್ಷೇತ್ರ ಶರಣನಗರ ಗ್ರಾಮದ ಶ್ರೀ.ರಾಚೋಟೇಶ್ವರ 18 ನೇ ಜಾತ್ರಾಮಹೋತ್ಸವ ಮೇ.1 ಹಾಗೂ 2 ರಂದು ವಿವಿಧ ಧಾರ್ಮಿಕ ಕಾರ್ಮಕ್ರಮ ಗಳೊಂದಿಗೆ ವಿಜೃಂಭಣೆ ಯಿಂದ ನಡೆಯಿತು.

ಮೇ.1 ರಂದು ಶ್ರೀ ರಾಚೋಟೇಶ್ವರ ಉದ್ಭವ ಮೂರ್ತಿಗೆ ಎಣ್ಣೆ ಹಚ್ಚುವ ಕಾರ್ಯಕ್ರಮ ಹಾಗೂ ಧರ್ಮ ಸಭೆ ಕಾರ್ಯಕ್ರಮವನ್ನು ವಿರಕ್ತ ಮಠದ ಶ್ರೀ ಜಯಶಾಂತಲಿಂಗ ಮಹಾಸ್ವಾಮಿಗಳು ಉದ್ಘಾಟಿಸಿ ಮಾತನಾಡಿದ ಅವರು,ಗ್ರಾಮೀಣ ಭಾಗದಲ್ಲಿ ಇಂಥಹ ಜಾತ್ರಾ ಮಹೋತ್ಸವಗಳು ಮೇಲಿಂದ ಮೇಲೆ ನಡೆಯಬೇಕು ಇದರಿಂದ ಗ್ರಾಮದಲ್ಲಿ ಏಕತೆ ಭಾವನೆ ಮೂಡುತ್ತದೆ ಎಂದರು.

ಖೇರ್ಡಾ(ಬಿ)ಮಠದ ಶಿವಲಿಂಗ ಮಹಾಸ್ವಾಮಿಗಳು ಅವರು ಮಾತನಾಡಿ, ಮನೆಯಲ್ಲಿ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಜೊತೆಗೆ ಉತ್ತಮ ಶಿಕ್ಷಣ ನೀಡಬೇಕು. ಅಂದಾಗ ಮಾತ್ರ ನಿಮ್ಮ ಮಕ್ಕಳು ಸಮಾಜದಲ್ಲಿ ಸುಸಂಸ್ಕೃತ ವ್ಯಕ್ತಿಯಾಗಿ ಬೆಳೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ನಂತರ ಹಳ್ಳಿಖೇಡ(ಬಿ) ಗ್ರಾಮದ ಚಿಕ್ಕಮಠದ ಶ್ರೀ ಪಂಡಿತರಾಧ್ಯಶಿವಾಚಾರ್ಯರು ಆಶೀರ್ವಚನ ನೀಡಿದರು. 101 ಮುತ್ತೈದಿಯರಿಗೆ ಉಡಿ ತುಂಬುವ ಕಾರ್ಯಕ್ರಮ 60 ವರ್ಷ ಮೇಲ್ಪಟ್ಟ ಪೋಷಕರಿಗೆ ವಿಶೇಷಗೌರವ ಸಲ್ಲಿಸಲಾಯಿತು ಮತ್ತು ಸಂಜೆ ಸಂಗೀತ ಮತ್ತು ರಸ ಮಂಜರಿ ಕಾರ್ಯಕ್ರಮ ನಡೆದವು.

ಮೇ.2 ರಂದು ಬೆಳಗ್ಗೆ ಮೂರ್ತಿ ರುದ್ರಾಭಿಷೇಕ ಮತ್ತು ಗ್ರಾಮದಲ್ಲಿ ಪಲ್ಲಕ್ಕಿ ಮಹೋತ್ಸವ ಹಾಗೂ ಸಾಂಸ್ಕೃತಿ ಕಾರ್ಯಕ್ರಮ ನಡೆದವು.

ಜೈ ಭಾರತ ಮಾತಾ ಸೇವಾ ಸಮಿತಿ(ರಿ) ನವ ದೈಹಲಿ ರಾಷ್ಟ್ರೀಯ ಸಂಸ್ಥಾಪಕ ಅಧ್ಯಕ್ಷರಾದ ಶ್ರೀ ಹವಾ ಮಲ್ಲಿನಾಥ ಮಹರಾಜರು ಕಾರ್ಯಕ್ರಮವನ್ನು ದಿವ್ಯ ಸಾನ್ನಿಧ್ಯ ವಹಿಸಿದವರು.

ಈ ಸಂದರ್ಭದಲ್ಲಿ ಸಿದ್ಧಾರೂಢ ಸರಡಗಿ, ಲಿಂಗರಾಜ ಶಿವರಾಜ ಸರಡಗಿ,ಶರಣು ಬಗ್ದೂರಿ, ಧನರಾಜ ಪೊಲೀಸ್ ಪಾಟೀಲ್, ವೀರಯ್ಯಾ ಮಠ, ಶಿವಲೀಂಗಯ್ಯಾ ಮಠ, ಚನ್ನಯ್ಯಾ ಮಠ, ಕಂಠಯ್ಯಾ ಮಠ ಹಾಗೂ ಶ್ರೀ ರಾಚೋಟೇಶ್ವರ ದೇವಸ್ಥಾನ ಪಂಚ ಕಮಿಟಿ ಹಾಗೂ ಶಿವಶಕ್ತಿ ಯುವಕ ಮಂಡಳಿ ಮತ್ತು ಭಕ್ತರು,ಗ್ರಾಮಸ್ಥರು ಸೇರಿದಂತೆ ಮತ್ತಿತರರು ಇದ್ದರು.

# ಕೇಡಿಲ್ಲದ ಸಮಾಜದ ನಿರ್ಮಾಣವೇ ಬಸವ ವಾದ : ಡಾ. ಬಸವಲಿಂಗ ಪಟ್ಟದೇವರು



ಮಲ್ಲಮ್ಮ ನುಡಿ ವಾರ್ತೆ

ಹುಲಸೂರ:ಮೇ.5: ಎಲ್ಲ ಸಮುದಾಯಗಳನ್ನು ಒಳಗೊಳ್ಳುವಿಕೆ, ಎಲ್ಲರನ್ನೂ ಗೌರವಿಸುವ , ಆದರಿಸುವುದೇ ಬಸವತತ್ವವಾಗಿದೆ. ಸಮಾನತೆಯ ದೃಷ್ಟಿಕೋನ ಬೆಳೆಸುವುದೇ ಬಸವವಾದ ಎಂದು ಬಸವಕಲ್ಯಾಣದ ಅನುಭವ ಮಂಟಪ ಅಧ್ಯಕ್ಷ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲೂಕಿನ ಗಡಿಗೌಡಗಾಂವ ಗ್ರಾಮದಲ್ಲಿ ಭಾನುವಾರ ಆಯೋಜಿಸಿದ್ದ ಬಸವ ಜಯಂತಿ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಕೇಡಿಲ್ಲದ ಸಮಾಜದ ನಿರ್ಮಾಣವೇ ಬಸವವಾದವಾಗಿದೆ. ಚಲನಶೀಲ ಸಮಾಜವನ್ನು ರೂಪಿಸುವ ಸಿದ್ಧಾಂತವನ್ನು ಬಸವವಾದ ಪ್ರತಿಪಾದಿಸುತ್ತದೆ ಎಂದರು.

ಆಸೆ ಆಮಿಷಗಳಿಲ್ಲದೆ, ಸ್ಥಾನ ಮಾನಗಳನ್ನು ಅಪೇಕ್ಷಿಸದೆ ಬಸವಾದಿ ಶರಣರ ತತ್ವ ಸಿದ್ಧಾಂತ ಪ್ರಸಾರ ಮಾಡುವ ಹೊಣೆಗಾರಿಕೆ ಈ ಕಾಲದ ಯುವ ಸಮುದಾಯದ ಮೇಲಿದೆ. ಶರಣರ ಚಿಂತನೆಗಳು ಜನ ಸಮುದಾಯಕ್ಕೆ ತಲುಪಿಸಿದವರು ತಾವಾಗಿಯೇ ಅಸ್ಮಿತೆಯೊಂದನ್ನು ರೂಪಿಸಿಕೊಳ್ಳಲು ಸಾಧ್ಯ ಎಂದರು.

ಬಸವಣ್ಣನವರ ತತ್ವ ಚಿಂತನೆ ಹಳ್ಳಿ ಹಳ್ಳಿಗಳಲ್ಲಿ ನೆಲೆಯೂರುವ ಅಗತ್ಯವಿದೆ. ಶರಣರ ಸಾಮರಸ್ಯದ ಪರಿಕಲ್ಪನೆ ಹಳ್ಳಿಗಳಲ್ಲಿ ಇಂದಿಗೂ ಜೀವಂತವಾಗಿದೆ. ಹಳ್ಳಿಗರ ಮನಸ್ಸು ಒಡೆಯುವ ಹಲವು ಅಂಶಗಳನ್ನು ಶರಣರ ತತ್ವಾದರ್ಶಗಳ ಓದು ಅಧ್ಯಯನದಿಂದ ಎದುರಿಸಲು ಸಾಧ್ಯ ಎಂದರು.

ನೇತ್ರತ್ವ ವಹಿಸಿದ್ದ ಬಸವಕಲ್ಯಾಣ ಬಸವ ಮಹಾಮನೆಯ ಸಿದ್ಧರಾಮೇಶ್ವರ ಸ್ವಾಮೀಜಿ ಮಾತನಾಡಿ, ಬಸವ ಜಯಂತಿ ಸೇರಿ ಶರಣರ ನೆನಪಿನ ದಿನಗಳಂದು ಸಾಮೂಹಿಕ ವಿವಾಹಗಳು ಮಾಡಿರಿ. ಬಸವಣ್ಣನವರ 'ಕಳಬೇಡ, ಕೊಲಬೇಡ' ವಚನವೊಂದನ್ನೇ ಅರಿತು ನಡೆದರೆ ಯಾವುದೇ ವ್ಯಾಜ್ಯ ಇರದು ಎಂದರು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ಶಾಸಕ ಶರಣು ಸಲಗರ ಮಾತನಾಡಿ, ಭಾರತೀಯ ಸಾಮಾಜಿಕ ಸಂದರ್ಭದಲ್ಲಿ ಬಸವಣ್ಣನವರು ಹೆಚ್ಚು ವೈಜ್ಞಾನಿಕ ಹಾಗೂ ವೈಚಾರಿಕ ಅರಿವು ಮೂಡಿಸಿದ ಗುರು. ಇಡೀ ನಾಡಿಗೆ ಸಾಂಸ್ಕೃತಿಕ ಹಿರೋ. ವೈಯಕ್ತಿಕ ಹಾಗೂ ಸಾಮಾಜಿಕವಾಗಿ ಅವರಷ್ಟು ಪರಿಶುದ್ಧ ಹಾಗೂ ಪ್ರಾಮಾಣಿಕ ವ್ಯಕ್ತಿತ್ವ ಮತ್ತೆಲ್ಲೂ ಕಾಣಲು ಸಾಧ್ಯವಿಲ್ಲ. ಭಾರತದ ಬಹುದೊಡ್ಡ ತತ್ವಜ್ಞಾನಿ, ಸಾಂಸ್ಕೃತಿಕ ನಾಯಕ ಎಂದು ಕರೆಯಿಸಿಕೊಳ್ಳುವ ಘನತೆ ಬಸವಣ್ಣನವರು ಹೊಂದಿದ್ದಾರೆ. ಅವರು ಹೇಳಿದ ಮೌಢ್ಯ ವಿರೋಧಿ ನಿಲುವು, ಕಂದಾಚಾರ ನಿಷೇಧದ ಆಲೋಚನೆ ಎಂದಿಗೂ ಪ್ರಸ್ತುತ ಎಂದರು.

ಹುಲಸೂರ ಬಸವ ಕೇಂದ್ರದ ಅಧ್ಯಕ್ಷ ಆಕಾಶ ಖಂಡಾಳೆ ಮಾತನಾಡಿ, ಬಸವಣ್ಣನವರು ಜಾತ್ಯತೀತ ಸಮಸಮಾಜ ರೂಪಿಸಿದ ಮಹಾನ್ ಚೇತನ. ಅವರು ನೀಡಿದ ತತ್ವ ಚಿಂತನೆ ಎಲ್ಲರಿಗೂ ದಾರಿ ದೀಪವಾಗಿವೆ ಎಂದರು.

ತಾಪಂ ಮಾಜಿ ಸದಸ್ಯ ಶಬ್ಬೀರ್ ಸಾಬ್ ಮಾತನಾಡಿ,ಬಸವಣ್ಣನವರು ಮಹಾ ಮಾನವತಾವಾದದ ಪಾಠ ಮಾಡಿದ ಮೇಷ್ಟು. ಸಮಾಜದ ಎಲ್ಲರನ್ನೂ ತಮ್ಮವನೆಂಬ ಶ್ರೇಷ್ಠ ಭಾವನೆ ಮೂಡಲು ಕಾರಣರಾದವರು. ಅವರ ಚಿಂತನೆಗಳು ಜನ ಸಮುದಾಯದಲ್ಲಿ ಎಂದಿಗೂ ಜೀವಂತವಾಗಿದೆ ಎಂದರು.

ಬಸವ ದಳದ ಅಧ್ಯಕ್ಷ ಅನಿಲಕುಮಾರ ತಾಂಬೋಳೆ ಅಧ್ಯಕ್ಷತೆವಹಿಸಿ ಮಾತನಾಡಿದರು.

ಮಾಜಿ ಸೈನಿಕ ಮಹಾರುದ್ರಪ್ಪಾ ಮಂಠಾಳೆ ಬಸವ ಪೂಜೆ ನೆರವೇರಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಚಿತ್ರಾಬಾಯಿ ಸಂಜುರೆಡ್ಡಿ, ಪಿಡಿಓ ಸುಲೋಚನಾ ಬಂಡೆ,

ಬಾಬುರಾವ ಪಾಟೀಲ, ಧೂಳಪ್ಪಾ ಭರಮಶೆಟ್ಟೆ, ಧೂಳಪ್ಪಾ ಹಾಲಪ್ಪ,

ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಸಂತೋಷ ಫುಲೆ, ಸದಸ್ಯರಾದ ದೀಪಕ ಪಾಟೀಲ, ಸಂತೋಷ ಭರಮಶೆಟ್ಟೆ, ಶಹಾಜಿ ದತ್ತಾಸಮಜೆ, ಜಗನ್ನಾಥ ಖ್ಯಾಡೆ, ಭೀಮಾಶಂಕರ ಬಿರಾದಾರ, ದತ್ತಾತ್ರಿ ಮೆಟಕಾರೆ, ಸತೀಶ್ ಹಿರೇಮಠ, ಮಹಾರುದ್ರ ಭರಮಶೆಟ್ಟೆ, ಮಡೊಳಪ್ಪಾ ಬಿರಾದಾರ, ಮಹೇಶ ಪಾಟೀಲ, ಮಹೇಶ ಭರಮಶೆಟ್ಟೆ, ಅಜೀಮ್ ಲಿಂಬೋರೆ, ಧನಾಜಿ ಸಮದರೆ, ಶಿವಾಜಿರಾವ ಸೂರ್ಯವಂಶಿ, ಬಾಬುರಾವ್ ಮೇತ್ರೆ, ಸಂಗಮೇಶ ಬಿರಾದಾರ, ಬೀರಪ್ಪ ಮೇತ್ರೆ, ಬಾಬುರಾವ್ ತಾಂಬೋಳೆ, ಕಿಶನ್ ರಾವ್ ಬಿರಾದಾರ ಸೇರಿದಂತೆ ಹಲವರಿದ್ದರು.

ಈ ಸಂದರ್ಭದಲ್ಲಿ ಗ್ರಾಮದ ಐವತ್ತಕ್ಕೂ ಹೆಚ್ಚು ಜನ ರೈತರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ದೇವಾನಂದ ಕುರದೆ ಸ್ವಾಗತಿಸಿದರು. ಸಂಗಮೇಶ ನಿರೂಪಿಸಿದರು. ಸಂತೋಷ ತಾಂಬೋಳೆ ವಂದಿಸಿದರು.

ಬಸವ ಪ್ರತಿಮೆಯ ಮೆರವಣಿಗೆ

ಬಸವ ಜಯಂತಿ ಪ್ರಯುಕ್ತ ಬೆಳಿಗ್ಗೆ 8ಕ್ಕೆ ಬಸವೇಶ್ವರ ವೃತ್ತದಿಂದ ಬಸವಣ್ಣನವರ ಭಾವಚಿತ್ರ ಮತ್ತು ಪ್ರತಿಮೆಯ ಅದ್ದೂರಿ ಮೆರವಣಿಗೆಗೆ ಗ್ರಾಮ ಪಂಚಾಯಿತಿ ಸದಸ್ಯರಾದ ದೀಪಕ ಪಾಟೀಲ ಮತ್ತು ಸಂತೋಷ ಭರಮಶೆಟ್ಟೆ ಚಾಲನೆ ನೀಡಿದರು. ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಸಂತೋಷ ಫುಲೆ, ಶರಣಬಸಪ್ಪ ಬಿರಾದಾರ, ದೇವೇಂದ್ರ ಆದೇಪ್ಪ , ಸೋಮನಾಥ ಭರಮಶೆಟ್ಟೆ , ಸಂಜುರೆಡ್ಡಿ ಮುಸಾನೆ, ರಾಜಪ್ಪ ಸೋಮಣ್ಣ , ಶಿವಶಂಕರ ತಾಂಬೋಳೆ, ತುಕಾರಾಮ ಮೇತ್ರೆ, ಬಂಡೆಪ್ಪ ಮಿರಕಾಲೆ, ಕಂಟೆಪ್ಪ ಮೇತ್ರೆ, ಮತಾಬ್ ಸಾಬ್, ಅಜೀಮ್ ಲಿಂಬೋರೆ, ಬಾಬುರಾವ್ ತಾಂಬೋಳೆ, ಕಲ್ಯಾಣಿ ಭರಮಶೆಟ್ಟೆ, ಸಂಗಮೇಶ ಭರಮಶೆಟ್ಟೆ ಸೇರಿ ಹಲವರಿದ್ದರು.

ಬ್ಯಾಂಡ್ ಭಾಜಾ, ಡಿಜೆ, ಡೊಳ್ಳು ಕುಣಿತ, ಯುವಕರ ನೃತ್ಯದೊಂದಿಗೆ ಮೆರವಣಿಗೆ ನಡೆಯಿತು. ರೈತರು ತಮ್ಮ ತಮ್ಮ ಎತ್ತುಗಳನ್ನು ಶೃಂಗರಿಸಿ, ಮಕ್ಕಳನ್ನು, ಯುವಕರನ್ನು ಹತ್ತಿಸಿಕೊಂಡು 40 ಎತ್ತಿನ ಗಾಡಿಯು ಮೆರವಣಿಗೆ ಉದ್ದಕ್ಕೂ ಗಮನ ಸೆಳೆದವು.

ಬಸವೇಶ್ವರ ವೃತ್ತದಿಂದ ಗಾಂಧಿ ವೃತ್ತಕ್ಕೆ ಹೋಗಿ ಬಸವೇಶ್ವರ ವೃತ್ತದ ಹತ್ತಿರದ ವೇದಿಕೆಗೆ ಬಂದಿತು.

# ಕಮಲನಗರದಲ್ಲಿ ಜೂನ್‌ನಿಂದ ಪ್ರೌಢ ಶಾಲೆ ಆರಂಭ: ಶಾಸಕ ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ


ಔರಾದ(ಬಿ):ಮೇ.5:ವಿಧಾನಸಭಾ ಕ್ಷೇತ್ರದಲ್ಲಿ ಬರುವ ಕಮಲನಗರದಲ್ಲಿನ ಸರ್ಕಾರಿ ಮಾಧ್ಯಮಿಕ ಪ್ರಾಥಮಿಕ ಶಾಲೆಯನ್ನು ಪ್ರೌಢ ಶಾಲೆಯನ್ನಾಗಿ ಉನ್ನತೀಕರಿಸಿದ್ದು, ಪ್ರಸಕ್ತ ವರ್ಷದಿಂದಲೇ ಕಾರ್ಯಾರಂಭವಾಗಲಿದೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದ್ದಾರೆ.ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಹೊಸ ತಾಲ್ಲೂಕು ಕೇಂದ್ರವಾಗಿರುವ ಕಮಲನಗರದಲ್ಲಿ ಪ್ರೌಢಶಾಲೆಯ ಕೊರತೆಯಿಂದ ವಿದ್ಯಾರ್ಥಿಗಳಿಗೆ ಸಾಕಷ್ಟು ಸಮಸ್ಯೆಯಾಗಿತ್ತು. ವಿದ್ಯಭ್ಯಾಸಕ್ಕಾಗಿ ಖಾಸಗಿ ಶಾಲೆಗಳು ಅಥವಾ ಅನ್ಯ ಪ್ರದೇಶಗಳಿಗೆ ಹೋಗಬೇಕಾದ ಪರಿಸ್ಥಿತಿಯಿತ್ತು. ಈ ಬಗ್ಗೆ ಸರ್ಕಾರಕ್ಕೆ ಹತ್ತಾರು ಪತ್ರಗಳನ್ನು ಬರೆದಿದ್ದೆ. ಶಿಕ್ಷಣ ಸಚಿವರನ್ನು, ಪ್ರಧಾನ ಕಾರ್ಯದರ್ಶಿಗಳು ಮತ್ತು ಆಯುಕ್ತರನ್ನು ಕೂಡ ಸಾಕಷ್ಟು ಸಲ ಭೇಟಿ ಮಾಡಿ ಕಮಲನಗರದಲ್ಲಿ ಪ್ರೌಢ ಶಾಲೆ ಆರಂಭಿಸುವ ಅನಿವಾರ್ಯತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದೆ. ನನ್ನ ನಿರಂತರ ಪ್ರಯತ್ನಕ್ಕೆ ಫಲ ಸಿಕ್ಕಿದ್ದು, ಮಾಧ್ಯಮಿಕ ಪ್ರಾಥಮಿಕ ಶಾಲೆಯನ್ನು ಉನ್ನತೀಕರಿಸಿ ಸರ್ಕಾರ ಆದೇಶ ಹೊರಡಿಸಿದೆ ಎಂದು ಹೇಳಿದ್ದಾರೆ.

ಖಾಸಗಿ ಶಾಲೆಯನ್ನು ಅವಲಂಬಿಸಿದ್ದ ಇಲ್ಲಿನ ವಿದ್ಯಾರ್ಥಿಗಳಿಗೆ ಸರ್ಕಾರಿ ಶಾಲೆಯಲ್ಲಿ ಓದುವ ಅವಕಾಶ ಸಿಗಲಿದೆ. ಇನ್ನು ಮುಂದೆ ಬಡ ವಿದ್ಯಾರ್ಥಿಗಳು ಪ್ರೌಢ ಶಿಕ್ಷಣಕ್ಕಾಗಿ ಅನ್ಯ ಪ್ರದೇಶಗಳಿಗೆ ಅಲೆದಾಡುವುದು ತಪ್ಪಲಿದೆ. ಪ್ರಸಕ್ತ ಜೂನ್‌ನಿಂದಲೇ ಪ್ರೌಢ ಶಾಲೆಗೆ ಚಾಲನೆ ನೀಡಲಾಗುತ್ತದೆ. ಜನತೆ ತಮ್ಮ ಮಕ್ಕಳನ್ನು ಸರ್ಕಾರಿ ಪ್ರೌಢ ಶಾಲೆಗೆ ದಾಖಲಿಸಬೇಕೆಂದು ಶಾಸಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ.13ರಂದು ಶಹಾಪುರದಲ್ಲಿ ಡಾ,ಅಂಬೇಡ್ಕರ, ಡಾ,ಬಾಬುಜೀ ಜಯಂತಿ: ವಾಲ್ ಪೋಸ್ಟರ್ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಮೇ.5:ಮೇ 13ರಂದು ಶಹಾಪುರ ನಗರದಲ್ಲಿ ಭಾರತ ರತ್ನ, ಡಾ,ಬಿ,ಆರ್,ಅಂಬೇಡ್ಕರ,ರವರ 134 ನೆಯ ಜಯಂತಿ ಹಾಗೂ ಹಸಿರು ಕ್ರಾಂತಿ ಹರಿಕಾರ, ಮಾಜಿ ಉಪ ಪ್ರಧಾನಿ ಡಾ,ಬಾಬುಜಗಜೀವನರಾಂ ರವರ 118 ನೇಯ ಜಯಂತಿ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಉಭಯ ನಾಯಕರ ವಾಲ್ ಪೋಸ್ಟರ್‌ನ್ನು ಸಣ್ಣ ಕೈಗಾರಿಕಾ ಸಾರ್ವಜನಿಕ ಉಧ್ಯಮಗಳ ಮಂತ್ರಿಗಳಾದ ಶರಣಬಸಪ್ಪಗೌಡ ದರ್ಶನಾಪುರವರು ಕಚೇರಿಯಲ್ಲಿ



ಕಾಂಗ್ರೆಸ್ ಮುಖಂಡರಾದ. ಅಮರೇಶಗೌಡ ದರ್ಶನಾಪುರ ಮತ್ತು

ನೂತನ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಶಿವುಮಾಂತಪ್ಪ ಸಾಹು ಚಂದಾಪುರವರು ಬಿಡುಗಡೆಗೊಳಿಸಿದರು. ಈ ಸಂಧರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಗೌಡಪ್ಪಗೌಡ ಆಲ್ದಾಳ. ನಗರ ಆಶ್ರೆಯ ಸಮಿತಿ ಅಧ್ಯಕ್ಷರಾದ ವಸಂತಕುಮಾರ ಸುರುಪುರಕರ್, ಮುಖಂಡರಾದ ಶಾಂತಪ್ಪ ಗುತ್ತೆದಾರ, ಡಾ,ಬಿ,ಆರ್,ಅಂಬೇಡ್ಕರ ಮತ್ತು ಡಾ,ಬಾಬು ಜಗಜೀವನರಾಂ ಜಯಂತೋತ್ಸವ ಸಮಿತಿ ಅಧ್ಯಕ್ಷರಾದ ವಾಸುದೇವ ಕಟ್ಟಿಮನಿ, ಕಾಂಗ್ರೆಸ್ ವಕ್ತಾರ ಮಲ್ಲಪ್ಪಗೋಗಿ, ಮುಖಂಡರಾದ ಬಸವರಾಜ ನಾಯ್ಕಲ್, ನಗರ ಎಸ್,ಸಿ,ಘಟಕದ ಕಾಂಗ್ರೆಸ್ ಅಧ್ಯಕ್ಷರಾದ ಭೀಮರಾಯ ಕಾಂಗ್ರೆಸ್, ಮುಖಂಡರಾದ ರಾಮಣ್ಣ ಸಾಧ್ಯಾಪುರ, ಬಸವರಾಜ ಪೂಜಾರಿ, ಲಕ್ಷ್ಮಣ ಶೇಟ್ಟಿ, ಅಯ್ಯಣ್ಣ ಕದರಾಪುರ, ಪರಶುರಾಮ ಮಹಲರೋಜಾ, ರಾಜಶೇಖರ ಕಟ್ಟಿಮನಿ, ಶೇಖಪ್ಪ ಕತ್ತಿ, ಶರಣಪ್ಪ ಮುಡಬೂಲ. ಧರ್ಮಣ ನಾಟೇಕಾರ, ಭೀಮಾಶಂಕರ ಹುಲಿಮನಿ, ಅಂಬ್ರೆಶ ಸಿರ್ನಾಳ, ನಾಗು ಗುತ್ತಿಪೇಟ್, ಮೋಹನರಾಜ ಕನ್ಯಾಕೊಳೂರ, ಸೇರಿದಂತೆ ಅನೇಕ ಗಣ್ಯರು ಹಿರಿಯರು ಜಯಂತೋತ್ಸವ ಸಮಿತಿ ವಿವಿಧ ಘಟಕಗಳ ಪಧಾಧಿಕಾರಿಗಳು, ಕಾರ್ಯಕರ್ತರು ಹಾಜರಿದ್ದರು,

# ಮೇ23 'ಕುಲದಲ್ಲಿ ಕೀಳ್ಯಾವುದೋ' ಚಿತ್ರ ಬಿಡುಗಡೆ : ಮನು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮೇ.5:ಕಾಮಿಡಿ ಕಿಲಾಡಿಗಳು' ಖ್ಯಾತಿಯ ಮಡೆನೂರ್ ಮನು ನಾಯಕನಾಗಿ ನಟಿಸಿರುವ ಕೆ.ರಾಮನಾರಾಯಣ್ ನಿರ್ದೇಶನದ 'ಕುಲದಲ್ಲಿ ಕೀಳ್ಯಾವುದೋ' ಚಿತ್ರ ಮೇ 23ಕ್ಕೆ ರಾಜ್ಯಾದಾದ್ಯಂತ ತೆರೆ ಕಾಣಲಿದೆ.ಶನಿವಾರದಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಮಾತನಾಡಿದ ಚಿತ್ರದ ನಾಯಕ ಮಡೆನೂರ್ ಮನು ಕನ್ನಡ ಕಲಾಭಿಮಾನಿಗಳೇ ಕುಟುಂಬ ಸಮೇತರಾಗಿ ಚಿತ್ರಮಂದಿರಕ್ಕೆ ಬನ್ನಿ ಚಿತ್ರವನ್ನು ನೋಡಿ ಹರಿಸಿ ನಿಮ್ಮ ಬರುವಿಕೆಗೆ ಕಾಯುತ್ತಿದೆ ನಮ್ಮ ಕ್ಷೇತ್ರ ತಂಡ, ಈ ಚಿತ್ರ ಲವ್,ಮಾಸ್,ಮನೋರಂಜನೆ ಒಳಗೊಂಡ ಚಿತ್ರವಾಗಿದೆ,

ಮನೋಮೂರ್ತಿ ಸಂಗೀತ ಸಂಯೋಜಿಸಿದ್ದು, ಚೇತನ್ ಹಾಡಿದ್ದಾರೆ. 'ಈ ಗೀತೆಯಲ್ಲಿ ಯೋಗರಾಜ್ ಭಟ್ ಅಭಿನಯಿಸಿದ್ದಾರೆ, ಈಗಾಗಲೇ ಬಿಡುಗಡೆಯಾಗಿರುವ ಚಿತ್ರದ ಎರಡು ಹಾಡುಗಳು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿವೆ' ಎಂದರು.ಖ್ಯಾತ ನಿರ್ದೇಶಕರು.

ಯೋಗರಾಜ್ ಸಿನಿಮಾಸ್ ಅರ್ಪಿಸುತ್ತಿರುವ ಈ ಚಿತ್ರಕ್ಕೆ ಪರ್ಲ್ ಸಿನಿ ಕ್ರಿಯೇಷನ್ಸ್ ಬಂಡವಾಳ ಹೂಡಿದೆ ರಾಜ್ಯದ ಜನತೆ ಚಲನಚಿತ್ರವನ್ನು ನೋಡಿ ಪ್ರೋತ್ಸಾಹಿಸುವಂತೆ ತಿಳಿಸಿದರು.

ಚಿತ್ರದ ತಾರಾಬಳಗದಲ್ಲಿ ಮೌನ ಗುಡ್ಡೆಮನೆ ಚಿತ್ರದ ನಾಯಕಿ, ಶರತ್ ಲೋಹಿತಾಶ್ವ, ತಬಲನಾಣಿ, ಸೋನಾಲ್ ಮೊಂತೆರೊ, ಕರಿಸುಬ್ಬು, ಬ್ಯಾಂಕ್ ಜನಾರ್ಧನ್, ಹಾಸ್ಯ ನಟ ಉಮೇಶ್, ಡ್ರ್ಯಾಗನ್ ಮಂಜು, ಸೀನ ಮುಂತಾದವರು ಇದ್ದಾರೆ.ಸುದ್ದಿಗೋಷ್ಠಿಯಲ್ಲಿ ಗಂಗಾಧರ್, ಪಟಾಕಿ ಬಸವರಾಜ್ ಉಪಸ್ಥಿತರಿದ್ದರು.

# ಮಾದಿಗ ಎಂದು ಬರೆಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಮೇ.5:ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ ಸಂಘಟನೆಯ ಜಿಲ್ಲಾ ಸಂಚಾಲಕರಾದ ಮೋಹನ್ ರಾಜ್ ದಿನಾಂಕ 5.05.2025 ರಿಂದ ಒಳ ಮೀಸಲಾತಿ ಜಾತಿ ಗಣತಿ ನಡೆಯುತ್ತಿರುವುದರಿಂದ ಪರಿಶಿಷ್ಟ ಜಾತಿಗಳಲ್ಲಿ 101 ಜಾತಿ ಇರುವುದರಿಂದ ಜಾತಿ ಕಾಲಂ ದಲ್ಲಿ ಕಡ್ಡಾಯವಾಗಿ ಮಾದಿಗ ಎಂದು ಬರಿಸಬೇಕು ಎಂದು ತಮ್ಮಲ್ಲಿ ಶಹಾಪುರ್ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ ಸಂಘಟನೆ ಮನವಿ ಮಾಡಿಕೊಂಡಿದ್ದಾರೆ.

## ಜಾತಿ ಗಣತಿ ಹೊಲೆಯ ಎಂದು ನಮೂದಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಮೇ.5:ದಲಿತಸಂಘರ್ಷ ಸಮಿತಿ ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ ಸಂಘಟನೆಯ ರಾಜ್ಯ ಸಂಘಟನಾಕಾರ್ಯದರ್ಶಿಯಾದ ಹೊನ್ನಪ್ಪಗಂಗನಾಳ ಹಾಗೂ ಸುಭಾಸ್‌ತಳವಾರ್ ವಿಭಾಗೀಯ ಅಧ್ಯಕ್ಷರು ಹಾಗೂ ಮಾಳಪ್ಪ ಸಲಾದಪುರ ತಾಲೂಕ ಅಧ್ಯಕ್ಷರು ತಮ್ಮ ಪತ್ರಿಕಾ ಪ್ರಕಟಣೆಗೆ ತಿಳಿಯಬಯಸುವದೇನೆಂದರೆ ದಿನಾಂಕ 5.05.2025 ರಿಂದ ಒಳ ಮೀಸಲಾತಿ ಜಾತಿ ಗಣತಿ ನಡೆಯುತ್ತಿರುವುದ ರಿಂದ

ಪರಿಶಿಷ್ಟ ಜಾತಿಗಳಲ್ಲಿ 101 ಜಾತಿ ಇರುವುದರಿಂದ ಜಾತಿ ಕಾಲಂ ದಲ್ಲಿ ಕಡ್ಡಾಯವಾಗಿ ಹೊಲೆಯ ಎಂದು ಬರಿಸಬೇಕು ಎಂದು ತಮ್ಮಲ್ಲಿ ಶಹಾಪುರ್ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊಫೆಸರ್ ಬಿ ಕೃಷ್ಣಪ್ಪ ಸ್ಥಾಪಿತ ಸಂಘಟನೆ ಮನವಿ ಮಾಡಿಕೊಂಡಿದ್ದಾರೆ.

# ಮಾದಿಗ ಒಳ ಮೀಸಲಾತಿ ಜಾಗೃತಿ ಸಭೆ:ಮಾದಿಗ ಎಂದು ನಮೂದಿಸಲು ಮನವಿ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಮೇ.5:ಸಾಮಾಜಿಕ ನ್ಯಾಯಕ್ಕಾಗಿ ಮಾದಿಗ ಸಂಘಟನೆ ಒಕ್ಕೂಟ ಯಾದಗಿರುವತಿಯಿಂದ ಕಾರ್ಯಕ್ರಮ ಆಯೋಜಿಸಲಾಯಿತು.

ಮೇ.5 ರಿಂದ ನಡೆಯುತ್ತಿರುವ ಮೂರು ಹಂತಗಳ ಸಮೀಕ್ಷೆಯಲ್ಲಿ ನಾವೆಲ್ಲ ಮಾದಿಗ ಸಮುದಾಯದ ಯುವಕರು. ಹಾಗೂ ಸಮಾಜದ ಚಿಂತಕರು ಸಂಘಟನೆಯ ಪದಾಧಿಕಾರಿಗಳು ನಾವೆಲ್ಲರೂ ಪ್ರತಿಯೊಂದು ಮನೆಗೆ ಹೋಗಿ ಸಮುದಾಯದ ಬಗ್ಗೆ ಎಚ್ಚರಿಸಿ ಮಾದಿಗ ಎಂಬ ಹೆಸರನ್ನು ನೋಂದಾಯಿಸಿ ಸಮೀಕ್ಷೆಗೆ ಯಾವ ಮನೆ ವಂಚಿತರಾಗದ ಹಾಗೆ ಬೂತ್ ಮಟ್ಟದಲ್ಲಿ ನಾವೆಲ್ಲರೂ ಸೇರಿ ಸಮೀಕ್ಷೆಗೆ ನೋಂದಾಯಿಸೋಣ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್ ಮಾರಪ್ಪ ರಾಜ್ಯಧ್ಯಕ್ಷರು ವಹಿಸಿದ್ದರು.

ಕಾರ್ಯಕ್ರಮದ ವಿಶೇಷ ಉಪನ್ಯಾಸ ನೀಡಿದ ಪಂಡಿತ್ ನಿಂಬುರ್ಕರ್ ಮಾದಿಗ ಸಮುದಾಯದ ಎಲ್ಲಾ ಹಿರಿಯರು ಹಾಗೂ ಯುವಕರಲ್ಲಿ ವಿನಂತಿ ಮಾಡಿಕೊಳ್ಳುವುದೇನೆಂದರೆ ಯಾವೊಬ್ಬ ಮನೆಯು ವಂಚಿತರಾಗದ ಹಾಗೆ 12 ದಿನಗಳ ಕಾಲ ಈ ನಡೆಯುವ ಸಮೀಕ್ಷೆಯಲ್ಲಿ ಸಹಕರಿಸಿ ಪ್ರತಿಯೊಬ್ಬ ಸದಸ್ಯರನ್ನು ನೋಂದಾಯಿಸಿ ಮಾದಿಗ ಎಂದು ಎಚ್ಚರಿಕೆಯಿಂದ ಹೆಮ್ಮೆಯ ಮಾದಿಗ ಎಂದು ಹೇಳಿಕೊಳ್ಳುವುದರ ಮುಖಾಂತರ ಒಳ ಮೀಸಲಾತಿ ಜಾರಿಗೆ ತರಲು ತುದಿಗಾಲಲ್ಲಿ ನಿಂತಿದ್ದು ನಮ್ಮ ಸಮೀಕ್ಷೆ ಬಹಳ ಅವಶ್ಯಕವಾಗಿದೆ ಯಾವುದೇ ಕಾರಣಕ್ಕೂ ಈ ಸಮೀಕ್ಷೆಗೆ ಪ್ರತಿಯೊಬ್ಬ ಮಾದಿಗ ಯುವಕ ಯುವತಿಯರು ಮುಂಚೂಣಿಯಲ್ಲಿದ್ದು ಹಿರಿಯರಿಗೆ ಮಾರ್ಗದರ್ಶನ ನೀಡಿ ಯಾವ ಒಬ್ಬ ಸದಸ್ಯರು ವಂಚಿತರಾಗದ ಹಾಗೆ ನೋಡಿಕೊಳ್ಳುವ ಜವಾಬ್ದಾರಿ ಈಗಿನ ಯುವಕರಲ್ಲಿದೆ ದಯಮಾಡಿ ಎಚ್ಚರಿಕೆಯಿಂದ ನಾವೆಲ್ಲರೂ ಸೇರಿ ಸಮೀಕ್ಷೆಯ ಸಹಕರಿಸೋಣ ಎಂದು ಪಂಡಿತ್ ನಿಂಬುರ್ಕರ್ ಸಹ ವಿಸ್ತಾರವಾಗಿ ಮಾತನಾಡಿದರು. ಶಿವಪ್ಪ ಮಳಿಕೇರಿ ಕೆಂಬಾವಿ.

ಹನುಮಂತ್ ಮನ್ನಾಪುರ್. ಅಯ್ಯಣ್ಣರಾಜು ಸಿ ಅಂಬರೀಷ್ ಕದ್ರಾಪುರ್. ಶಹಪುರ ತಾಲೂಕು ಹಾಗೂ ಸುರಪುರ ತಾಲೂಕಿನ ಎಲ್ಲ ಮಾದಿಗ ಯುವ ಮುಖಂಡರು ಸಂಘಟನೆ ಪದಾಧಿಕಾರಿಗಳು ಸಮಾಜದ ಚಿಂತಕರು ಉಪಸ್ಥಿತರಿದ್ದರು.

# ಮಾದಿಗ ಸಂಘರ್ಷ ಸಮಿತಿ ತಾಲೂಕ ಅಧ್ಯಕ್ಷ ಮಲ್ಲಪ್ಪ ಕೊಂಬಿನ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಮೇ.5:ನಗರದ ಪ್ರವಾಸ ಮಂದಿರದಲ್ಲಿ ಇಂದು ನಡೆದ ಮಾದಿಗ ಸಂಘರ್ಷ ಸಮಿತಿ ವತಿಯಿಂದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಅಣಬಿ ಗೌರವಾಧ್ಯಕ್ಷರನ್ನಾಗಿ ಶರಣಪ್ಪ ಮದ್ರಿಕೆ ಇವರನು ಮಾಡಲಾಯಿತೆಂದು ಜಿಲ್ಲಾಧ್ಯಕ್ಷರು

ಜಿಲ್ಲಾ ಅಧ್ಯಕ್ಷರ ಆದೇಶ ಮೇರೆಗೆ ಶಿವಶರಣಪ್ಪ ಇರಿಮೇಟಿ ಸಾವುರು ಸಭೆಯ ಉದ್ದೇಶ ಮಾತನಾಡಿದರು 101 ಪರಿಶಿಷ್ಟ ಜಾತಿಯ ಮತ್ತು ಜನಗಣತಿ ಸಮೀಕ್ಷೆ ಇಂದು ಕಾರ್ಯ ಪ್ರಾರಂಭಗೊಂಡಿದೆ ಸಮಾಜದ ವಿದ್ಯಾವಂತರು ಯುವತಿಯರು ಮತ್ತು ಯುವಕರ ಹೆಚ್ಚಿನ ಜವಾಬ್ದಾರಿತಿಯಿಂದ ಪ್ರತಿಯೊಂದು ಮನೆಯನ್ನು ಸರ್ವೆ ಕಾರ್ಯವನ್ನು ಮಾಡಲು ಪ್ರಾರಂಭವಾಗಿದೆ ಬಂದಿರುವ ಶಿಕ್ಷಕರನ್ನು ಹಾಗೂ ಅಧಿಕಾರಿಗಳನ್ನು ನೇಮಿಸಿದ್ದಾರೆ ಕ್ರಮ ಸಂಖ್ಯೆ 61 ರಲ್ಲಿ (ಮಾದಿಗ )ಎಂದು ನೊಂದಾಯಿಸಿಕೊಳ್ಳಬೇಕು ಎಲ್ಲಾ ಗ್ರಾಮಗಳಲ್ಲಿ ಮಾದಿಗ ಸಮಾಜದ ಜನ ಜಾಗೃತಿ ಮೂಡಿಸಬೇಕು ಈ ಸಭೆಯಲ್ಲಿ ಮಾತನಾಡಿದರು ಸರ್ವ ಪದಾಧಿಕಾರಿಗಳು ಹಾಗೂ ಈ ಸಭೆಗೆ ಆಗಮಿಸಿದಂತ ಸಮಾಜದ ಹಿರಿಯ ಮುಖಂಡರು ಶ್ರೀ ಶಾಂತಪ್ಪ ಕನ್ಯಕೋಳೂರು ಶ್ರೀ ಮಲ್ಲಿಕಾರ್ಜುನ್ ಕಟ್ಟಿಮನಿ ಆಖಖ ಮೋಹನ್ ರಾಜ್ ಗೌಡ.ಏ ಆಖಖ ಹನುಮಂತಗ ಬ್ಬೂರು. ಹೊನ್ನಪ್ಪ ಹೊತಪೇಟ ದೇವಪ್ಪ ಮುಡಬೂಳ ಶೇಕಪ್ಪ ಮುಡಬೂಲ ಮತ್ತು ಸಂಘಟನೆ ಪದಾಧಿಕಾರಿಗಳು ಉಪಸ್ಥಿತ ಇದ್ದರು



ಚಿಟಗುಪ್ಪ: ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ರವಿವಾರ ಶ್ರೀ ಭಗೀರಥ ಮಹರ್ಷಿ ಅವರ ಭಾವಚಿತ್ರಕ್ಕೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ಪುಷ್ಪ ನಮನ ಸಲ್ಲಿಸುವ ಮೂಲಕ ಜಯಂತಿ ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಕ ರವಿಕುಮಾರ್ ಸ್ವಾಮಿ, ಸಿಬ್ಬಂದಿಗಳಾದ ಬಕ್ಕಪ್ಪ ಜಾಬಾ, ರಾಜು ತೆಲಂಗ, ಪ್ರಮುಖರಾದ ಭಾಸ್ಕರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತರ ಮೋರಾರ್ಜಿ ದೇಸಾಯಿ ವಸತಿ ಪೂರ್ವ ಕಾಲೇಜುಗಳಲ್ಲಿ 11ನೇ ತರಗತಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಕಲಬುರಗಿ,ಮೇ.05:ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ /ಇಂಟಿಗ್ರೇ–ಟೆಡ್ (ಉನ್ನತ್ತೀಕರಣಗೊಂಡ) ಅಲ್ಪಸಂಖ್ಯಾತರ ಮೋರಾರ್ಜಿ ದೇಸಾಯಿ ವಸತಿ ಶಾಲೆ/ಪದವಿ ಪೂರ್ವ ಕಾಲೇಜುಗಳು, ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಉನ್ನತ್ತೀಕರಿಸಿದ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿ 2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ 11ನೇ ತರಗತಿಗೆ ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಅಲ್ಪಸಂಖ್ಯಾತರಸಮುದಾಯಕ್ಕೆ ಸೇರಿದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಶೇ. 75 ರಷ್ಟು ಹಾಗೂ ಇತರೆ ವರ್ಗಗಳ ವಿದ್ಯಾರ್ಥಿಗಳಿಗೆ ಶೇ. 25 ರಷ್ಟು ಸ್ಥಾನಗಳು ಮೀಸಲಿಡಲಾಗಿದೆ. ಇದರಲ್ಲಿ ಬಾಲಕಿಯರಿಗೆ ಶೇ. 50 ರಷ್ಟು ಸ್ಥಾನಗಳನ್ನು ಮೀಸಲಿರಿಸಲಾಗಿದೆ.

ಆಸಕ್ತಿಯುಳ್ಳವಿದ್ಯಾರ್ಥಿಗಳು/ಪಾಲಕರು ಸೇವಾ ಸಿಂಧು ಪೋರ್ಟಲ್ https://sevasindhuservices.karnataka.gov.in ದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಉಚಿತವಾಗಿ ತಮ್ಮ ಸಮೀಪದ ಅಲ್ಪಸಂಖ್ಯಾತರ ತಾಲೂಕಾ ಮಾಹಿತಿ ಕೇಂದ್ರಗಳಲ್ಲಿ ಅಥವಾ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಡಾ.ಎ.ಪಿ.ಜೆ ಅಬ್ದುಲ ಕಲಾಂ ವಸತಿ ಶಾಲೆಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಕೆಗೆ 2025ರ ಮೇ 17 ರಂದು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ <https://dom.karnataka.gov.in> ವೆಬ್‌ಸೈಟ್‌ನ್ನು, ಸಹಾಯವಾಣಿ ಸಂಖ್ಯೆ 827779990, ಕಲಬುರಗಿ ನಗರದ ಜಿ.ಡಿ.ಎ. ಕಚೇರಿಯ ಮೊದಲನೇ ಮಹಡಿಯಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂ–ಖ್ಯೆ 08472–247260 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಪಕ್ಷಿಗಳಿಗೆ ನೀರುಣಿಸುವ ಕಾರ್ಯಕ್ರಮಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.05:ಒಳ ಮತ್ತು ಹೊರ ಆವರಣದಲ್ಲಿ ಅರವಟಿಕೆ ಮೂಲಕ ಪಕ್ಷಿಗಳಿಗೆ ನೀರು ಕುಡಿಸುವ (ಉಣಿಸುವ) ಕಾರ್ಯಕ್ರಮವನ್ನು ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಸೋಮವಾರ ಹಮ್ಮಿಕೊಳ್ಳಲಾಯಿತು.

ಈ ಸಂಸ್ಥೆಯ ಮುಖ್ಯಸ್ಥ ಡಾ|| ಅನಿತಾ ಆರ್. ಅವರು ಎಲ್ಲಾ ಅಧಿಕಾರಿ/ಸಿಬ್ಬಂದಿಗಳೊಂದಿಗೆ ಸೇರಿ ಕೆಲಸದ ಒತ್ತಡದ ಮಧ್ಯೆಯೂ ಸಹ ಪಕ್ಷಿಗಳಿಗೆ ನೀರು ಉಣಿಸುವ (ಕುಡಿಸುವ) ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಮಾನವನ ಸುಂದರ ಬದುಕಿಗೆ ಸ್ಫೂರ್ತಿದಾಯಕವಾದ ವಾತಾವರಣವನ್ನು ಪಶು–ಪಕ್ಷಿಗಳಿಂದ ಸಿಗಲಿದ್ದು, ನಾವು ಬದುಕುವುದಕ್ಕೆ ಆಹಾರ ನೀರು ಎಷ್ಟು ಮುಖ್ಯವೋ ಅದೇ ರೀತಿ ಮೂಕ ಪಶು–ಪಕ್ಷಿಗಳಿಗೂ ಕೂಡ ಆಹಾರ ನೀರು ಅಷ್ಟೆ ಅವಶ್ಯಕವಾಗಿದೆ. ನಾನು ಅವುಗಳ ಸಂರಕ್ಷಣೆಯನ್ನು ಮಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಹಾಗಾಗೀ ಪಕ್ಷಿಗಳಿಗೆ ಪ್ರತಿಯೊಬ್ಬರು ಆಹಾರ ಮತ್ತು ನೀರನ್ನು ನೀಡುವುದರ ಮೂಲಕ ಅವುಗಳನ್ನು ಕಾಪಾಡಬೇಕು ಎಂದರು.

ಸುಮಾರು 100 ಅರವಟಿಕೆ ಮೂಲಕ ಪಕ್ಷಿಗಳಿಗೆ ನೀರು ಒದಗಿಸುವುದಕ್ಕೆ ಗಿಡಗಳಿಗೆ ಕಟ್ಟಿ ನೀರನ್ನು ಕುಡಿಸಲಾಯಿತು. ಈ ಕಾರ್ಯಕ್ರಮದಲ್ಲಿ ಕಚೇ–ರಿಯ ಅಧೀಕ್ಷಕ ಎಮ್. ಹೆಚ್. ಆಶೇಖಾನ್, ಜೈಲರ್‌ಗಳಾದ ಸಾಗರ ಪಾಟೀಲ್, ಶ್ರೀಮಂತ ಪಾಟೀಲ್, ಶಾಮ ಬಿದರಿ ಹಾಗೂ ಈ ಸಂಸ್ಥೆಯ ಶಿಕ್ಷಕರಾದ ನಾಗರಾಜ ಮುಲಗೆ ಹಾಗೂ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಭಾಗವಹಿಸಿ ಅರವಟಿಕೆಗಳನ್ನು ಕಟ್ಟಿದರು

## ಮೇ 7 ರಂದು ಸಾರಿಗೆ ಅದಾಲತ್

ಕಲಬುರಗಿ,ಮೇ.05:ಕಲಬುರಗಿ ಸಾರ್ವಜನಿಕ ಉದ್ಯಾನವನದ ವೀರಶೈವ ಕಲ್ಯಾಣ ಮಂಟಪದ ಹಿಂದುಗಡೆಯಿರುವ ಹಳೆಯ ಲೋಕೋಪಯೋಗಿ ಇಲಾಖೆಯ ಕಟ್ಟಡದಲ್ಲಿರುವ ಉಪಸಾರಿಗೆ ಆಯುಕ್ತರು ಹಾಗೂ ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಇದೇ ಮೇ 7 ರಂದು ಮಧ್ಯಾಹ್ನ 12 ಗಂಟೆಗೆ ಸಾರಿಗೆ ಲೋಕ್ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಉಪಸಾರಿಗೆ ಆಯುಕ್ತರು ಹಾಗೂ ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ತಿಳಿಸಿದ್ದಾರೆ.

# ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರರ ಪ್ರವಾಸ

ಕಲಬುರಗಿ,ಮೇ.05:ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರರರಾದ ಬಸವರಾಜ ರಾಯರೆಡ್ಡಿ ಅವರು ಮೇ 10 ರಂದು ಶನಿವಾರ ಮಧ್ಯಾಹ್ನ 1 ಗಂಟೆಗೆ ಆಲಮಟ್ಟಿಯಿಂದ ಕಲಬುರಗಿಗೆ ಆಗಮಿಸುವರು.

ನಂತರ ಕಲಬುರಗಿ ಕೆ.ಕೆ.ಆರ್.ಡಿ.ಬಿ. ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಸಭೆಯಲ್ಲಿ ಭಾಗವಹಿಸುವರು. ನಂತರ ಅಂ–ದು ಸಂಜೆ 5 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಹೈದ್ರಾಬಾದ್‌ಗೆ ಪ್ರಯಾಣಿಸುವರು.

## ಜನರ ಸಮಸ್ಯೆಗಳಿಗೆ ಸ್ಪಂದಿಸೋಣ: ಸಂಸದ ಈ.ತುಕಾರಾಮ್



ಬಳ್ಳಾರಿ,ಮೇ 05:ಸಂವಿಧಾನ ಆಶಯಗಳಡಿನೇಮಕಗೊಂಡಿರುವ ಜನಪ್ರತಿನಿಧಿಗಳು, ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕಾಳಜಿ ಹೊಂದಬೇಕು ಎಂದು ಸಂಸದ ಈ.ತುಕಾರಾಮ್ ಅವರು ಹೇಳಿದರು.

ಸಂಡೂರು ಪಟ್ಟಣದ ತಾಲ್ಲೂಕು ಕಚೇರಿ ಆವರಣದಲ್ಲಿ ಸೋಮವಾರ ಏರ್ಪಡಿಸಿದ್ದ ಕೇಂದ್ರ ಮತ್ತು ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮ ಮತ್ತು ತಾಲ್ಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರಿ ಕಚೇರಿಗಳಿಗೆ ಸಾರ್ವಜನಿಕರ ಅಲೆದಾಟ ತಪ್ಪಿಸಲು ಜನರು ಇದ್ದಲ್ಲಿಗೆ ಸರ್ಕಾರದ ಸೇವೆಗಳು ತಲುಪಬೇಕು ಎನ್ನುವ ಉದ್ದೇಶ ಹೊಂದಲಾಗಿದ್ದು, ಉತ್ತಮ ಆಡಳಿತ ನೀಡಲು ಮತ್ತು ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳನ್ನು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪಿಸಲು ಅಧಿಕಾರಿಗಳು ಕ್ರಿಯಾಶೀಲವಾಗಿ ಕಾರ್ಯಪ್ರವೃತ್ತರಾಗಬೇಕಿದೆ ಎಂದು ಹೇಳಿದರು. ಸಂವಿಧಾನದ ವ್ಯವಸ್ಥೆಯಲ್ಲಿ ಜನಪ್ರತಿನಿಧಿಗಳು, ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಸರ್ವಾಂಗೀಣ ಅಭಿವೃದ್ಧಿಗೆ ಮುಂಬರುವ ದಿನಗಳಲ್ಲಿ ಜಿಲ್ಲಾ ಮಟ್ಟದ ದಿಶಾ ಸಮಿತಿ ಸಭೆಯನ್ನು ತಾಲ್ಲೂಕು ಮಟ್ಟದಲ್ಲಿ ಏರ್ಪಡಿಸಲು ಯೋಜಿಸಲಾಗಿದೆ ಎಂದರು. ಸಂಡೂರು ತಹಶೀಲ್ದಾರ್ ಅನಿಲ್ ಕುಮಾರ್ ಮಾತನಾಡಿ, ಜಿಲ್ಲಾಧಿಕಾರಿಗಳ ನಿರ್ದೇಶನದಂತೆ, ಜನರ ಸಮಸ್ಯೆಗಳನ್ನು ಆಲಿಸಿ ಪರಿಹರಿಸಲು ಜಿಲ್ಲಾಡಳಿತ ಮತ್ತು ಸಂಡೂರು ತಾಲ್ಲೂಕು ಆಡಳಿತ ವತಿಯಿಂದ ಜನಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದೆ ಎಂದರು.

ಸಾರ್ವಜನಿಕರ ದೂರು, ಅಹವಾಲುಗಳನ್ನು ಆಲಿಸಿ, ಸಾಧ್ಯವಾದಷ್ಟು ಸಮಸ್ಯೆಗಳನ್ನು ಸ್ಥಳದಲ್ಲಿಯೇ ಮತ್ತು ಉಳಿದವುಗಳನ್ನು ಕಡಿಮೆ ಕಾಲಮಿತಿಯಲ್ಲಿ ಪರಿಹರಿಸಲಾಗುವುದು ಎಂದರು.

ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲು ಸಂಡೂರು ತಾಲ್ಲೂಕು ಕಚೇರಿ ಆವರಣದಲ್ಲಿ 20 ಕ್ಕೂ ಹೆಚ್ಚು ಕೌಂಟರ್ ಗಳನ್ನು ತೆರೆಯಲಾಗಿತ್ತು.

ಇದೇ ಸಂದರ್ಭದಲ್ಲಿ ಸಂಸದರು ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು.

ಈ ವೇಳೆ ಸಂಡೂರು ಪುರಸಭೆಯ ಅಧ್ಯಕ್ಷ ಸಿರಾಜ್ ಹುಸೇನ್, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಪಂ ಸಿಇಒ ಮಹಮ್ಮದ್ ಹ್ಯಾರಿಸ್ ಸುಮೈರ್, ಸಹಾಯಕ ಆಯುಕ್ತ ಪ್ರಮೋದ್ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಕಾರ್ಖಾನೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರ ಸಂಭವನೀಯ ಕ್ಷಯರೋಗ ಪತ್ತೆಗಾಗಿ ಹ್ಯಾಂಡ್‌ಹೋಲ್ಡ್ ಎಕ್ಸ್‌ರೆ ಮಿಷನ್ ಬಳಕೆ : ಡಾ. ಇಂದ್ರಾಣಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 05:ಕ್ಷಯರೋಗ ಪತ್ತೆಗಾಗಿ ಜಿಲ್ಲೆಯಲ್ಲಿರುವ ಕಾರ್ಖಾನೆಗಳಲ್ಲಿಕಾರ್ಯನಿರ್ವಹಿಸುವ ಕಾರ್ಮಿಕರಿಗೆ ಕೆಲಸದ ವಾತಾವರಣದ ಸ್ಥಳದಲ್ಲಿಯೇ ಶೀಘ್ರವಾಗಿ ಕ್ಷಯರೋಗ ಪತ್ತೆ ಮಾಡಬಹುದಾದ ಮತ್ತು ಸಂಭವನೀಯ ಲಕ್ಷಣಗಳನ್ನು ಗುರ್ತಿಸಲ್ಪಡುವ ಹ್ಯಾಂಡ್‌ಹೋಲ್ಡ್ ಎಕ್ಸ್‌ಮಿಷನ್ ಬಳಸಿ ಅಭಿಯಾನದ ರೂಪದಲ್ಲಿ ಕ್ಷಯರೋಗ ಪತ್ತೆ ಹಚ್ಚುವ ಜೊತೆಗೆ ಚಿಕಿತ್ಸೆ ನೀಡಲು ಕ್ರಮವಹಿಸುವ ಕಾರ್ಯವನ್ನು ಮಾಡಲಾಗುತ್ತಿದೆ ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಕ್ಷಯರೋಗ ನಿರ್ಮೂಲನಾ ವಿಭಾಗ, ಸಮುದಾಯ ಆರೋಗ್ಯ ಕೇಂದ್ರ ತೋರಣಗಲ್ಲು ಇವರ ವತಿಯಿಂದ ಜೆ.ಎಸ್.ಡಬ್ಲ್ಯೂ ಸ್ಟೀಲ್ ಲಿಮಿಟೆಡ್ ನ ಎನರ್ಜಿ ವಿಭಾಗದಲ್ಲಿ 3 ದಿನಗಳ ಕಾಲ ಕ್ಷಯರೋಗ ಪತ್ತೆ ಶಿಬಿರದಲ್ಲಿ ಮಾತನಾಡಿ, ಜಿಲ್ಲೆಯಲ್ಲಿರುವ 17 ಕಂಪನಿಯ ಆಸ್ಪತ್ರೆಗಳಲ್ಲಿ ಮುಂದಿನ ದಿನಗಳಲ್ಲಿ ತಪಾಸಣಾ ಶಿಬಿರಗಳಲ್ಲಿ ಕಂಪನಿಗಳ ಅಧಿಕಾರಿಗಳು ಮತ್ತು ಕಾರ್ಮಿಕರು ಸದುಪಯೋಗ ಪಡೆದುಕೊಂಡು ಕ್ಷಯಮುಕ್ತ ಬಳ್ಳಾರಿಯನ್ನಾಗಿಸಲು ಕೈ ಜೋಡಿಸಬೇಕು ಎಂದು ವಿನಂತಿಸಿದರು.

ಕ್ಷಯರೋಗ ಪತ್ತೆ ಹಚ್ಚಲು ಸಹಕಾರಿಯಾಗುವ ಹ್ಯಾಂಡ್‌ಹೋಲ್ಡ್ ಎಕ್ಸರೇ ಮಿಷನ್ ಬಳಸಲಾಗುತ್ತಿದ್ದು, ಹೆಚ್ಚಿನ ಪರೀಕ್ಷೆಯನ್ನು ಟ್ರೂನಾಟ್, ಸಿಬಿನಾಟ್ ಮಿಷನ್ ಮೂಲಕ ರೋಗ ಪತ್ತೆ ಮಾಡುವ ವ್ಯವಸ್ಥೆಯನ್ನು ಆರೋಗ್ಯ ಕೇಂದ್ರಗಳಲ್ಲಿ ಸಕಾಲದಲ್ಲಿ ಪರೀಕ್ಷೆ ಮಾಡಿಸಬೇಕು. ಪ್ರಸ್ತುತ ಶಿಬಿರದಲ್ಲಿ 175 ಜನರ ಪರೀಕ್ಷೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಜಿಂದಾಲ್ ಎನರ್ಜಿ ಪ್ಲಾಂಟ್‌ನ ಹೆಚ್.ಒ.ಪಿ ಕಾರ್ತಿಕೇಯನ್ ಮಿಶ್ರಾ ಮಾತನಾಡಿ, ಕಾರ್ಮಿಕರ ಆರೋಗ್ಯದೃಷ್ಟಿಯಿಂದ ಕೆಲಸದ ಸ್ಥಳಕ್ಕೆ ಬಂದು ಕ್ಷಯರೋಗ ಪತ್ತೆ ಹಚ್ಚುವ ಜೊತೆಗೆ ಕಾರ್ಮಿಕರ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಹೆಚ್.ಐ.ವಿ, ಮುಂತಾದ ಪರೀಕ್ಷೆಗಳನ್ನು ಮಾಡುತ್ತಿರುವುದು ಶ್ಲಾಘನೀಯವಾಗಿದೆ. ಜಿಂದಾಲ್‌ನ ಆಡಳಿತ ಮಂಡಳಿಯು ಎನರ್ಜಿ, ಸ್ಟೀಲ್, ಪೇಂಟ್, ಸಿಮೇಂಟ್ ವಿಭಾಗಗಳಲ್ಲಿ ಕಾರ್ಯನಿರ್ವಹಿಸುವ ಸಾವಿರಾರು ಕಾರ್ಮಿಕರ ತಪಾಸಣೆಯನ್ನು ಹಂತ ಹಂತವಾಗಿ ಕೈಗೊಳ್ಳಲು ಸಹಕರಿಸುವುದಾಗಿ ತಿಳಿಸಿದರು.

*ಕ್ಷಯರೋಗದ ಲಕ್ಷಣಗಳು: 2 ವಾರಕ್ಕಿಂತ ಹೆಚ್ಚು ದಿನಗಳ ಕೆಮ್ಮು, ಸಂಜೆ ವೇಳೆ ಜ್ವರ, ರಾತ್ರಿ ವೇಳೆ ಮೈ ಬೆವರುವುದು, ಕಫ ರಕ್ತ ಬೀಳುವುದು, ಎದೆ ನೋವು, ಕಾರಣವಿಲ್ಲದೆ ಹಸಿವಾಗದಿರುವುದು, ತೂಕ ಇಳಿಕೆಯಾಗುತ್ತಿದ್ದಲ್ಲಿ ಹಾಗೂ ಉಸಿರಾಟದಲ್ಲಿ ತೊಂದರೆ ಕಂಡುಬಂದಲ್ಲಿ ಒಮ್ಮೆ ಕಫ ಪರೀಕ್ಷೆ ಖಡ್ಡಾಯವಾಗಿ ಮಾಡಿಸಿ ಎಂದರು.

ಈ ಸಂದರ್ಭದಲ್ಲಿ ಜನರಲ್ ಮ್ಯಾನೇಜರ್ ಪ್ರವೀಣ್ ಕೋಟ, ಒಹೆಚ್‌ಸಿ ವೈದ್ಯಾಧಿಕಾರಿ ಡಾ.ಪ್ರೀತಿ ಲತಾ, ಡಾ.ಸೋನಿಯ, ಕ್ಷಯ–ರೋಗ ವಿಭಾಗದ ಅನಿಲ್ ಕುಮಾರ್, ಶೇಷಾವಲಿ, ಚಂದ್ರಶೇಖರ್, ಅಭಿಲಾಶ್, ಶಿವರಾಮ್ ಶ್ರೀನಿವಾಸ್ ಸೇರಿದಂತೆ ಕಾರ್ಮಿಕರು ಹಾಗೂ ಇತರರು ಉಪಸ್ಥಿತರಿದ್ದರು.

# ಕೃಷಿ ಕ್ಷೇತ್ರದ ಆಮೂಲಾಗ್ರ ಬದಲಾವಣೆಗೆ ಮಿಶ್ರಬೆಳೆ ಪದ್ಧತಿ ಅಳವಡಿಕೆ ಕುರಿತು ರೈತರಿಗೆ ಮಾಹಿತಿ ಒದಗಿಸಿ: ಈ.ತುಕಾರಾಮ್




ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,ಮೇ05:ಜಿಲ್ಲೆಯ ಐದೂ ತಾಲೂಕುಗಳಲ್ಲಿ ಕೃಷಿಗೆ ಹೆಚ್ಚಿನ ಉತ್ತೇಜನ ನೀಡಲು ಮಿಶ್ರಬೆಳೆ ಪದ್ಧತಿ ಅಳವಡಿಸಿಕೊಳ್ಳುವ ಕುರಿತು ರೈತರಿಗೆ ವಿಶೇಷ ಕಾರ್ಯಕ್ರಮ ಆಯೋಜಿಸಿ ಮಾಹಿತಿ ಒದಗಿಸಬೇಕು. ಈ ಕುರಿತು ಕೃಷಿ, ತೋಟಗಾರಿಕೆ ಅಧಿಕಾರಿಗಳು ವಿಶೇಷ ಕ್ರಮ ವಹಿಸಬೇಕು ಎಂದು ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಜಿಲ್ಲಾ ಮಟ್ಟದ ದಿಶಾ ಸಮಿತಿಯ ಅಧ್ಯಕ್ಷರೂ ಆದ ಈ.ತುಕಾರಾಮ್ ಅವರು ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್ ವತಿಯಿಂದ ಸಂಡೂರಿನ ನಂದಿಹಳ್ಳಿ ಪಿ.ಜಿ.ಹಳ್ಳಿ ಕೇಂದ್ರದ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ "ದಿಶಾ" ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ವಿವಿಧೆಡೆ ಕೆಲ ರೀತಿಯ ಬೆಳೆ ಬೆಳೆಯುತ್ತಾರೆ. ವೈಜ್ಞಾನಿಕ ಕೃಷಿ ಪದ್ಧತಿ ಅಳವಡಿಸಿಕೊಂಡು ಮಣ್ಣಿನ ಗುಣವನ್ನಾಧರಿಸಿ ರೈತರು ಬೆಳೆ ತೆಗೆಯಬೇಕು. ವಿವಿಧ ರೀತಿಯ ಸರ್ವ ರೀತಿಯ ಬೆಳೆ ಬೆಳೆಯಲು ಒಂದು ಮಾಸ್ಟರ್ ಪ್ಲಾನ್ ಮಾಡಬೇಕು. ಜಿಲ್ಲೆಯ ಯಾವ ಯಾವ ತಾಲೂಕಿನಲ್ಲಿ ಯಾವ ರೀತಿಯ ಮಣ್ಣು ಇದೆ. ಯಾವ ಕಡೆಗೆ ಯಾವ ರೀತಿ ಬೆಳೆಯುತ್ತಾರೆ ಎಂಬುದರ ಬಗ್ಗೆ ಅಧ್ಯಯನ ನಡೆಸಲು ಲ್ಯಾಬ್ ಆರಂಭಿಸುವ ಮೂಲಕ ಸಮಗ್ರ ವರದಿ ಸಂಗ್ರಹಿಸಬೇಕು. ಯಾವ ಮಣ್ಣಿನಲ್ಲಿ ಯಾವ ರೀತಿ ಬೆಳೆ ಬೆಳೆದರೆ ಹೆಚ್ಚು ಲಾಭವಾಗುತ್ತದೆ ಎಂಬುದರ ಬಗ್ಗೆ ಜಿಲ್ಲೆಯ ರೈತರಿಗೆ ಹೊಸದೊಂದು ಮಾರ್ಗದರ್ಶಿ ಯೋಜನೆ ರೂಪಿಸೋಣ ಎಂದು ಸಂಸದರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅದೇ ರೀತಿಯಾಗಿ ಜಿಲ್ಲೆಯಲ್ಲಿ ಮುಂಬರುವ ಜೂನ್ ನಿಂದ ಬಿತ್ತನೆ ಕಾರ್ಯಗಳು ಪ್ರಾರಂಭಗೊಳ್ಳಲಿವೆ. ಕಾಳಸಂತೆಯಲ್ಲಿ ಕಳಪೆ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳು ಸರಬರಾಜು ಆಗದಂತೆ ಎಚ್ಚರವಹಿಸಬೇಕು. ರೈತರಿಗೆ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳುವಂತೆ ಮನವೊಲಿಸಬೇಕು. ಕೃಷಿ, ರೈತರ ವಿಷಯಗಳಿಗೆ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದು ತಿಳಿಸಿದರು.

ತಾಲ್ಲೂಕುಗಳಲ್ಲಿ ವಿವಿಧೆಡೆ ಸಮರ್ಪಕ ಮೀನುಮಾರುಕಟ್ಟೆಗಳಿಲ್ಲ, ಎಲ್ಲಿಬೇಕೆಂದರಲ್ಲಿ ಮಾರುವುದು ಕಂಡುಬರುತ್ತಿದ್ದು, ಅವರಿಗೆ ಪೂರಕವಾದ ಮೀನು ಮಾರುಕಟ್ಟೆ ಒದಗಿಸಬೇಕು ಎಂದು ಮೀನುಗಾರಿಕೆ ಉಪನಿರ್ದೇಶಕರಿಗೆ ತಿಳಿಸಿದ ಅವರು, ಇದೇ ವೇಳೆ ಜಿಲ್ಲಾಧಿಕಾರಿಗಳ ಗಮನಕ್ಕೂ ಈ ವಿಷಯ ತಂದರು.

ಜಿಲ್ಲೆಯಲ್ಲಿ ಅಸ್ತಮಾ, ಕಿಡ್ನಿ, ಕ್ಯಾನ್ಸರ್ ಸೇರಿದಂತೆ ಇತರೆ ಖಾಯಿಲೆಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಲು ಬೇಕಾಗುವಂತಹ ಜನಸಂಖ್ಯೆಗೆ ಅನುಗುಣವಾಗಿ ಪ್ರಾಥಮಿಕ ಹಾಗೂ ಸಮುದಾಯ ಆಸ್ಪತೆಗಳನ್ನು ಮೇಲ್ದರ್ಜೆಗೇರಿಸಲು ಇರುವ ಮಾನದಂಡ, ಚಿಕಿತ್ಸೆಗೆ ಬೇಕಾಗುವ ಅತ್ಯಾಧುನಿಕ ಉಪಕರಣಗಳು ಸೇರಿದಂತೆ ಯಾವುದೇ ವೈದ್ಯಕೀಯ ಸೌಕರ್ಯಗಳು ಬೇಕಿದ್ದರೆ ಬೇಡಿಕೆಗಳ ಪಟ್ಟಿಯನ್ನು ಸಲ್ಲಿಸಬೇಕು ಎಂದು ಜಿಲ್ಲಾ ವೈದ್ಯಾಧಿಕಾರಿಗಳಿಗೆ ಸೂಚಿಸಿದ ಅವರು, ಈ ಕುರಿತು ಈಗಾಗಲೇ ಆರೋಗ್ಯ ಸಚಿವರೊಂದಿಗೆ ಸಭೆ ನಡೆಸಲಾಗಿದೆ ಎಂದು ತಿಳಿಸಿದರು. ಮಗುವೊಂದರ ಶೈಕ್ಷಣಿಕ ಬುನಾದಿಯಾದ ಅಂಗನವಾಡಿಗಳು ಸುಧಾರಣೆಯಾಗಬೇಕು. ಜಿಲ್ಲೆಯಲ್ಲಿ ಬಹುತೇಕ ಎಲ್ಲಾ ಅಂಗನವಾಡಿ ಕಟ್ಟಡಗಳು ಸ್ವಂತ ಜಾಗ ಹೊಂದಿರಬೇಕು ಎಂದರಲ್ಲದೇ, ಮಕ್ಕಳಿಗೆ, ಗರ್ಭಿಣಿ ಮಹಿಳೆಯರಿಗೆ ಗುಣಮಟ್ಟದ ಪೌಷ್ಠಿಕ ಆಹಾರ ಪೂರೈಕೆ ಮಾಡಬೇಕು. ಜಿಲ್ಲೆಯಲ್ಲಿ ಅಪೌಷ್ಠಿಕತೆ ಹೋಗಲಾಡಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ವಿಶೇಷ ಮುತುವರ್ಜಿ ವಹಿಸಿ ಕಾರ್ಯನಿರ್ವಹಿಸಬೇಕು ಎಂದು ಸಂಸದರು ನಿರ್ದೇಶನ ನೀಡಿದರು.

ಅನ್ನಭಾಗ್ಯ ಯೋಜನೆಯಡಿ ರಾಜ್ಯಸರ್ಕಾರದ ನಿರ್ದೇಶನದಂತೆ 10 ಕೆ.ಜಿ ಅಕ್ಕಿ ವಿತರಿಸಲಾಗುತ್ತಿದೆ. ಆದರೆ ಜಿಲ್ಲೆಯಲ್ಲಿ ಹೆಚ್ಚಾಗಿ ಅಕ್ರಮ ಪಡಿತರ ಸಾಗಾಣೆ ಸಂಬಂಧಿಸಿದಂತೆ ಪ್ರಕರಣಗಳು ದಾಖಲಾಗುತ್ತಿದ್ದು, ಇದಕ್ಕೆ ಕಡಿವಾಣ ಹಾಕಲು ಮುಲಾಜಿಲ್ಲದೇ ಅಂತಹವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಬೇಕು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಿಗೆ ನಿರ್ದೇಶನ ನೀಡಿದರು.

*ಎಸ್‌ಎಸ್‌ಎಲ್‌ಸಿ ಫಲಿತಾಂಶ ಕುಸಿತ:*ಜಿಲ್ಲೆಯಲ್ಲಿ ಈ ಬಾರಿಯ ಎಸ್ ಎಸ್ ಎಲ್ ಸಿ ವಾರ್ಷಿಕ ಫಲಿತಾಂಶವು ಕುಸಿತಗೊಂಡಿದ್ದು, ಬೇಸರದ ಸಂಗತಿಯಾಗಿದೆ. ಮಕ್ಕಳಿಗೆ ಪ್ರಾಥಮಿಕ ಹಂತದ ಶಿಕ್ಷಣ ಬಹುಮುಖ್ಯವಾಗಿದ್ದು, ಗುಣಮಟ್ಟದ ಮೌಲ್ಯಾಧಾರಿತ ಶಿಕ್ಷಣ ಒದಗಿಸಬೇಕು. ಇದಕ್ಕೆ ಶಿಕ್ಷಕರು ಹೆಚ್ಚಿನ ಶ್ರಮ ವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ಶಿಕ್ಷಣ ಎಂದರೆ ಕೇವಲ ಕಟ್ಟಡವಲ್ಲ, ವೆಚ್ಚಧಾರಿತ ಉಪಕರಣಗಳಲ್ಲ, ಬದಲಾಗಿ ಮಕ್ಕಳ ಶೈಕ್ಷಣಿಕ ಬೆಳವಣಿಯಾಗಿದೆ. ಹಾಗಾಗಿ ಶಿಕ್ಷಕರು ಈ ಬಗ್ಗೆ ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದರು. ಸಂಡೂರು ಶಾಸಕರಾದ ಈ.ಅನ್ನಪೂರ್ಣ ಅವರು ಮಾತನಾಡಿ, ಸಂಡೂರು ಭಾಗದ ಗೊಲ್ಲರಹಟ್ಟಿಗಳಲ್ಲಿ ಹೆಣ್ಣುಮಕ್ಕಳು ಋತುಮತಿಯಾದಾಗ ಮತ್ತು ಹೆರಿಗೆಯಾದಾಗ ಅವರನ್ನು ಹೊರಗಿಡುವ ಮೌಢ್ಯ ಆಚರಣೆ ಇಲ್ಲಿದೆ. ಮೌಢ್ಯತೆ ಹಾಗೂ ಮೂಢನಂಬಿಕೆಗಳನ್ನು ಇನ್ನು ನಂಬುತ್ತಿದ್ದಾರೆ. ಹಾಗಾಗಿ ಇಂತಹ ಸಮಸ್ಯೆಗಳನ್ನು ಪರಿಹರಿಸಲು ಕ್ರಮ ವಹಿಸಬೇಕು ಎಂದು ಪ್ರಸ್ತಾಪಿಸಿದರು.

ಸಂಡೂರು ಭಾಗದಲ್ಲಿ ಜನರ ಮನೆ ಬಾಗಿಲಿದೆ ಆರೋಗ್ಯ ಸೇವೆ ತಲುಪಿಸಲು "ಕ್ಲಿನಿಕ್ ಆನ್ ವ್ಹೀಲ್" ಎಂಬ ವಾಹನಗಳು ಸೇವೆ ನೀಡುತ್ತಿದ್ದು, ಇವುಗಳ ದುರುಪಯೋಗವಾಗುತ್ತಿರುವುದು ಕಂಡುಬರುತ್ತಿದೆ. ಇದಕ್ಕೆ ಕಡಿವಾಣ ಹಾಕಬೇಕು ಎಂದು ಶಾಸಕಿ ಅನ್ನಪೂರ್ಣ ಅವರು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಕೇದ್ರದ ಬಿಎಸ್‌ಎನ್‌ಎಲ್, ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರ, ರೈಲ್ವೆ ಇಲಾಖೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಕುರಿತು ಸಂಬಂಧಿಸಿದ ಅಧಿಕಾರಿಗಳು ಪೂರಕ ಮಾಹಿತಿ ನೀಡದೇ ಇರುವ ಕುರಿತು ಸಂಸದರು ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರಿ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವುದು ಜನಪ್ರತಿನಿಧಿಗಳ ಆದ್ಯ ಕರ್ತವ್ಯವಾಗಿದೆ ಎಂದು ಮನವರಿಕೆ ಮಾಡಿದರು.

ಸಭೆಯಲ್ಲಿ ಜಲ ಜೀವನ್ ಮಿ?ಷನ್, ಸ್ವಚ್ಛ ಭಾರತ್ ಮಿಷನ್, ಪ್ರಧಾನಮಂತ್ರಿ ಆವಾಸ್ ಯೋಜನೆ ಸೇರಿದಂತೆ ಕೇಂದ್ರಪುರಸ್ಕೃತ ಯೋಜನೆಗಳ ಕುರಿತು ಸುದೀರ್ಘ ಚರ್ಚೆ ನಡೆಯಿತು. ಸಭೆಗೂ ಮುನ್ನ ಹಿಂದಿನ ದಿಶಾ ಸಮಿತಿ ಸಭೆಯ ಅನುಪಾಲನಾ ವರದಿ ಬಗ್ಗೆ ಚರ್ಚಿಸಲಾಯಿತು. ಸಭೆಗೂ ಮುನ್ನ ಸಂಸದರು, ಸ್ವಸಹಾಯ ಸಂಘಗಳ ಮಹಿಳೆಯರಿಂದ ತಯಾರಿಸಿದ ಆಹಾರ ಮತ್ತು ಆಹಾರೇತರ ಉತ್ಪನ್ನಗಳ ಮಳಿಗೆ ಉದ್ಘಾಟಿಸಿದರು.

ಈ ವೇಳೆ ಸಂಡೂರು ಪುರಸಭೆಯ ಅಧ್ಯಕ್ಷ ಸಿರಾಜ್ ಹುಸೇನ್, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮ್ಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿ.ಜೆ.ಶೋಭಾರಾಣಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂದೀಪ್ ಸೂರ್ಯವಂಶಿ, ವಿಶ್ರೀಕೃದೇ ವಿವಿಯ ಕುಲಪತಿ ಪ್ರೊ.ಎಂ.ಮುನಿರಾಜು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಚಿದಾನಂದಪ್ಪ

ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಮೇ 9ರಂದು ಮಹಾರಾಣಾ ಪ್ರತಾಪ್ ಸಿಂಹರ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:ಮೇ.5:ಪಟ್ಟಣದಲ್ಲಿ ರಜಪೂತ ಸಮಾಜದ ವತಿಯಿಂದ ಮೇ 9ರಂದು ಶ್ರೀ ಮಹಾರಾಣಾ ಪ್ರತಾಪ ಸಿಂಹರ ಭವ್ಯ ಮೂರ್ತಿಯ ಪ್ರತಿಷ್ಠಾಪನಾ ಕಾರ್ಯಕ್ರಮ ನಡೆಯಲಿದ್ದು ಪಟ್ಟಣದ ಸರ್ವ ಸಮಾಜದ ಬಾಂಧವರು ಭಾಗವಹಿಸಿ ಯಶಸ್ವಿಗೊಳಿಸಲು ಸಹಕರಿಸಬೇಕು ಎಂದು ಮುಖಂಡ ವಿಜಯಸಿಂಗ್ ಹಜೇರಿ ಮನವಿ ಮಾಡಿಕೊಂಡರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸಮಾಜದ ವತಿಯಿಂದ ಶನಿವಾರ ಕರೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ ಸುಮಾರು 25 ಲಕ್ಷ ವೆಚ್ಚದಲ್ಲಿ ರಾಜಸ್ಥಾನದ ಜೈಪುರದಲ್ಲಿ ನಿರ್ಮಾಣಗೊಂಡಿರುವ ಮಹಾರಾಣಾ ಪ್ರತಾಪರ ಭವ್ಯ ಮೂರ್ತಿ ಮೇ 8ರಂದು ಬಳಗಾನೂರ ಗ್ರಾಮದಿಂದ ಚೈತನ್ಯ ಸ್ನೇಹಿತರ ಬಳಗದವರ ಬೈಕ್ ರ್‍ಯಾಲಿ ಮೂಲಕ ಪಟ್ಟಣಕ್ಕೆ ಆಗಮಿಸಲಿದ್ದು ಮೇ 9ರಂದು ಮುಂಜಾನೆ 9:00 ಗಂಟೆಗೆ ರಜಪೂತ ಬಡಾವಣೆಯಲ್ಲಿರುವ ಶ್ರೀ ಅಂಬಾಭವಾನಿ ಮಂದಿರದಿಂದ ಆರಂಭವಾಗುವ ಮೂರ್ತಿಯ ಭವ್ಯ ಮೆರವಣಿಗೆಗೆ ಶ್ರೀ ಖಾಸ್ಗತೇಶ್ವರ ಮಠದ ಸಿದ್ದಲಿಂಗ ದೇವರು, ಗುಂಡಕನಾಳದ ಗುರುಲಿಂಗ ಶಿವಾಚಾರ್ಯ ಹಾಗೂ ಕೆಸರಟ್ಟಿಯ ಸೋಮಲಿಂಗ ಮಹಾಸ್ವಾಮಿಗಳು ಚಾಲನೆ ನೀಡಲಿದ್ದು ಸರ್ವ ಸಮಾಜದ ಬಾಂಧವರು ಉಪಸ್ಥಿತರಿರುವರು, ಮೆರವಣಿಗೆಯು ಪ್ರಮುಖ ಬೀದಿಗಳಲ್ಲಿ ಹಾದು ಮಹಾರಾಣಾ ಪ್ರತಾಪ್ ಸಿಂಹ ವೃತ್ತಕ್ಕೆ ತಲುಪಿ ಅಲ್ಲಿ ಮೂರ್ತಿಯ ಪ್ರತಿಷ್ಠಾಪನೆ ಸಕಲ ಪೂಜಾ ವಿಧಿ ವಿಧಾನಗಳೊಂದಿಗೆ ಜರಗುವುದು ಎಂದರು. ಮುಖಂಡರಾದ ಸುರೇಶ ಹಜೇರಿ ಹಾಗೂ ಜೈಸಿಂಗ್ ಮೂಲಿಮನಿ ಮಾತನಾಡಿ ಮೇ 9ರಂದು ನಡೆಯುವ ಈ ಕಾರ್ಯಕ್ರಮದ ಆಮಂತ್ರಣವನ್ನು ಪಟ್ಟಣದ ಎಲ್ಲ ಸಮಾಜದ ಮುಖ್ಯಸ್ಥರಿಗೆ ನೀಡಲಾಗುತ್ತಿದೆ, ಈ ಕಾರ್ಯಕ್ರಮದಲ್ಲಿ ಶ್ರೀ ರಾಮನವಮಿ

ಉತ್ಸವ ಸಮಿತಿಯವರು ಕುಡಿಯುವ ನೀರಿನ ವ್ಯವಸ್ಥೆ, ಚೇತನ್ಯ ಬಳಗದವರು ತಂಪು ಪಾನೀಯದ ವ್ಯವಸ್ಥೆ, ರತನಸಿಂಗ್ ಕೊಕಟನೂರ ಹಾಗೂ ದಿಲೀಪಸಿಂಗ್ ಹಜೇರಿ ವತಿಯಿಂದ ಉಪಹಾರದ ವ್ಯವಸ್ಥೆ ಹಾಗೂ ಸಂಜೀವಕುಮಾರ ಹಜೇರಿ ಇವರಿಂದ ಅಲ್ಪೋಪಹಾರದ ವ್ಯವಸ್ಥೆ ಇರುವುದು ಎಂದರು. ಪತ್ರಿಕಾಗೋಷ್ಠಿಯಲ್ಲಿ ರಜಪೂತ ಸಮಾಜದ ಅಧ್ಯಕ್ಷ ಹರಿಸಿಂಗ್ ಮೂಲಿಮನಿ, ಉಪಾಧ್ಯಕ್ಷ ರತನಸಿಂಗ್ ಕೊಕಟನೂರ ಪ್ರಕಾಶ ಹಜೇರಿ, ಮಾನಸಿಂಗ್ ಕೊಕಟನೂರ, ಬಾಬು ಹಜೇರಿ, ರಘುರಾಮಸಿಂಗ್ ಸೇಟ, ಸಿರಸಕುಮಾರ ಹಜೇರಿ, ಸಂತೋಷ್ ಹಜೇರಿ, ಪ್ರಹ್ಲಾದ್ ಹಜೇರಿ, ಸಂಜೀವ್ ಹಜೇರಿ, ದಿಲೀಪ ಸಿಂಗ್ ಹಜೇರಿ, ಸುದೀರ ತಿವಾರಿ, ಗೋವಿಂದಸಿಂಗ್ ಹಜೇರಿ, ಗಂಗಾರಾವು ಸಿಂಗ್, ವಿಜಾಪುರ, ಸುನೀತ್ ವಿಜಾಪುರ, ಸೂರಜ್ ಹಜೇರಿ, ಸಂದೀಪ ಬನಸಿ, ವಿಠಲ್ ಬೆಕಿನಾಳ, ರಮೇಶ ಗೌಡಗೇರಿ, ಕೇಸರಸಿಂಗ್ ದೇವಿ, ರಾಹುಲ್ ಮೂಲಿಮನಿ, ಕುಂದನ್ ವಿಜಾಪುರ, ನಾಗೂ ದೇವಿ ಇದ್ದರು.

## ರಾಜ್ಯಕ್ಕೆ 5ನೇ ಸ್ಥಾನ ಪಡೆದ ಗಗನ್ ಸಿಂಗ್ ಮೂಲಿಮನಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:ಮೇ.5:ಸಮೀಪದ ಮೈಲೇಶ್ವರದ ಬ್ರಿಲಿಯಂಟ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿ ಹಾಗೂ ಪಟ್ಟಣದ ಪುರಸಭೆಯ ಸದಸ್ಯ ಜೈಸಿಂಗ್ ಮೂಲಿಮನಿ ಇವರ ಪುತ್ರನಾದ ಗಗನಸಿಂಗ್ ಮೂಲಿಮನಿ ಈತನು ಈ ಬಾರಿಯ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ 625ಕ್ಕೆ 621 ಅಂಕಗಳನ್ನು ಪಡೆದು ರಾಜ್ಯಕ್ಕೆ 5ನೇ ಸ್ಥಾನ ಪಡೆದ ಹಿನ್ನೆಲೆಯಲ್ಲಿ ಶಾಲೆಯ ವತಿಯಿಂದ ಶುಕ್ರವಾರ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ. ನಡುವಿನಮನಿ ಮಾತನಾಡಿ ನಮ್ಮ ಶಾಲೆಯ ಪ್ರತಿಭಾವಂತ ವಿದ್ಯಾರ್ಥಿಯಾದ ಗಗನಸಿಂಗ್ ಮೂಲಿಮನಿ ತನ್ನ ಕಠಿಣ ಪರಿಶ್ರಮದಿಂದ ರಾಜ್ಯಕ್ಕೆ 5ನೇ ಸ್ಥಾನವನ್ನು ಪಡೆದು ಇಡೀ ಜಿಲ್ಲೆಯಲ್ಲಿ ನಮ್ಮ ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸಿದ್ದಾನೆ ಅವನ ಈ ಸಾಧನೆಯ ಮಾರ್ಗ ಇತರ ವಿದ್ಯಾರ್ಥಿಗಳಿಗೂ ಮಾದರಿಯಾಗಬೇಕು ಎಂದು ತಿಳಿಸಿ ಅವನ ಮುಂದಿನ ಶಿಕ್ಷಣ ಉಜ್ವಲವಾಗಿರಲೆಂದು ಹಾರೈಸುತ್ತೇನೆ ಎಂದರು. ಈ ಸಮಯದಲ್ಲಿ ಶ್ರೀ ಮಾರುತಿ ಶಿಕ್ಷಣ ಸಂಸ್ಥೆ ಉಪಾಧ್ಯಕ್ಷ ಆರ್.ಬಿ. ನಡುವಿನಮನಿ, ಕಾರ್ಯದರ್ಶಿ ಎಮ್.ಬಿ.ಮಡಿವಾಳರ, ನಿರ್ದೇಶಕರಾದ ಎಸ್. ಹೆಚ್.ಪಾಟೀಲ, ಶ್ರೀಮತಿ ಎನ್. ಎಸ್.ಗಡಗಿ, ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗ ಇದ್ದರು.

## ನರೇಗಾ ಕೂಲಿಕಾರರ ಉಚಿತ ಅರೋಗ್ಯ ತಪಾಸಣೆ ಶಿಬಿರಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರು :ಮೇ.5:ರಾಯಚೂರು ಜಿಲ್ಲಾ ಲಿಂಗಸಗೂರು ತಾಲೂಕು ದೇವರಭೂಪೂ ರ ಗ್ರಾಮ ಪಂಚಾಯತ ವ್ಯಾಪ್ತಿಯ ದೇವರಭೂಪುರ ಗ್ರಾಮದ ನರೇಗಾ ಕೂಲಿಕಾರರಿಗೆ ಉಚಿತ ಅರೋಗ್ಯ ಶಿಬಿರ ವನ್ನು ಮಾಡಲಾಯಿತು.

ಡಾ:ಪ್ರಾಣೇಶರಾವ್ ಸರಕಾರಿ ಆಸ್ಪತ್ರೆ ಲಿಂಗಸಗೂರು, ಡಾ :ವಿಕ್ರಮ್ ಪಾಟೀಲ್ ವೈದ್ಯರು ಗುರುಗುಂಟ್ಟ, ಮಾತನಾಡಿ

ಪ್ರತಿಯೊಬ್ಬರಿಗೆ ಬಿಪಿ(ರಕ್ತ ಒತ್ತಡ ), ಸುಗರ (ಸಕ್ಕರೆ )ಕಾಯಿಲೆ, ರಕ್ತ ಪರೀಕ್ಷೆ. ಇಹಾವು ಖಚಿದಾಗ, ಚೋಳು ಖಚಿದಾಗ, ನಾಯಿ ಖಚಿದಾಗ ಪ್ರಥಮ ಚಿಕಿತ್ಸೆ ಮಾಡುವ ಬಗ್ಗೆ ಮಾಹಿತಿಯನ್ನು ನೀಡಿದರು ಇನ್ನಿತರ ತಪಾಸಣೆ ಯನ್ನು ಮಾಡಲಾಯಿತು.

ಸುಮಾರು ಜನರಿಗೆ ಸಕ್ಕರೆ ಕಾಯಿಲೆ, ರಕ್ತಒತ್ತಡ ಇನ್ನಿತರ ಅರೋಗ್ಯ ತಪಾಸಣೆ ಮಾಡಿ ಮಾತ್ರೆ ನೀಡಲಾಯಿತು ಅರೋಗ್ಯ ದಲ್ಲಿ ತೊಂದರೆ ಇದ್ದವರಿಗೆ ಆಸ್ಪತ್ರೆಗೆ ರಿಪೇರ್ ಮಾಡಲಾಯುತು.

ತಾಲೂಕು ಐ ಇ ಸಿ. ಸಂಯೋಜಕರು ಬಾಲಪ್ಪ ಮಾತನಾಡಿ

ಪ್ರತಿಯೊಬ್ಬರೂ ನರೇಗಾ ಪ್ರಯೋಜನ ಪಡೆಯ ಬೇಕು ಮತ್ತು ಸರಿಯಾದ್ ಮಾರ್ಗದಲ್ಲಿ ಎಂದು ಹೇಳಿದರು ಪ್ರತಿಯೊಂದು ಕುಟುಂಬ ಕ್ಕೆ 100 ದಿನ ಕಡ್ಡಾಯವಾಗಿ ನರೇಗಾ ಕೆಲಸವನ್ನು ನೀಡಲು ಹೇಳಿದರು *ಉದ್ಯೋಗ ಖಾತರಿಯಡಿ ಸ್ತ್ರೀ ಚೇತನ ಅಭಿಯಾನ*, ದುಡಿಯೋಣ ಭಾ ಅಭಿಯಾನ *ಹಾಗೂ ವಲಸೆ ಯಾಕ್ರಿ ನಿಮ್ಮೂರಲ್ಲೇ ಉದ್ಯೋಗ ಖಾತ್ರಿ ಅಭಿಯಾನ*

ಯೋಜನೆಯಡಿ ಕೆಲಸ ಮಾಡುವ ಮಹಿಳೆಯರ ಪ್ರಮಾಣ ಶೇ 63.63 ರಷ್ಟಿದ್ದು, ಸ್ತ್ರೀ ಚೇತನ ಅಭಿಯಾನ ಕೈಗೊಳ್ಳುವ ಮೂಲಕ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯೋಜನೆಯ ಲಾಭ ಪಡೆಯಬೇಕು, ಹಾಗೂ ಗಂಡು ಮತ್ತು ಹೆಣ್ಣಿಗೆ ಸಮಾನ ಕೂಲಿ 370 ಇರುತ್ತದೆ ಎಂದು ಅವರು ಹೇಳಿದರು.

ಏಪ್ರೀಲ್ 01ರಿಂದ ನರೇಗಾ ಕೂಲಿ 370 ಆಗಿದ್ದು, ಇದು ಕೂಲಿಕಾರರು ಹೆಚ್ಚೆಚ್ಚು ಕೆಲಸಕ್ಕೆ ಬರುವಂತೆ ಪ್ರೇರೆಪಿಸಲು ಸಹಾಯಕವಾಗಿದೆ. ಯೋಜನೆಯಡಿ 65 ವರ್ಷ ಮೇಲ್ಪಟ್ಟ ವೃದ್ಧರಿಗೆ, ಅಂಗವಿಕಲರಿಗೆ ಹಾಗೂ ಗರ್ಭಿಣಿಯರಿಗೆ ಅರ್ಧ ಕೆಲಸ ಪೂರ್ತಿ ಕೂಲಿ ನೀಡುವುದರಿಂದ ಎಲ್ಲ ವರ್ಗದ, ವಯಸ್ಸಿನ ಜನರಿಗೆ ಪ್ರೋತ್ಸಾಹಿಸಲಾಗುತ್ತಿದೆ ಎಂದರು.

ಸ್ತ್ರೀಚೇತನ ಅಭಿಯಾನದಿಂದ ಹೆಚ್ಚೆಚ್ಚು ಮಹಿಳೆಯರು ನರೇಗಾ ಕೆಲಸಕ್ಕೆ ಬರುವ ಮೂಲಕ ಯೋಜನೆಯ ಸದುಪಯೋಗಪಡಿಸಿಕೊಳ್ಳಲು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರು ನಿಂಗಪ್ಪ, ಪಂಚಾಯುತ್ ಅಭಿವೃದ್ಧಿ ಅಧಿಕಾರಿಗಳು ದೇವಮ್ಮ ,ಕಾರ್ಯದರ್ಶಿ ಅಮರೇಶ . ಭಜಿಣ ಆದೇಶ,,ಪ್ರಾಥಮಿಕ ಅರೋಗ್ಯ ಕೇಂದ್ರದ cho ರಮೇಶ ,, ಆಶೆ ಕಾರ್ಯಕರ್ತರು, ಜಜಿಠ ಶೇಖರ , ಮೇಟ್ಸ್ ಹಾಗೂ ಕೂಲಿಕರಾರು ಭಾಗವಹಿಸಿದ್ದರು

## ಮೃತ ಯೋಧನ ಕುಟುಂಬಕ್ಕೆ ಡಾ. ಪ್ರಭುಗೌಡ ಲಿಂಗದಳ್ಳಿ ಸಾಂತ್ವನ



ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:ಮೇ.5:ತಾಲೂಕಿನ ಬಳಗಾನೂರ ಗ್ರಾಮದ ನಿವಾಸಿಯಾದ ಬಿಎಸ್‌ಎಫ್ ಯೋಧ ಸಿದ್ದಣ್ಣ ಮಾದರ ಅರಳಿಕಟ್ಟಿ ಇವರು ಹರಿಯಾಣ ರಾಜ್ಯದ ಅಗರ್ತಲಾದಲ್ಲಿ ಸೇವಾ ನಿರತರಾದ ಸಮಯದಲ್ಲಿಯೇ ಗುರುವಾರ ಹೃದಯಾಘಾತದಿಂದ ಸಾವನ್ನಪ್ಪಿದ್ದರು.

ಈ ಹಿನ್ನಲೆಯಲ್ಲಿ ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ, ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ ಇವರು ರವಿವಾರ ಮೃತ ಯೋಧನ ಮನೆಗೆ ಭೇಟಿ ನೀಡಿ ಅವರ ಕುಟುಂಬಕ್ಕೆ ಧೈರ್ಯ ತುಂಬಿ ಸಾಂತ್ವನ ತಿಳಿಸಿದರು. ಈ ಸಂದರ್ಭದಲ್ಲಿ ಡಾ.ಪ್ರಭುಗೌಡರು ಮಾತನಾಡಿ ಗಡಿ ರಕ್ಷಣೆಗೆ ನಿಂತ ಮೃತ ಯೋಧ ಸಿದ್ದಣ್ಣ ಅರಳಿಕಟ್ಟಿ ಅವರ ಅಕಾಲಿಕ ನಿಧನವು ತುಂಬಲಾರದ ನಷ್ಟವಾಗಿದ್ದು ಇದನ್ನು ಸಹಿಸುವ ಶಕ್ತಿ ಅವರ ಪತ್ನಿ ಹಾಗೂ ಕುಟುಂಬದ ಸದಸ್ಯರಿಗೆ ಭಗವಂತ ನೀಡಲೆಂದು ಪ್ರಾರ್ಥಿಸುತ್ತೇನೆ ಎಂದರು. ಈ ಸಮಯದಲ್ಲಿ ಮೃತ ಯೋಧನ ಧರ್ಮಪತ್ನಿ ಕವಿತಾ ಮಾದರ, ಪುತ್ರ ರವಿಕಾಂತ ಮಾದರ, ಪುತ್ರಿ ಡಾ.ಸುಮಿತಾ, ಕುಟುಂಬದ ಸದಸ್ಯರು ಗ್ರಾಮದ ಗಣ್ಯರು ಹಿರಿಯರು ಉಪಸ್ಥಿತರಿದ್ದರು.

# ಮೇರು ವ್ಯಕ್ತಿತ್ವದ ಸಹಕಾರಿ ಧುರೀಣ ಪ್ರಕಾಶ ತಪಶೆಟ್ಟಿ

ಬಾಗಲಕೋಟೆ:ಅಣ್ಣ ಬಸವಣ್ಣನವರ ಹೆಸರು ಅಜರಾಮರ. ಅವರ ಹೆಸರಿಟ್ಟ ಸಂಸ್ಥೆಗೂ ಅದೇ ಕೀರ್ತಿ. ಇದಕ್ಕೊಂದು ಉದಾಹರಣೆ ಬಾಗಲಕೋಟೆಯ ಶ್ರೀ ಬಸವೇಶ್ವರ ಸಹಕಾರಿ ಬ್ಯಾಂಕು. ನೂರು ವರ್ಷದ ಸಂಭ್ರಮ ಕಂಡ ಈ ಸಹಕಾರಿ ಬ್ಯಾಂಕಿನ ಸಾಧನೆಯ ನೋಟ ಸಿಂಹಾವಲೋಕನ ಮಾಡಿದರೆ ಅಣ್ಣ ಬಸವಣ್ಣನವರ ಪ್ರೇರಣೆ, ಚೈತನ್ಯ ಈ ಸಂಸ್ಥೆಗೆ ಸಿಕ್ಕಿದೆ. ಅದರ ಪರಿಣಾಮ ವಿಶ್ವಮಾನ್ಯವಾಗಿ ಬೆಳೆಯುವ ಎಲ್ಲ ಲಕ್ಷಣಗಳು ಗೋಚರಿಸುತ್ತಿವೆ.

ಬ್ಯಾಂಕಿನ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ಸಾನಿಧ್ಯವಹಿಸಿದ್ದ ಶ್ರೀ ಪೇಜಾವರ ಮಠದ ಶ್ರೀ ವಿಶ್ವೇಶತೀರ್ಥ ಶ್ರೀ ಪಾದಂಗಳವರು "ವ್ಯಕ್ತಿಗೆ ವಯಸ್ಸಾದಾಗ ವೃದ್ಧಾಪ್ಯ ಬರುತ್ತದೆ. ಸಂಸ್ಥೆಗೆ ವಯಸ್ಸಾದಾಗ ಅದರ ಕೀರ್ತಿ ಪರಾಕಾಷ್ಠೆ ಮುಟ್ಟುತ್ತದೆ" ಎಂದು ಹೇಳಿದ್ದು ಬ್ಯಾಂಕಿನ ಏಳಿಗೆಯನ್ನು ಸಾಕ್ಷೀಕರಿಸುತ್ತದೆ.

40 ವರ್ಷಗಳಿಂದ ಬ್ಯಾಂಕಿನ ಪ್ರಗತಿ–ಸಾಧನೆಯನ್ನು ನೋಡುತ್ತಿರುವ ನಾವು ಬ್ಯಾಂಕ ನಡೆದು ಬಂದ ದಾರಿಯ ಬಗ್ಗೆ ನಮಗೆ ಹೆಮ್ಮೆ ಅನಿಸುತ್ತದೆ. ಇದರ ಹಿಂದಿನ ಶ್ರಮಿಕ ಶಕ್ತಿ ಶ್ರೀ ಪ್ರಕಾಶ ತಪಶೆಟ್ಟಿ ಎಂಬುದು ಮತ್ತಷ್ಟು ಅಭಿಮಾನ.

1984ರಲ್ಲಿ ಬ್ಯಾಂಕಿನ ನಿರ್ದೇಶಕ ಮಂಡಳಿಗೆ ನಡೆದ ಚುನಾವಣೆಯ ಕಾಲಕ್ಕೆ ತಪಶೆಟ್ಟಿ ಅವರ ಪ್ರವೇಶ ಅತ್ಯಂತ ಆಕಸ್ಮಿಕ. ಆಗಷ್ಟೇ ವಾಣಿಜ್ಯ ಪದವಿ, ಔಷಧಿ ವಿಜ್ಞಾನದ ಪದವಿಯನ್ನು ಪೂರ್ಣಗೊಳಿಸಿ ಕೃಷಿ, ತೋಟಗಾರಿಕೆ, ಬೀಜ ಸಂಸ್ಕರಣೆ ಕ್ಷೇತ್ರದಲ್ಲಿ ಆಸಕ್ತಿ ತೋರಿಸಿ ಕ್ರೀಡಾ ಕ್ಷೇತ್ರದಲ್ಲಿ ಮಿಂಚಿದ ಪ್ರಕಾಶ ತಪಶೆಟ್ಟಿ ಅವರಿಗೆ ಬಸವೇಶ್ವರ ಬ್ಯಾಂಕಿನ ನಿರ್ದೇಶಕ ಮಂಡಳಿಯ ಪ್ರವೇಶ, ಜೊತೆಗೆ ಬ್ಯಾಂಕಿನ ಸಾರಥ್ಯ, ನಗರಸಭೆಯ ಆಡಳಿತದ ಚುಕ್ಕಾಣಿ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಚುಕ್ಕಾಣಿ ಹಿಡಿಯುವ ಸಂದರ್ಭಗಳು, ಎಲ್ಲವೂ ಅನಿರೀಕ್ಷಿತ–ಆಕಸ್ಮಿಕ.

ಕರ್ನಾಟಕ ಭೂಷಣ ಹಾಗೂ ವಿಶ್ವೇಶ್ವರಯ್ಯ ಮತ್ತು ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಪ್ರಕಾಶ ತಪಶೆಟ್ಟಿಯವರ 73ನೇ ಹುಟ್ಟು ಹಬ್ಬ ಇಂದು(ಮೇ.6) ಸರಳ ರೀತಿಯಲ್ಲಿ ಜರುಗುತ್ತಿದೆ. ಸಹಕಾರ, ಕ್ರೀಡೆ, ವ್ಯಾಪಾರ ಯಾವುದೇ ಕ್ಷೇತ್ರವಿರಲಿ ಅಲ್ಲಿ ಪ್ರಕಾಶ ತಪಶೆಟ್ಟಿಯವರ ಹೆಜ್ಜೆ ಗುರುತು ಮೂಡಿರುತ್ತದೆ. ಉತ್ತಮ ಸಹಕಾರಿ, ಸಮಾಜ ಸೇವೆ, ಕಾರ್ಯಕರ್ತ, ಶಿಕ್ಷಣ ಹಾಗೂ ಕೃಷಿ ಪ್ರೇಮಿಗಳಾದ ಪ್ರಕಾಶರವರು ಬಾಗಲಕೋಟೆಯ ಈಶ್ವರಪ್ಪ–ಮಹಾನಂದಾ ದಂಪತಿ ಪುತ್ರರಾಗಿ 1953 ಮೇ 6 ರಂದು ಜನಿಸಿದರು.

1985 ರಿಂದ 1988 ರವರಗೆ ನಗರಸಭೆ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಉತ್ತಮ ಆಡಳಿತ ಹಾಗೂ ಜನತೆಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿದ್ದಕ್ಕಾಗಿ ನಗರ ಸಭೆಗೆ ಎರಡು ಬಾರಿ ರಾಜ್ಯ ಪ್ರಶಸ್ತಿ ಲಭಿಸುವಂತೆ ಮಾಡಿದ ಖ್ಯಾತಿ ಇವರದು. ಬಿ.ಟಿ.ಡಿ.ಎ ಸಭಾಪತಿಗಳಾಗಿ, ಸಂತ್ರಸ್ತರ ಮನೆ ಮನೆಗೆ ಹೋಗಿ ಪರಿಹಾರಧನದ ಚೆಕ್ ವಿತರಿಸಿದ್ದು ಸಂತ್ರಸ್ತರ ಸಮಸ್ಯೆಗಳಿಗೆ ಸ್ಪಂದಿಸಿ ಮಾನವೀಯತೆ ಮೆರೆದಿದ್ದಾರೆ.

1993 ರಿಂದ ಕರ್ನಾಟಕದ ಪ್ರತಿಷ್ಠಿತ ಶ್ರೀ ಬಸವೇಶ್ವರ ಸಹಕಾರಿ ಬ್ಯಾಂಕಿನ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಲ್ಪಾವಧಿಯಲ್ಲಿ 27 ಶಾಖೆಗಳನ್ನು ಆರಂಭಿಸಿದಲ್ಲದೆ, ಪ್ರಧಾನ ಕಚೇರಿ ಸೇರಿದಂತೆ ಎಲ್ಲಾ ಶಾಖೆಗಳನ್ನು ಗಣಕೀಕರಣಗೊಳಿಸಿದ್ದು ಉತ್ತರ ಕರ್ನಾಟಕದ ಮೊಟ್ಟ ಮೊದಲಿಗೆ ಕೋರ ಬ್ಯಾಂಕಿಂಗ್, ಂಖಿಒ ಸೇವೆಯನ್ನು ಪ್ರಾರಂಭಿಸಿದ ಕೀರ್ತಿ ಇವರದಾಗಿದೆ. ಮೂರು ದಶಕಗಳಿಂದ ಸಹಕಾರ ಬ್ಯಾಂಕಿನ ಕ್ಷೇತ್ರದಲ್ಲಿ ವೃತ್ತಿಪರತೆ, ಪಾರದರ್ಶಕತೆ, ಉತ್ತರದಾಯಿತ್ವ, ತಾಂತ್ರಿಕತೆ, ಗ್ರಾಹಕ ಸೇವೆ, ಲಾಭದಾಯಕತೆ ಮುಂತಾದ ವಿಷಯಗಳಲ್ಲಿ ಬ್ಯಾಂಕಿಗೆ ಆಧುನಿಕ ಸ್ಪರ್ಶ ನೀಡಿದರು.



ನವನಗರದ ಹೃದಯ ಭಾಗ ಸೆಕ್ಟರ ನಂ.25 ರಲ್ಲಿ ವಿಶಾಲವಾದ ಜಾಗೆಯಲ್ಲಿ ಅತ್ಯಂತ ಸುಂದರವಾದ ಹಾಗೂ ಬೃಹತ್ ಪ್ರಧಾನ ಕಚೇರಿಯನ್ನು ಸ್ಥಾಪಿಸಬೇಕೆಂಬ ತಪಶೆಟ್ಟಿಯವರ ಕನಸು ನನಸಾಗಿದೆ. ಬ್ಯಾಂಕಿನ ಪ್ರಧಾನ ಕಚೇರಿ ಹಾಗೂ ಶಾಖೆಗಳು ಆಧುನಿಕತೆಯ ಎಲ್ಲ ಸೇವಾ ಸೌಲಭ್ಯಗಳನ್ನು ಹೊಂದಿ, ರಾಷ್ಟ್ರೀಕೃತ ಬ್ಯಾಂಕುಗಳಿಗಿಂತಲೂ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸುತ್ತಿರುವುದು ತಪಶೆಟ್ಟಿಯವರ ದೂರ ದೃಷ್ಟಿಗೆ ಸಾಕ್ಷಿಯಾಗಿದೆ.

ಗ್ರಾಹಕರಿಗೆ ಅತ್ಯುತ್ತಮ ಸೇವಾ ಸೌಲಭ್ಯ ನೀಡುವ ದೃಷ್ಟಿಯಿಂದ ಅತ್ಯಾಧುನಿಕ ತಂತ್ರಜ್ಞಾನವನ್ನು ಬ್ಯಾಂಕಿಗೆ ಅಳವಡಿಸಿದ್ದಾರೆ. ಕೋರ್ ಬ್ಯಾಂಕಿಂಗ್ ತಂತ್ರಜ್ಞಾನ, ರಾಜ್ಯದ ಸಹಕಾರ ಬ್ಯಾಂಕುಗಳಲ್ಲಿ ಪ್ರಥಮವಾಗಿ ಎ.ಟಿ.ಎಮ್ ವ್ಯವಸ್ಥೆ ಪ್ರಾರಂಭಿಸಿ, ಯಾವುದೇ ರಾಷ್ಟ್ರೀಕೃತ ವಾಣಿಜ್ಯ ಬ್ಯಾಂಕುಗಳ ಎ.ಟಿ.ಎಮ್‌ಗಳಲ್ಲಿ ಹಾಗೂ ಬೇರೆ ಯಾವುದೇ ಬ್ಯಾಂಕುಗಳ ಎ.ಟ.ಎಮ್ ಕಾರ್ಡನ್ನು ಬ್ಯಾಂಕಿನ ಎ.ಟ.ಎಮ್ ನಲ್ಲಿ ಬಳಸಿ ಹಣ ಪಡೆಯುವ ವ್ಯವಸ್ಥೆ ಮಾಡಿದ್ದಾರೆ. ಐ.ಎಫ್.ಎಸ್.ಸಿ ಕೋಡ, ಆರ್.ಟಿ.ಜಿ.ಎಸ್ ಹಾಗೂ ಎನ್.ಇ.ಎಫ್.ಟಿ ಮುಖಾಂತರ ಹಣ ವರ್ಗಾವಣೆ, ಸಂಪೂರ್ಣ ಗಣಕೀಕೃತ ಸೌಲಭ್ಯ ನೆಟ್ ವರ್ಕ ಬ್ಯಾಂಕಿಂಗ್ ಸೌಲಭ್ಯ ಹೀಗೆ ತಪಶೆಟ್ಟಿಯವರು ಗ್ರಾಹಕರಿಗೆ ಎಲ್ಲ ರೀತಿಯ ಸೌಲಭ್ಯಗಳನ್ನು ಒದಗಿಸಿರುವುದು ಹೆಮ್ಮೆಯ ಸಂಗತಿ.

ಕರ್ನಾಟಕ ಭೂಷಣ ಪ್ರಶಸ್ತಿ (18.01.2004) ವಿಶ್ವೇಶ್ವರಯ್ಯ ಪ್ರಶಸ್ತಿ (14.03.2004) 'ಸಹಕಾರಿ ರತ್ನ' ಪ್ರಶಸ್ತಿ (14.11.2012) ಪಡೆದಿರುವ ತಪಶೆಟ್ಟಿ, ಬಾಗಲಕೋಟ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ, ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಮನೆ, ಮಠ ಕಳೆದುಕೊಂಡ ಸಂತ್ರಸ್ತರ ನೋವಿಗೆ ಸ್ಪಂದಿಸಿದ್ದಾರೆ. ರಾಷ್ಟ್ರ ಪ್ರಶಸ್ತಿ ವಿಜೇತ ಬಾಗಲಕೋಟ ತುರಾಯಿ ಹಲಗೆ ಮೇಳ ಸಮಿತಿ ಅಧ್ಯಕ್ಷರಾಗಿ, ಕೇರಳದ ಓಣಂ ಉತ್ಸವ ಹಾಗೂ ದಿಲ್ಲಿಯ ಹೂಗಳ ಹಬ್ಬದಲ್ಲಿ ಪಾಲ್ಗೊಂಡು ಪ್ರಥಮ ಬಹುಮಾನ ಪಡೆದಿದ್ದಾರೆ. ರಾಜ್ಯ ಉಪಾಧ್ಯಕ್ಷರಾಗಿದ್ದ ಅವಧಿಯಲ್ಲಿ ರಾಜ್ಯ, ರಾಷ್ಟ್ರ ಮಟ್ಟದ ಹಾಕಿ ಪಂದ್ಯಾವಳಿ ಹಾಗೂ ಅಥ್ಲೆಟಿಕ್ ಕ್ರೀಡಾಕೂಟಗಳನ್ನು ಏರ್ಪಡಿಸಿದ್ದಾರೆ.

09.04.2025 ರಿಂದ 20.04.2025 ರವರೆಗೆ ಸಹಕಾರಿ ಕ್ಷೇತ್ರದ ವಿಶೇಷ ಅಧ್ಯಯನಕ್ಕಾಗಿ ಡಿ.ಸಿ.ಸಿ ಬ್ಯಾಂಕಿನಿಂದ ಮಲೇಶಿಯಾ, ವಿಯೆಟನಾಮ, ಕಾಂಬೋಡಿಯಾ ದೇಶಗಳ ಪ್ರವಾಸ ಕೈಗೊಂಡು ಅಲ್ಲಿನ ಕೃಷಿ ಹೈನುಗಾರಿಕೆಯನ್ನು ಮೆಚ್ಚಿ ಅದನ್ನು ಕಾರ್ಯರೂಪದಲ್ಲಿ ತರುವಲ್ಲಿ ನಿರತರಾಗಿದ್ದಾರೆ.

ಪ್ರಕಾಶ ತಪಶೆಟ್ಟಿಯವರಿಗೆ ಭಗವಂತನು ಆಯುರಾರೋಗ್ಯ, ಭಾಗ್ಯ ಕರುಣಿಸಿ ಮತ್ತಷ್ಟು ಜನಸೇವೆ ಮಾಡಲು ದೇವರು ಆಶೀರ್ವದಿಸಲಿ ಎಂಬುದು ಎಲ್ಲರ ಆಶಯ.



ಮಹಾಬಳೇಶ್ವರ
ಎಸ್. ಗುಡಗುಂಟಿ ಬಾಗಲಕೋಟೆ.

# ಶಿರೂರಿನಲ್ಲಿ ವೈಭವದ

## ಬನಶಂಕರಿದೇವಿ ಮೂರ್ತಿ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.5:ತಾಲೂಕಿನ ಶಿರೂರ ಪಟ್ಟಣದಲ್ಲಿ ಸೋಮವಾರ ಬನಶಂಕರಿದೇವಿ ನೂತನ ಮೂರ್ತಿಯ ಮೆರವಣಿಗೆ ಸಂಭ್ರಮದಿಂದ ಜರುಗಿತು.

ಬೆಳಿಗ್ಗೆ 9ಗಂಟೆಗೆ ಸ್ಥಳೀಯ ಸಿದ್ದೇಶ್ವರ ಪ್ರೌಢಶಾಲೆಯ ಆವರಣದಿಂದ ಹೊರಟ ಬನಶಂಕರಿದೇವಿ ಮೂರ್ತಿಯ ಮೆರವಣಿಗೆಗೆ ಶಿವಯೋಗಾಶ್ರಮದ ಸಿದ್ಧಲಿಂಗ ಸ್ವಾಮೀಜಿ ಹಾಗೂ ಗುಳೇದಗುಡ್ಡದ ದೇವಾಂಗಮಠದ ಚಿದಾನಂದ ಸ್ವಾಮೀಜಿ ಚಾಲನೆ ನೀಡಿದರು.

ಅಲ್ಲಿಂದ ಹೊರಟ ಮೆರವಣಿಗೆ ನಗರದ ಪ್ರಮುಖ ಬೀದಿಗಳಲ್ಲಿ ಹಾಯ್ದು ನೇಕಾರ ಪೇಟೆಯಲ್ಲಿರುವ ಬನಶಂಕರಿ ದೇವಸ್ಥಾನಕ್ಕೆ ತಲುಪಿತು. ನವದುರ್ಗಿಯರು ಹಾಗೂ ಗಣಪತಿ, ಸರಸ್ವತಿ, ಲಕ್ಷ್ಮೀದೇವಿ ವೇಷ ಭೂಷಣ ತೊಟ್ಟ ಮಕ್ಕಳು ಮೆರವಣಿಗೆಯಲ್ಲಿ ಗಮನ ಸೆಳೆದರು.

ಕುಂಭ ಹೊತ್ತ ಹಾಗೂ ಕಳಸಾರತಿ ಹಿಡಿದು ಸಾಗಿದ 350ಕ್ಕೂ ಹೆಚ್ಚು ಮಹಿಳೆಯರು, ಭಟ್ಕಳದ ಚಂಡಿ ವಾದ್ಯ, ಮುದ್ದೇಬಿಹಾಳ ತಾಲ್ಲೂಕಿನ ಗಣಿಯ ಗೊಂಬೆಗಳ ಕುಣಿತ, ಸ್ಥಳೀಯ ಡೊಳ್ಳು ಮೇಳಗಳು ಮೆರವಣಿಗೆಗೆ ಕಳೆ ತಂದವು.

ದೇವಾಂಗ ಸಮಾಜ, ಬನಶಂಕರಿದೇವಿ ಜೀರ್ಣೋದ್ಧಾರ ಸಮಿತಿ ಮತ್ತು ಸಿದ್ಧಲಿಂಗೇಶ್ವರ ನೇಕಾರ ಸಹಕಾರ ಸಂಘದ ಸಹಯೋಗದಲ್ಲಿ ನಡೆದ ಮೆರವಣಿಗೆಯಲ್ಲಿ ದೇವಾಂಗ ಸಮಾಜದ ಅಧ್ಯಕ್ಷ ಕಾಶಪ್ಪಗೌಡ ಪ್ಯಾಟಿಗೌಡ್ರ, ಪ್ರಮುಖರಾದ ಅಮಾತೆಪ್ಪ ಕೊಪ್ಪಳ, ಚಂದ್ರಕಾಂತ ಶೇಖಾ, ಗೋಪಾಲ ವನಕಿ, ಸಿದ್ದಪ್ಪ ಕೋಟಿಕಲ್, ಸುರೇಶ ದೇಸಾಯಿ, ರಂಗಪ್ಪ ಮಳ್ಳಿ, ರಾಜಶೇಖರ ಅಂಗಡಿ, ಅರ್ಜುನ ಅಂಗಡಿ, ಸಿದ್ದಪ್ಪ ಗಾಳಿ, ಕಲ್ಲಪ್ಪ ಭಗವತಿ, ಲಕ್ಷ್ಮಣ ಬದಾಮಿ ಸೇರಿ ನೇಕಾರ ಸಮಾಜದ ಮುಖಂಡರು, ಯುವಕರು, ಮಹಿಳೆಯರು ಪಾಲ್ಗೊಂಡಿದ್ದರು.



ಬಾಗಲಕೋಟೆ:ಸೋಮವಾರದಿಂದ ಆರಂಭವಾದ ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮಗ್ರ ಸಮೀಕ್ಷೆಗೆ ನವನಗರದ ಸೆಕ್ಟರ ನಮ.16ರ ಮತಗಟ್ಟೆ ಸಂ.151 ರಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಚಾಲನೆ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಸೈರಾಬಾನು ನದಾಫ್ ಸೇರಿದಂತೆ ಮಾಸ್ಟರ ಟ್ರೈನರ್, ಮೇಲ್ವಿಚಾರಕ ಹಾಗೂ ಸಮೀಕ್ಷೆದಾರರು ಇದ್ದರು.

# ಒಳಮೀಸಲಾತಿ ಸಮೀಕ್ಷೆಗೆ ಸಚಿವ ತಿಮ್ಮಾಪೂರ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.5– ಜಿಲ್ಲೆಯಾದ್ಯಂತ ಮೇ 5 ರಿಂದ 17 ರವರೆಗೆ ನಡೆಯಲಿರುವ ಪರಿಶಿಷ್ಟಜಾತಿಯ ಒಳಮೀಸಲಾತಿ ಸಮೀಕ್ಷೆಗೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಜಮಖಂಡಿ ತಾಲೂಕಿನ ಕೊಣ್ಣೂರು ಗ್ರಾಮದಲ್ಲಿ ಸೋಮವಾರ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ತಿಮ್ಮಾಪೂರ, ಗೌರವಾನ್ವಿತ ಜಸ್ಟೀಸ್ ನಾಗಮೋಹನದಾಸ್ ಏಕಸದಸ್ಯ ವಿಚಾರಣಾ ಆಯೋಗದ ಶಿಫಾರಸ್ಸಿನಂತೆ ರಾಜ್ಯಾದ್ಯಂತ ಪರಿಶಿಷ್ಟಜಾತಿಯ ಒಳಮೀಸಲಾತಿಯ ನಿಖರ ಮಾಹಿತಿಗಾಗಿ ಸಮಗ್ರ ಸಮೀಕ್ಷೆ ಕೈಗೊಳ್ಳಲಾಗಿದೆ. ಸಮೀಕ್ಷಾದಾರರು ಮನೆ ಮನೆಗಳಿಗೆ ಬರಲಿದ್ದು, ಸಮಗ್ರ ಮಾಹಿತಿಯನ್ನು ಒದಗಿಸುವಂತೆ ಪರಿಶಿಷ್ಟ ಜಾತಿಯ ಜನರಲ್ಲಿ ಕೋರಿದರು.

ಪರಿಶಿಷ್ಟ ಜಾತಿ ಪಟ್ಟಿಯಲ್ಲಿನ ಜಾತಿಗಳಿಗೆ ನ್ಯಾಯಯುತ ಪ್ರಾತಿನಿಧ್ಯ ನೀಡಿ ಒಳ ಮೀಸಲಾತಿ ಜಾತಿ ಮಾಡಲು ಸರಕಾರ ಬದ್ದವಾಗಿದೆ. ಉಪ ಜಾತಿಗೆ ಅನುಗುಣವಾಗಿ ಮೀಸಲಾತಿ ಹಂಚಿಕೆ ಸೌಲಭ್ಯ ನೀಡುವ ಸಲುವಾಗಿ ಸಮೀಕ್ಷೆ ನಡೆಸಲಾಗುತ್ತಿದೆ. ಸಮೀಕ್ಷೆಯ ವೇಳೆಯಲ್ಲಿ ಪರಿಶಿಷ್ಟ ಜಾತಿಯವರು ತಮ್ಮ ಮೂಲ ಜಾತಿ, ಶಿಕ್ಷಣ, ವರಮಾನ, ಉದ್ಯೋಗ ಮತ್ತು ಇನ್ನಿತರ ಮಾಹಿತಿಯನ್ನು ತಪ್ಪದೇ ನೀಡಬೇಕು. ಸಮೀಕ್ಷೆಗೆ ಬರುವ ಸಮೀಕ್ಷೆದಾರರಿಗೆ ಸಹಕಾರ ನೀಡಬೇಕು ಎಂದು ಸಚಿವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಮಖಂಡಿ ಶಾಸಕ ಜಗದೀಶ ಗುಡಗುಂಟಿ, ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಕ್ಷೇತ್ರ ಶಿಕ್ಷಣಾಧಿಕಾರಿ ಎ.ಕೆ.ಬಸಣ್ಣವರ ಸೇರಿದಂತೆ ಸಮೀಕ್ಷಾದಾರರ ತಂಡದ ಸದಸ್ಯರು ಉಪಸ್ಥಿತರಿದ್ದರು.

# ಕ್ರೀಡೆಗಳಿಂದ ಸದೃಢ ವ್ಯಕ್ತಿತ್ವ :ಡಾ.ಅರುಣಕುಮಾರ ಗಾಳಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.5:ಕ್ರೀಡೆಗಳಲ್ಲಿ ಸೋಲುಗೆಲುವು ಮುಖ್ಯವಲ್ಲ, ಸ್ಪರ್ಧೆ ಮಾಡುವ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು. ಇದರಿಂದ ಸದೃಢ ವ್ಯಕ್ತಿತ್ವ ರೂಪಗೊಳ್ಳಲು ಸಾಧ್ಯವಾಗುತ್ತದೆ ಎಂದು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.



ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರೀಡಾ ವಿಭಾಗದ ಆಶ್ರಯದಲ್ಲಿ ಸೋಮವಾರ ನಡೆದ 2024–25 ನೆಯ ಸಾಲಿನ ವಾರ್ಷಿಕ ಕ್ರೀಡಾಕೂಟಕ್ಕೆ ಬಲೂನ್ ಹಾರಿ ಬಿಡುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಮೊಬೈಲ್‌ಗೆ ನೀಡುವ ಸಮಯವನ್ನು ಕ್ರೀಡೆಗಳಿಗೆ ನೀಡಿದರೆ ಬೌದ್ಧಿಕ ಮತ್ತು ಭೌತಿಕವಾದ ಆರೋಗ್ಯಕರ ಸಾಮರ್ಥ್ಯ ಹೆಚ್ಚುತ್ತದೆ ಎಂದರು.

ಸದೃಢ ಯುವಸಮೂಹದಿಂದ ಸದೃಢ ಸಮಾಜ ನಿರ್ಮಾಣ ಆಗುತ್ತದೆ. ಪದವಿ ಮಟ್ಟದಲ್ಲಿ ನಡೆಯುವ ಅಥ್ಲೆಟಿಕ್ ಕ್ರೀಡೆಗಳಲ್ಲಿ ಸ್ಪರ್ಧಿಸಿ ವಿಶ್ವವಿದ್ಯಾಲಯ ಮಟ್ಟದ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡುವ ಮೂಲಕ ಕ್ರೀಡಾ ಮೀಸಲಾತಿಯಡಿಯಲ್ಲಿ ಉದ್ಯೋಗಾವಕಾಶದ ಸದುಪಯೋಗವನ್ನು ಪಡೆದು, ಆದರ್ಶ ಬದುಕು ಕಟ್ಟಿಕೊಳ್ಳಬೇಕೆಂದು ಡಾ.ಗಾಳಿ ಹೇಳಿದರು.

ಕ್ರೀಡಾ ವಿಭಾಗದ ನಿರ್ದೇಶಕ ನೀಲಪ್ಪ ಕುರಿ ಮಾತನಾಡಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪದವಿ ಕಲಿಯುವ ವಿದ್ಯಾರ್ಥಿಗಳಿಗೆ ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾ ಕ್ಷೇತ್ರದಲ್ಲಿ ಸಾಕಷ್ಟು ಅವಕಾಶಗಳಿವೆ. ಪ್ರಸಕ್ತ ಸಾಲಿನಲ್ಲಿ ನಮ್ಮ ಕಾಲೇಜಿನ ವಿವಿಧ ಕ್ರೀಡೆಗಳಲ್ಲಿ ಹತ್ತು ವಿದ್ಯಾರ್ಥಿಗಳು ಜಮಖಂಡಿಯ ಬಾಗಲಕೋಟೆ ವಿಶ್ವವಿದ್ಯಾಲಯದ ಬ್ಲೂ ಆಗಿ ಆಯ್ಕೆಯಾಗಿದ್ದಾರೆ. ಇವರಂತೆ ಸಾಧಕರಾಗಲು ಇನ್ನುಳಿದ ವಿದ್ಯಾರ್ಥಿಗಳು ಸಹ ಕ್ರೀಡಾಕ್ಷೇತ್ರದಲ್ಲಿ ಸ್ಪರ್ಧಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು, ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಮೇ 7 ರಂದು ಅಸಮತೋಲನ ನಿವಾರಣಾ ಸಮಿತಿಯ ಜಿಲ್ಲಾ ಮಟ್ಟದ ಸಂವಾದ ಸಭೆಗೆ ಸೂಚನೆ

ಯಾದಗಿರಿ : ಮೇ 05 : ಯಾದಗಿರಿ ಜಿಲ್ಲೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಜಿಲ್ಲಾ ಮಟ್ಟದ ಸಂವಾದ ಸಭೆಯು 2025ರ ಮೇ 7 ರಂದು ಬೆಳಿಗ್ಗೆ 11 ಗಂಟೆಗೆ ಯಾದಗಿರಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ತಿಳಿಸಿದ್ದಾರೆ. 2023ರ ಬೆಳಗಾವಿ ಅಧಿವೇಶನದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಕರ್ನಾಟಕ ಸರ್ಕಾರ ಘೋಷಿಸಿದಂತೆ ಡಾ.ಡಿ.ಎಂ.ನಂಜುಂಡಪ್ಪ ವರದಿ ಅನುಷ್ಠಾನದಿಂದ ತಾಲೂಕುಗಳ ಅಭಿವೃದ್ಧಿ ಹೊಂದಿರುವ ಬಗ್ಗೆ ಹಾಗೂ ಅಭಿವೃದ್ಧಿ ಹೊಂದದೆ ಇರುವ ತಾಲೂಕುಗಳನ್ನು ಗುರುತಿಸಿ ಹೊಸದಾಗಿ ಸೂಚ್ಯಾಂಕವನ್ನು ಕಂಡುಹಿಡಿದು ಪ್ರಾದೇಶಿಕ ಅಸಮತೋಲನವನ್ನು ನಿವಾರಣೆ ಮಾಡಲು ರಾಜ್ಯ ಸರ್ಕಾರವು ಪ್ರೋ.ಎಂ.ಗೋವಿಂದ ರಾವ್ ಆರ್ಥಿಕ ತಜ್ಞರು ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನಾ ನಿವಾರಣಾ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯು ಜಿಲ್ಲಾ ಮಟ್ಟದ ಸಂವಾದ ಸಭೆಯನ್ನು ನಡೆಸಲು ನಿರ್ಧರಿಸಿದೆ, ಅದರಂತೆ 2025ರ ಮೇ 7ರ ಬುಧವಾರ ರಂದು ಯಾದಗಿರಿ ಜಿಲ್ಲೆಗೆ ಕ್ಷೇತ್ರ ಭೇಟಿ ನೀಡಿ ಪ್ರಾಥಮಿಕ ಹಂತದ ಮಾಹಿತಿ, ಡಾಟಾಗಳನ್ನು ಕಲೆ ಹಾಕಲು ಸಮಿತಿ ಸದಸ್ಯ ಕಾರ್ಯದರ್ಶಿಗಳು ಡಾ.ವಿಶಾಲ್ ರಾವ್ ಐ.ಎ.ಎಸ್ (ಮಾನ್ಯ ಸರ್ಕಾರದ ಕಾರ್ಯದರ್ಶಿಗಳು ವಿತ್ತೀಯ ಸುಧಾರಣೆ ಮತ್ತು ಯೋಜನೆ ಇಲಾಖೆ) ಹಾಗೂ ಸದಸ್ಯರಾದ ಶ್ರೀ ಎಸ್.ಟಿ ಬಾಗಲಕೋಟಿ ಮತ್ತು ಶ್ರೀಮತಿ ಸಂಗೀತಾ ಕೆ.ಎಸ್ ಅವರ ಭೇಟಿ ನೀಡುವುದರಿಂದ ಉಲ್ಲೇಖಿತ ಸಭಾ ಸೂಚನಾ ಪತ್ರದನ್ವಯ ಅಂದು ಸಭೆಯನ್ನು ಯಾದಗಿರಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಿಗದಿಪಡಿಸಲಾಗಿದೆ.

ಈ ಸಭೆಗೆ ಅಂದು ಜಿಲ್ಲೆಯ ಜನ ಪ್ರತಿನಿಧಿಗಳು ಹಾಗೂ ಛೇಂಬರ್ ಆಫ್ ಕಾಮರ್ಸ್ ಪ್ರತಿನಿಧಿಗಳು ಮತ್ತು ಸಂಘ ಸಂಸ್ಥೆ ಪ್ರತಿನಿಧಿಗಳು ಹಾಜರಾಗಬೇಕು. ಅಂದು ಸಭೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ತಮ್ಮ ಪ್ರತಿನಿಧಿಯನ್ನು ನಿಯೋಜಿಸದೇ ತಾವೇ ಖುದ್ದಾಗಿ ಕಡ್ಡಾಯವಾಗಿ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

